ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೪

ಪಟ್ಟಿ – ೦೨

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ನಾಲ್ಕನೇಯ ಅಧಿವೇಶನ

ಮಂಗಳವಾರ, ದಿನಾಂಕ : ೧೦ನೇ ಡಿಸೆಂಬರ್, ೨೦೨೪

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ಸಹಕಾರ ಸಚಿವರು

೭. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

---

## ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿವೇಶನ ಹಂಚಿಕೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೫ (೨೩೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರಿನ ಮುಡಾ ಹಗರಣ ಪ್ರಕರಣದಲ್ಲಿ ಮೇಲ್ನೋಟಕ್ಕೆ ವ್ಯಾಪಕ ಭ್ರಷ್ಟಾಚಾರ ನಡೆದಿದ್ದರೂ ಸರ್ಕಾರ ಈವರೆಗೆ ಈ ಪ್ರಕರಣವನ್ನು CBI ಗೆ ವಹಿಸದಿರಲು ಕಾರಣಗಳೇನು ;

(ಆ) ರಾಜ್ಯದ ಯಾವ ಯಾವ ವ್ಯಕ್ತಿಗಳು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಬದಲಿ ನಿವೇಶನವನ್ನು ಹೊಂದಿದ್ದಾರೆ ; ನಿವೇಶನ ಮಂಜೂರಾದ ವರ್ಷ, ಬದಲಿ ನಿವೇಶನ ಮಂಜೂರಾದ ವಿವರ ಹಾಗೂ ಇತ್ಯಾದಿ ಮಾಹಿತಿಗಳನ್ನು ನೀಡುವುದು ;

(ಇ) ಬದಲಿ ನಿವೇಶನ ಹಂಚಿಕೆಗಳಲ್ಲಿ ಭ್ರಷ್ಟಾಚಾರ ನಡೆದಿರುವುದು ಕಂಡು ಬಂದಲ್ಲಿ, ಅಂತಹ ನಿವೇಶನಗಳನ್ನು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ವಾಪಸ್ಸು ಪಡೆಯಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ ಕಬ್ಬು ಬೆಳೆಗಾರರ ಸಮಸ್ಯೆಗಳ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೬ (೨೩೬) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಬ್ಬು ಬೆಳೆಗಾರರು ಪಡೆದಿರುವ ಸಾಲ ಪಾವತಿಸದೆ ಸುಸ್ತಿದಾರರಾಗಿದ್ದಲ್ಲಿ, ಅಂಥವರ ವಿರುದ್ಧ ದಾವೆ ದಾಖಲಿಸಲು ಸರ್ಕಾರ ಆದೇಶಿಸಿದೆಯೇ ;

(ಆ) ಮಳೆ ಕೊರತೆ, ಅತಿವೃಷ್ಟಿಯಂತಹ ಸಮಸ್ಯೆಗಳಿಗೆ ನಷ್ಟ ಹಾಗೂ ಕಬ್ಬು ಬೆಳೆಗೆ ವೈಜ್ಞಾನಿಕ ಬೆಲೆ ನಿಗಧಿ ಮಾಡದಿರುವುದು ಕಬ್ಬು ಬೆಳೆಗಾರರನ್ನು ಆತಂಕಕ್ಕೀಡು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಇ) ಸರ್ಕಾರ ಕೂಡಲೇ ಮಧ್ಯ ಪ್ರವೇಶಿಸಿ ಸುಸ್ತಿದಾರ ಕಬ್ಬು ಬೆಳೆಗಾರರ ಮೇಲೆ ದಾವೆ ಹೂಡುವ ಆದೇಶವನ್ನು ಹಿಂಪಡೆಯುವುದೇ ?

## ಘನತ್ಯಾಜ್ಯ ವಿಲೇವಾರಿ ನಿರ್ವಹಣೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೭ (೨೩೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ನಗರ ಸೇರಿದಂತೆ ರಾಜ್ಯದ ನಗರಗಳಲ್ಲಿ ದಿನನಿತ್ಯ ಘನತ್ಯಾಜ್ಯ ಪ್ರಮಾಣವೆಷ್ಟು ಹಾಗೂ ಇದರ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಘನತ್ಯಾಜ್ಯ ನಿರ್ವಹಣೆಯ ಬಗ್ಗೆ ಬಹಳಷ್ಟು ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರಿಸುವುದು)

## ರಾಜ್ಯ ಉನ್ನತ ಮಟ್ಟದ ಸಮಿತಿಯ ಕೈಗಾರಿಕೆ ಯೋಜನೆಗಳ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೧೮ (೨೨೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರಾಜ್ಯ ಉನ್ನತ ಮಟ್ಟದ ಸಮಿತಿಯು ಯಾವ ಯಾವ ಕೈಗಾರಿಕಾ ಯೋಜನೆಗಳಿಗೆ ಮಂಜೂರಾತಿ ನೀಡಿದೆ ; ಕಾರ್ಯಾರಂಭವಾಗಿರುವ ಯೋಜನೆಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ಕಾರ್ಯ ಪ್ರಗತಿಯಲ್ಲಿರುವ ಯೋಜನೆಗಳು ಯಾವುವು ; ಅನುಷ್ಠಾನಗೊಂಡಿರುವ ಯೋಜನೆಗಳು ಯಾವುವು ;

(ಇ) ರಾಜ್ಯದಲ್ಲಿ ಬಂಡವಾಳ ಆಕರ್ಷಿಸಲು ಕಾಂಪಿಟ್ ವಿತ್ ಚೈನಾ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ಯಾವುದೇ ಪ್ರಗತಿ ಕಂಡು ಬಂದಿಲ್ಲದಿರುವುದು ನಿಜವೇ ; ಈ ಯೋಜನೆಯು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಈ) ರಾಜ್ಯ ಏಕಗವಾಕ್ಷಿ ಸಮಿತಿಯು ಕಳೆದ ೧೦ ವರ್ಷಗಳಲ್ಲಿ ೫೬ ಯೋಜನೆಗಳಿಗೆ ಮಂಜೂರಾತಿ ನೀಡಿದ್ದು, ಅವುಗಳಲ್ಲಿ ೨೩ ಘಟಕಗಳು ಕಾರ್ಯಾರಂಭ ಮಾಡಿದ್ದು, ಇವುಗಳಲ್ಲಿ ೨೬೦.೭೧ ಬಂಡವಾಳ ಹೂಡಿಕೆಯಾ ೧೮ ಯೋಜನೆಗಳು ಅನುಷ್ಠಾನದ ಹಂತದಲ್ಲಿರುವುದರಿಂದ ಉಳಿದ ೧೬ ಯೋಜನೆಗಳು ಅನುಷ್ಠಾನದಿಂದ ಹಿಂದೆ ಸರಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ?

## ಗಣಿ ಗುತ್ತಿಗೆದಾರರಿಂದ ಸರ್ಕಾರಕ್ಕೆ ತೆರಿಗೆ ವಂಚನೆ ಮಾಡಿರುವ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೧೯ (೧೭೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2007 ರಿಂದ 2024ರವರೆಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಗಣಿ ಉತ್ಪಾದನೆ ಹಾಗೂ ಸಾಗಾಟ ಮಾಡಿ ಸರ್ಕಾರಕ್ಕೆ ನೀಡಿರುವ ತೆರಿಗೆ ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಗಣಿ ಗುತ್ತಿಗೆದಾರರಿಂದ ಸರ್ಕಾರಕ್ಕೆ ತೆರಿಗೆ ನೀಡದೆ ಗಣಿ ಉತ್ಪಾದನೆಯನ್ನು ಕಳ್ಳ ಸಾಗಾಣಿಕೆ ಮಾಡುವಾಗ ಅಧಿಕಾರಿಗಳಿಗೆ ಸಿಕ್ಕಿರುವ ಗಣಿ ಗುತ್ತಿಗೆದಾರರ ಕಂಪನಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅಂತಹ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಶಿಸ್ತು ಕ್ರಮವನ್ನು ಕೈಗೊಂಡಿದೆ ಮತ್ತು ಇವರಿಂದ ಎಷ್ಟು ದಂಡ ವಸೂಲಾತಿ ಮಾಡಲಾಗಿದೆ ?

## ಮಾಹಿತಿ ನೀಡಲು ವಿಳಂಬ ಧೋರಣೆ ತೋರುತ್ತಿರುವ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೧೨೦ (೨೧೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ ಜಿಲ್ಲೆ, ಹುಮನಾಬಾದ ಪಟ್ಟಣದ ಸರ್ವೆ ನಂ: 474ರ ಕಟ್ಟಡ ಪರವಾನಿಗೆ ಮತ್ತು ಹಕ್ಕು ಬದಲಾವಣೆಯ ಅಧಿಕೃತ ಸಂಪೂರ್ಣ ದಾಖಲೆಗಳೊಂದಿಗೆ ಮಾಹಿತಿ ನೀಡಲು ಜಿಲ್ಲೆಯ ಸಂಬಂಧಪಟ್ಟ ಅಧಿಕಾರಿಗಳು/ ತಾಲ್ಲೂಕು ಅಧಿಕಾರಿಗಳು ಮಾಹಿತಿ ನೀಡದೇ ಇರಲು ಕಾರಣವೇನು ;

(ಆ) ಸರ್ವೆ ನಂ: 474ರ ಸಂಪೂರ್ಣ ಆಸ್ತಿಯ ಮಾಹಿತಿ ನೀಡಲು ಕ್ರಮ ಕೈಗೊಳ್ಳುವುದೇ ;

(ಇ) ಈ ಕಟ್ಟಡದ ದಾಖಲೆ ನೀಡಲು ವಿಳಂಬ ಧೋರಣೆ ತೋರುತ್ತಿರುವ ಅಧಿಕಾರಿಗಳ ಮೇಲೆ ತೆಗೆದುಕೊಳ್ಳುವ ಕ್ರಮ ಹಾಗೂ ಯಾವ ಕಾಲಮಿತಿಯೊಳಗೆ ದಾಖಲೆ ನೀಡಲಾಗುವುದು ;

(ಈ) ಈ ಕೊಟ್ಯಾಂತರ ರೂಪಾಯಿ ಬೆಲೆ ಬಾಳುವ ಆಸ್ತಿಯಾಗಿರುವ ಈ ಕಟ್ಟಡದ ಆಸ್ತಿ ಬಗ್ಗೆ ಸರ್ಕಾರ ನಿಷ್ಕಾಳಜಿ ತೋರಿಸುತ್ತಿರುವುದು ಸರಿಯೇ ?

## ಇ–ಆಸ್ತಿ ವಿತರಣೆಯನ್ನು ಸಕಾಲದಲ್ಲಿ ಮಾಡುವ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೧೨೧ (೧೫೧) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನೋಂದಣಿ ಮತ್ತು ಇತರೆ ವಹಿವಾಟುಗಳಿಗೆ ಇ–ಆಸ್ತಿ ಕಡ್ಡಾಯ ಮಾಡಿದ ನಂತರ ಇ–ಆಸ್ತಿಗಾಗಿ ಅರ್ಜಿ ಸಲ್ಲಿಸುವವರ ಸಂಖ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇ–ಆಸ್ತಿ ನಿಗಧಿತ ಅವಧಿಯಲ್ಲಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) 2020 ರಿಂದ ಇಲ್ಲಿಯವರೆಗೆ ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗೆ ಪರಿವರ್ತನೆಯಾದ ನಗರ ಸ್ಥಳೀಯ ಸಂಸ್ಥೆಗಳು ಯಾವುವು ;

(ಇ) ಸದರಿ ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ಗ್ರಾಮ ಪಂಚಾಯಿತಿ ವತಿಯಿಂದ ನೀಡಲಾಗಿದ್ದ ಇ–ಸ್ವತ್ತನ್ನು ಇ–ಆಸ್ತಿಯಾಗಿ ಪರಿವರ್ತನೆ ಮಾಡಲು ಆದೇಶಿಸಲಾಗಿದೆಯೇ ; ಆದೇಶಿಸಲಾಗಿದ್ದರೆ, ಆದೇಶದ ಪ್ರತಿ ನೀಡುವುದು ;

(ಈ) ಇಲ್ಲದಿದ್ದಲ್ಲಿ, ಸದರಿ ಇ–ಸ್ವತ್ತನ್ನು ಇ–ಆಸ್ತಿಯನ್ನಾಗಿ ಪರಿವರ್ತಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಉ) 2020 ರಿಂದ ಇಲ್ಲಿಯವರೆಗೆ ಎಷ್ಟು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ–ಸ್ವತ್ತನ್ನು ಇ–ಆಸ್ತಿಯಾಗಿ ಪರಿವರ್ತಿಸಲಾಗಿದೆ ; (ನಗರ ಸ್ಥಳೀಯ ಸಂಸ್ಥೆಗಳ ಹೆಸರು ಮತ್ತು ಪರಿವರ್ತಿಸಲಾದ ಆಸ್ತಿಗಳ ಸಂಪೂರ್ಣ ವಿವರ ನೀಡುವುದು)

(ಊ) ಕೆಲವು ಪುರಸಭೆಗಳು ಉದ್ದೇಶಪೂರ್ವಕವಾಗಿ ಇ–ಆಸ್ತಿಯಾಗಿ ಪರಿವರ್ತನೆ ಮಾಡದೆ ನಾಗರಿಕರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಾಣವಾದ ಕೈಗಾರಿಕಾ ಪ್ರದೇಶಗಳ ಬಗ್ಗೆ

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :–**

೧೨೨ (೨೫೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೆ.ಐ.ಎ.ಡಿ.ಬಿ ಯಾವಾಗ ಅಸ್ತಿತ್ವಕ್ಕೆ ಬಂದಿತು; ಇಲ್ಲಿಯವರೆಗೆ ಕೆ.ಐ.ಎ.ಡಿ.ಬಿ ವತಿಯಿಂದ ರಾಜ್ಯದಲ್ಲಿ ಎಷ್ಟು ಕೈಗಾರಿಕಾ ಪ್ರದೇಶ ಅಭಿವೃದ್ಧಿ ಪಡಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಿಸಿದ ಒಟ್ಟು ನಿವೇಶನಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ನಿವೇಶನ ಹಂಚಿಕೆಯಾಗಿವೆ ; ಹಂಚಿಕೆಯಾಗದೆ ಖಾಲಿಯಿರುವ ನಿವೇಶನಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಕೆ.ಐ.ಎ.ಡಿ.ಬಿ ಯ ಸಿ.ಎ. ನಿವೇಶನಗಳನ್ನು ಯಾವ ಆದಾರದ ಮೇಲೆ ಹಂಚಿಕೆ ಮಾಡಲಾಗುತ್ತದೆ ; ಅದಕ್ಕೆ ಇರುವ ಮಾನದಂಡಗಳೇನು ; ಇಲ್ಲಿಯವರೆಗೆ ರಚನೆಯಾದ ಸಿ.ಎ. ನಿವೇಶನಗಳನ್ನು ಯಾರಿಗೆ ಹಂಚಲಾಗಿದೆ ; ಉಳಿಕೆ ನಿವೇಶನಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ತುಮಕೂರು ಜಿಲ್ಲೆ, ಶಿರಾ ತಾಲ್ಲೂಕಿನಲ್ಲಿ ಎಷ್ಟು ಕೈಗಾರಿಕಾ ಪ್ರದೇಶವಿದೆ ; ಇದರಲ್ಲಿ ಸ್ಥಳೀಯರಿಗೆ ಎಷ್ಟು ನಿವೇಶನ ನೀಡಲಾಗಿದೆ ; ಹೊರ ರಾಜ್ಯದವರಿಗೆ ಎಷ್ಟು ನಿವೇಶನ ನೀಡಲಾಗಿದೆ ; ಇದರಿಂದ ಸೃಷ್ಟಿಯಾದ ಉದ್ಯೋಗಗಳ ಸಂಖ್ಯೆ ಎಷ್ಟು ; (ಇದರಲ್ಲಿ ಹಂಚಿಕೆಯಾದ ಮತ್ತು ಖಾಲಿಯಿರುವ ಸಿ.ಎ ನಿವೇಶನಗಳ ಸಂಪೂರ್ಣ ವಿವರ ನೀಡುವುದು)

(ಉ) ಕೆ.ಐ.ಎ.ಡಿ.ಬಿ ವತಿಯಿಂದ ನಿವೇಶನ ಪಡೆದು ರಾಜ್ಯದಲ್ಲಿ ನಿರ್ಮಾಣವಾದ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗದಲ್ಲಿ ಮೀಸಲಾತಿ ನೀಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಸ್ಥಳೀಯರಿಗೆ ಮೀಸಲಾತಿ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಕೈಗಾರಿಕಾ ಪ್ರದೇಶಕ್ಕೆ ವಶಪಡಿಸಿಕೊಂಡ ಭೂಮಿಗೆ ಪರಿಹಾರವನ್ನು ಯಾವ ರೀತಿಯಲ್ಲಿ ನಿಗದಿ ಪಡಿಸಲಾಗುತ್ತಿದೆ ?

## ಸಣ್ಣ ಕೈಗಾರಿಕೆಗಳಿಗೆ ಸರ್ಕಾರದ ಪ್ರೋತ್ಸಾಹ ಕುರಿತು

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :–**

೧೨೩ (೧೫೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಿರುದ್ಯೋಗಿ ಯುವಕ ಯುವತಿಯರಿಗೆ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆ ಸ್ಥಾಪಿಸಲು ಸರ್ಕಾರದ ವತಿಯಿಂದ ನೀಡುತ್ತಿರುವ ಸೌಲಭ್ಯಗಳೇನು ;

(ಆ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಾರಂಭವಾದ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ; ಸರ್ಕಾರ ಅವುಗಳಿಗೆ ನೀಡಿದ ಪ್ರೋತ್ಸಾಹ ಧನ/ಸಬ್ಸಿಡಿಯ ಮೊತ್ತ/ಸಹಾಯ ಧನವೇನು ;

(ಇ) ಮಾಲಿನ್ಯ ರಹಿತವಾದ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳನ್ನು ವಸತಿ ಪ್ರದೇಶದಲ್ಲಿ ಪ್ರಾರಂಭಿಸಲು ಅವಕಾಶವಿದೆಯೇ ? (ಸಂಬಂಧಿಸಿದ ಆದೇಶ/ಕಾಯ್ದೆಯ ಪ್ರತಿಯನ್ನು ನೀಡುವುದು)

## ಕೆ.ಐ.ಎ.ಡಿ.ಬಿ ವತಿಯಿಂದ ಭೂಸ್ವಾಧೀನ ಕುರಿತು

**ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) :-**

೧೨೪ (೧೫೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆ, ನೆಲಮಂಗಲ ತಾಲ್ಲೂಕು, ಕೊಡಿಗೆಹಳ್ಳಿ, ಕೆಂಚನಾಪುರ ಮತ್ತು ಬಳಗೆರೆ ಗ್ರಾಮಗಳಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಭೂ ಸ್ವಾಧೀನ ಮಾಡಿಕೊಳ್ಳುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವ ಗ್ರಾಮಗಳಲ್ಲಿ ಎಷ್ಟು ಸರ್ವೆ ನಂ. ಗಳನ್ನು ಭೂ ಸ್ವಾಧೀನ ಮಾಡಿಕೊಳ್ಳಲಾಗುವುದು ; (ಸಂಪೂರ್ಣ ವಿವರ ಮತ್ತು ಸ್ಕೆಚ್ ನೀಡುವುದು)

(ಆ) ಸದರಿ ಹಳ್ಳಿಗಳು ಬಹಳ ಫಲವತ್ತಾದ ಭೂಮಿಯನ್ನು ಹೊಂದಿದ್ದು ಭೂ ಸ್ವಾಧೀನದಿಂದ ನೂರಾರು ಎಕರೆ ಅಡಿಕೆ, ತೆಂಗು ಇತರ ಹಣ್ಣಿನ ತೋಟಗಳು ನಾಶವಾಗುವ ಕಾರಣ ಭೂ ಸ್ವಾಧೀನ ವಿರೋಧಿಸಿ ರೈತರು ಮನವಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಗ್ರಾಮಗಳನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡಲಾಗುವುದೇ ;

(ಇ) ಭೂ ಸ್ವಾಧೀನಕ್ಕೆ ಒಳಪಡುವ ರೈತರಿಗೆ ಎಷ್ಟು ಪರಿಹಾರದ ಮೊತ್ತ ನಿಗಧಿಗೊಳಿಸಲಾಗಿದೆ ? (ಗ್ರಾಮವಾರು ವಿವರ ನೀಡುವುದು)

## ಅಡಿಕೆ ಕೊಳೆ ರೋಗ ತಡೆಗಟ್ಟಿ ರೈತರ ಹಿತ ಕಾಪಾಡುವ ಕುರಿತು

**ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೧೨೫ (೧೯೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆ ಸೇರಿದಂತೆ ಅಡಿಕೆ ಬೆಳೆಯುವ ಮಲೆನಾಡು ಪ್ರದೇಶಗಳಲ್ಲಿ ಅಡಿಕೆ ತೋಟಗಳಲ್ಲಿ ಅಡಿಕೆ ಕೊಳೆ ರೋಗ ವ್ಯಾಪಕವಾಗಿ ಕಾಣಿಸಿಕೊಂಡಿದ್ದು, ಅಡಿಕೆ ಬೆಳೆಗಾರರಲ್ಲಿ ಆತಂಕ ಮೂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಡಿಕೆ ಕೊಳೆ ರೋಗ ನಿರ್ಮೂಲನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕೊಳೆ ರೋಗದಿಂದ ಹಾನಿಗೊಳಗಾದ ರೈತರಿಗೆ ಸರ್ಕಾರ ಯಾವ ರೀತಿ ಪರಿಹಾರ ನೀಡಲಿದೆ ? (ವಿವರ ಒದಗಿಸುವುದು)

## ರಾಜ್ಯದಲ್ಲಿ ರಬ್ಬರ್ ಬೆಳೆಗೆ ಪ್ರೋತ್ಸಾಹ ನೀಡುವ ಕುರಿತು

**ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೧೨೬ (೧೯೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರಬ್ಬರ್ ಬೆಳೆಗೆ ನಿಗದಿಪಡಿಸಿರುವ ಬೆಲೆಯಲ್ಲಿ ಗಣನೀಯವಾಗಿ ಇಳಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇರಳ ಸರ್ಕಾರದ ಮಾದರಿಯಲ್ಲಿ ರಬ್ಬರ್ ಬೆಳೆಗಾರರಿಗೆ ಬೆಂಬಲ ಬೆಲೆ ನಿಗದಿಪಡಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ;

(ಇ) ರಬ್ಬರ್ ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪ್ರವಾಸೋದ್ಯಮ ಮತ್ತು ರಕ್ಷಣಾ ಕಾರ್ಯಕ್ಕೆ ಏರ್‌ಸ್ಟ್ರಿಪ್‌ಗಳನ್ನು ನಿರ್ಮಿಸುವ ಬಗ್ಗೆ

**ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೧೨೭ (೨೦೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ಪ್ರವಾಸೋದ್ಯಮ ಮತ್ತು ಉದ್ಯಮ ವಲಯಗಳನ್ನು ಉತ್ತೇಜಿಸಲು ಹಾಗೂ ವಿಪತ್ತು ನಿರ್ವಹಣೆಯ ಸಮಯದಲ್ಲಿ ರಕ್ಷಣಾ ಕಾರ್ಯಗಳಿಗೆ ನೆರವಾಗುವ ಉದ್ದೇಶದಿಂದ ಧರ್ಮಸ್ಥಳ, ಕೊಡಗು ಮತ್ತು ಚಿಕ್ಕಮಗಳೂರಿನ ಹೊಸ ಏರ್‌ಸ್ಟ್ರಿಪ್‌ಗಳನ್ನು ಅಭಿವೃದ್ಧಿಪಡಿಸುವ ಯೋಜನೆಯು ಯಾವ ಹಂತದಲ್ಲಿದೆ ;

(ಆ) ಈ ಯೋಜನೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ಸಂಪೂರ್ಣ ವಿವರ ನೀಡುವುದು)

## ವಿಜಯಪುರ ವಿಮಾನ ನಿಲ್ದಾಣಕ್ಕೆ ಸ್ವಾಧೀನ ಪಡಿಸಿಕೊಂಡಿರುವ ಭೂಮಿ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೮ (೨೧೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ವಿಮಾನ ನಿಲ್ದಾಣ ನಿರ್ಮಿಸಲು ಸರ್ಕಾರ ನೀಡಿರುವ ಒಟ್ಟು ಜಾಗವೆಷ್ಟು ; ವಿಮಾನ ನಿಲ್ದಾಣ ನಿರ್ಮಿಸಲು ಜಾಗವನ್ನು ನೀಡಿದ ರೈತರಿಗೆ ಅಥವಾ ಅವಲಂಬಿತ ಕುಟುಂಬಗಳಿಗೆ ನೀಡಲಾದ ಪರಿಹಾರದ ಮೊತ್ತವೆಷ್ಟು ;

(ಆ) ಈ ಕುಟುಂಬದ ಎಷ್ಟು ಜನರಿಗೆ ಉದ್ಯೋಗ ನೀಡಲಾಗಿದೆ: ನೀಡದಿದ್ದಲ್ಲಿ, ಕಾರಣವೇನು ;

(ಇ) ಸರ್ಕಾರ ನೀಡಿರುವ ಜಾಗದಲ್ಲಿ ಸಂಪೂರ್ಣವಾಗಿ ಎಷ್ಟು ಬಳಕೆ ಮಾಡಲಾಗಿದೆ ; ಬಳಕೆಯಾಗದೇ ಬಾಕಿ ಉಳಿದಿರುವ ಜಾಗವೆಷ್ಟು ;

(ಈ) ವಿಜಯಪುರ ವಿಮಾನ ನಿಲ್ದಾಣದ ಕಾಮಗಾರಿಯು ತುಂಬಾ ನಿಧಾನಗತಿಯಲ್ಲಿ ನಡೆಯುತ್ತಿದ್ದು, ಯಾವ ಕಾಲಮಿತಿಯೊಳಗೆ ಸಂಪೂರ್ಣ ಕಾಮಗಾರಿಯನ್ನು ಮುಕ್ತಾಯಗೊಳಿಸಲಾಗುವುದು ?

## ಸಣ್ಣ ಕೈಗಾರಿಕೆ ವ್ಯಾಪ್ತಿಗೆ ಬರುವ ಉದ್ದಿಮೆಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೯ (೨೧೬) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆ ಉದ್ದಿಮೆಗಳಿಗೆ ಸರ್ಕಾರವು ನೀಡುವ ಸಹಾಯ ಧನ ಯಾವುವು ಮತ್ತು ಎಷ್ಟು ; (ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಿಂದ ಕಲ್ಯಾಣ ಕರ್ನಾಟಕದ ಎಷ್ಟು ಉದ್ದಿಮೆದಾರರಿಗೆ ಸಹಾಯಧನ ಹಂಚಿಕೆ ಮಾಡಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಿರುವ ಯೋಜನೆಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೦ (೨೧೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳಾವುವು ; (ಈ ಸಾಲ ಯೋಜನೆಗಳ ನಿಯಮಗಳ ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಗಳಲ್ಲಿ ಸಹಾಯಧನ ಹೊಂದಿರುವ ಯೋಜನೆಗಳಾವುವು ;

(ಇ) ಈ ಸಾಲ ಯೋಜನೆಗಳ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು ; (ವಿವರ ನೀಡುವುದು)

(ಈ) ರೈತರಿಗೆ ವಾಹನ ಸಾಲ ನೀಡುವ ಯೋಜನೆ ಜಾರಿಯಲ್ಲಿದೆಯೇ ; ಇದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತಿದೆ ಮತ್ತು ಸಬ್ಸಿಡಿ ಹಣವೆಷ್ಟು ನೀಡಲಾಗುತ್ತಿದೆ ? (ವಿವರ ನೀಡುವುದು)

## ಕೆ.ಸಿ. ವ್ಯಾಲಿ ಯೋಜನೆ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೧ (೨೧೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಕೊಳಚೆ ನೀರನ್ನು ಸಂಸ್ಕರಿಸಿ ಕೋಲಾರ ಜಿಲ್ಲೆಯ ಕೆರೆಗಳಿಗೆ ಹರಿಸುವ ಕೆ.ಸಿ. ವ್ಯಾಲಿ ಯೋಜನೆ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಏತ ನೀರಾವರಿ ಮುಖಾಂತರ ಆನೇಕಲ್ ತಾಲ್ಲೂಕಿನಲ್ಲಿ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ; (ವಿವರ ನೀಡುವುದು)

(ಇ) ಆನೇಕಲ್ ತಾಲ್ಲೂಕಿನಲ್ಲಿ ಸುಮಾರು ಕೆರೆಗಳಿಗೆ ನೀರು ತುಂಬಿಸಲಾಗದೇ ಇರಲು ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಕೆ.ಸಿ. ವ್ಯಾಲಿ ಯೋಜನೆಯಡಿ ಎಷ್ಟು ಕಿ.ಮೀ ಉದ್ದದ ಕಾಲುವೆ ನಿರ್ಮಿಸಲಾಗಿದೆ ;

(ಉ) ಈ ಯೋಜನೆಡಿಯಲ್ಲಿ ಏತ ನೀರಾವರಿ ಮುಖಾಂತರ ಆನೇಕಲ್ ವ್ಯಾಪ್ತಿಯ ಕೆರೆಗಳಿಗೆ ಯಾವ ಮಿತಿಯೊಳಗೆ ನೀರು ತುಂಬಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ಜಿಲ್ಲೆಯ ಆನೇಕಲ್ ತಾಲ್ಲೂಕಿನಲ್ಲಿ ಈವರೆಗೂ ಕೆ.ಐ.ಎ.ಡಿ.ಬಿ. ಭೂಸ್ವಾಧೀನಗೊಂಡಿರುವ ಭೂಮಿಯ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೨ (೨೪೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಜಿಲ್ಲೆಯ ಆನೇಕಲ್ ತಾಲ್ಲೂಕಿನಲ್ಲಿ ಈವರೆಗೂ ಕೆ.ಐ.ಎ.ಡಿ.ಬಿಯಿಂದ ಎಷ್ಟು ಎಕರೆ ರೈತರಿಂದ ಜಮೀನನ್ನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಸದರಿ ಭೂಮಿಯ ಪ್ರಸ್ತುತ ಮಾರುಕಟ್ಟೆಯ ಬೆಲೆಯು ಎಷ್ಟು ಪಟ್ಟು ಹಣವನ್ನು ರೈತರಿಗೆ / ಭೂ ಮಾಲಿಕರಿಗೆ ನೀಡಲಾಗಿದೆ ; (ವಿವರ ನೀಡುವುದು)

(ಇ) ಭೂಮಾಲಿಕರಿಗೆ ಮತ್ತು ಜಮೀನನ್ನು ಕಳೆದುಕೊಂಡ ರೈತರಿಗೆ ಎಷ್ಟು ಪರಿಹಾರ ನೀಡಲಾಗಿದೆ ಮತ್ತು ಅವರಿಗೆ ಅಭಿವೃದ್ಧಿ ಆಗಿರುವ ಜಾಗದಲ್ಲಿ ನಿವೇಶನಗಳನ್ನು ನೀಡುವ ಚಿಂತನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಈ) ಅಭಿವೃದ್ಧಿ ಆಗಿರುವ ಜಾಗದಲ್ಲಿ ನಿವೇಶನ ನೀಡುವ ಗುರಿ ಇದ್ದಲ್ಲಿ ಸರ್ಕಾರ ಯಾವ ಯಾವ ಅಭಿವೃದ್ಧಿ ಜಾಗಗಳಲ್ಲಿ ನಿವೇಶನ ನೀಡುವುದು ? (ಸಂಪೂರ್ಣ ವಿವರ ನೀಡುವುದು)

## ಹಾಪ್‌ಕಾಮ್ಸ್ ಮಳಿಗೆಗಳನ್ನು ಬಂದ್ ಮಾಡಿರುವ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೩ (೧೯೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹಾಪ್‌ಕಾಮ್ಸ್ ಒಟ್ಟು ಮಳಿಗೆಗಳ ಸಂಖ್ಯೆಯೆಷ್ಟು ; ಈ ಮಳಿಗೆಗಳಲ್ಲಿ ಪ್ರಸ್ತುತ ಎಷ್ಟು ಹಾಪ್‌ಕಾಮ್ಸ್ ವಹಿವಾಟು ನಡೆಸುತ್ತಿವೆ ; ಎಷ್ಟು ಮಳಿಗೆಗಳನ್ನು ಬಂದ್ ಮಾಡಲಾಗಿದೆ ; ಇದಕ್ಕೆ ಕಾರಣಗಳೇನು ;

(ಆ) ಹಾಪ್‌ಕಾಮ್ಸ್ ಮಳಿಗೆಯಲ್ಲಿ ಯಾವ ಯಾವ ಪದಾರ್ಥಗಳನ್ನು ಮಾರಾಟ ಮಾಡಬೇಕೆಂಬ ನಿಯಮ ಇದೆ ; ಕೆಲವೊಂದು ಮಳಿಗೆಗಳಲ್ಲಿ ಖಾಸಗಿ ವ್ಯಕ್ತಿಗಳು ಹಣ್ಣುಗಳನ್ನು ಮಾರಾಟ ಮಾಡುತ್ತಿದ್ದು ಹಾಪ್‌ಕಾಮ್ಸ್ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೆಂಗಳೂರು ನಗರ ಭಾಗದ ಅನೇಕ ಕಡೆ ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಅಕ್ಕಿ ಮೂಟೆ ಹಾಗೂ ಇನ್ನಿತರ ತೋಟಗಾರಿಕೆಯ ಬೆಳೆಗಳಲ್ಲದ ಸಾಮಗ್ರಿಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಆಗಿದ್ದಲ್ಲಿ, ಇದುವರೆಗೂ ಎಷ್ಟು ಮಳಿಗೆಗಳನ್ನು ಪರಿಶೀಲಿಸಲಾಗಿದೆ ; ಈ ಮಳಿಗೆಗಳ ಮೇಲೆ ತೆಗೆದುಕೊಂಡ ಕ್ರಮವೇನು ; ಇದರಿಂದ ರೈತರಿಗೆ ಅನಾನುಕೂಲವಾಗುದಿಲ್ಲವೇ ;

(ಉ) ಸದರಿ ಮಳಿಗೆಗಳಲ್ಲಿ ಎಷ್ಟು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ; ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ?

## ಕೋಲಾರ ನಗರ ಸಭೆಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ

**ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೪ (೧೯೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ನಗರ ಸಭೆಗೆ ಕಳೆದ ಮೂರು ವರ್ಷಗಳಿಂದ ಇಲ್ಲಿಂಯುವರೆಗೂ ಸ್ವಚ್ಛ ಭಾರತ್ ಮಿಷನ್ ೧.೧೦ ಯೋಜನೆಯಡಿಯಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ; ಈ ಅನುದಾನವನ್ನು ಯಾವ ಯಾವ ಕಾಮಗಾರಿಗೆ ಮತ್ತು ಖರೀದಿಗಳಿಗೆ ಬಳಿಸಿಕೊಳ್ಳಲಾಗಿದೆ ;

(ಆ) ಘನತ್ಯಾಜ್ಯ ವಸ್ತು ನಿರ್ವಹಣೆಗೆ ಸಂಬಂಧಿಸಿದಂತೆ ಇ.ವಿ ಚಾರ್ಜಿಂಗ್ ಪಾಯಿಂಟ್ ಸಿ.ಸಿ.ಟಿ.ವಿ ಕ್ಯಾಮೆರಾ ಖರೀದಿಸಿರುವುದರಲ್ಲಿ ಸುಮಾರು ರೂ.೨.೪ ಕೋಟಿಗೂ ಹೆಚ್ಚು ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತವರ ಮೇಲೆ ತೆಗೆದುಕೊಂಡ ಕ್ರಮವೇನು ;

(ಇ) ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿಯಲ್ಲಿ ಇದುವರೆಗೂ ಖರೀದಿ ಮಾಡಲಾಗಿರುವ ಪರಿಕರಗಳು ಯಾವುವು ಹಾಗೂ ಖರೀದಿ ಮಾಡುವ ಸಂದರ್ಭದಲ್ಲಿ ಯಾವ ನೀತಿ ನಿಯಮಗಳನ್ನು ಅಳವಡಿಸಿಕೊಳ್ಳಲಾಗಿದೆ ;

(ಈ) ಈ ಪರಿಕರಗಳನ್ನು ಸರಬರಾಜು ಮಾಡಲು ಟೆಂಡರ್ ಕರೆಯಲಾಗಿತ್ತೆ ; ಆಗಿದ್ದರೆ, ಟೆಂಡರ್‌ನಲ್ಲಿ ಭಾಗವಹಿಸಿದಂತಹ ಗುತ್ತಿಗೆದಾರರು ಯಾರ್ಯಾರು ? (ಸಂಪೂರ್ಣ ಮಾಹಿತಿ ನೀಡುವುದು)

## ಪಾವೂರು ಉಳಿಯ ಗ್ರಾಮದಲ್ಲಿ ಅಕ್ರಮ ಮರಳುಗಾರಿಕೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೫ (೧೪೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕು ಪಾವೂರು ಉಳಿಯ ಗ್ರಾಮದಲ್ಲಿ ಅಕ್ರಮ ಮರಳುಗಾರಿಕೆ ವ್ಯಾಪಕವಾಗಿ ನಡೆಯುತ್ತಿದ್ದರೂ ಮರಳು ಮಾಫಿಯಾದವರು ಬೆದರಿಸಿ ಅಕ್ರಮ ಮರಳು ದಂದೆ ನಡೆಸುತ್ತಿದ್ದರೂ ಇಲಾಖೆಯು ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಆ) ಅಕ್ರಮ ಮರಳುಗಾರಿಕೆಯಿಂದ ಉಳಿಯ ಪಾವೂರು ದ್ವೀಪದ ಸುಮಾರು ೪೦ ಎಕರೆ ಭೂಮಿ ನಾಶವಾಗಿದ್ದರೂ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಇ) ಇತ್ತೀಚೆಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ಸಾಮಾಜಿಕ ಕಾರ್ಯಕರ್ತರಾದ ಶ್ರೀ ಅಲ್ವಿನ್ ಡಿ ಸೋಜಾ ರವರ ಮೇಲೆ ಸಾರ್ವಜನಿಕವಾಗಿ ಹಲ್ಲೆ ನಡೆಸಿ, ಕೊಲೆ ಬೆದರಿಕೆ ಹಾಕಿದ್ದು, ಗಣಿ ಇಲಾಖೆಗೆ ಅಕ್ರಮ ಮರಳು ದಂದೆ ಕೋರರ ಮಾಹಿತಿ ಇದ್ದರು ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರೆ ತಾಲ್ಲೂಕಿನಲ್ಲಿ ಬಳಕುಂಜೆ ಪ್ರದೇಶಗಳಲ್ಲಿ ಕೈಗಾರಿಕೆ ಪ್ರದೇಶ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೭ (೧೪೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರೆ ತಾಲ್ಲೂಕಿನಲ್ಲಿ ಬಳಕುಂಜೆ ಪ್ರದೇಶಗಳಲ್ಲಿ ಕೈಗಾರಿಕೆ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಎಷ್ಟು ಜಮೀನು ಸ್ವಾಧೀನಪಡಿಸಲು ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಈ ಪ್ರದೇಶದಲ್ಲಿ ರೈತಾಪಿ ವರ್ಗದ ಜನರು ಹೆಚ್ಚು ವಾಸಿಸುತ್ತಿರುವುದರಿಂದ ರೈತರ ಕೃಷಿ ಭೂಮಿಗಳಾಗಿದ್ದು, ಕೆಐಡಿಬಿ

ವತಿಯಿಂದ ಸ್ವಾಧೀನ ಪಡಿಸಲು ಉದ್ದೇಶಿಸಿರುವುದರಿಂದ ರೈತರು ತಮ್ಮ ಜೀವನೋಪಾಯದ ಭೂಮಿ ಕಳೆದುಕೊಳ್ಳುವುದರಿಂದ ಈ ಪ್ರಸ್ತಾವನೆ ಕೈಬಿಡಬೇಕೆಂದು ಸ್ಥಳೀಯರು ಒತ್ತಾಯಿಸುತ್ತಿದ್ದರೂ ಯಾವುದೇ ಕ್ರಮಕೈಗೊಳ್ಳದಿರಲು ಕಾರಣವೇನು ; (ವಿವರ ನೀಡುವುದು)

(ಇ) ಖಾಸಗಿ ಭೂಮಿಯನ್ನು ಸ್ವಾಧೀನ ಪಡಿಸಲು ಸರ್ಕಾರವು ಜನರ ಅಭಿಪ್ರಾಯ ಪಡೆಯದೆ ಗೂಂಡಾಗಳ ಮೂಲಕ ಬೆದರಿಕೆ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಬಗ್ಗೆ ಯಾವ ಕ್ರಮಕೈಗೊಳಲಾಗಿದೆ ; (ವಿವರ ನೀಡುವುದು)

(ಈ) ಬಳಕುಂಜೆ ಪ್ರದೇಶದಲ್ಲಿ ಯಾವ ಯೋಜನೆಗಾಗಿ ಭೂಮಿಯನ್ನು ವಶಪಡಿಸಿಕೊಳ್ಳಲಾಗುತ್ತಿದೆ ? (ವಿವರ ನೀಡುವುದು)

## ಮಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೃಷಿ ಮಾರುಕಟ್ಟೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭ (೧೪೪೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಾರುಕಟ್ಟೆಯ ಕಾಮಗಾರಿ ಪೂರ್ಣಗೊಳ್ಳದೇ ಸರ್ಕಾರದ ಹಣ ಪೋಲು ಮಾಡುತ್ತಿದ್ದು, ಈ ಬಗ್ಗೆ ಸರ್ಕಾರ ಏನು ಕ್ರಮಕೈಗೊಂಡಿದೆ ;

(ಆ) ಮಂಗಳೂರು ನಗರದಲ್ಲಿ ಎಷ್ಟು ಮಾರುಕಟ್ಟೆಗಳನ್ನು ಕಟ್ಟಲಾಗಿದೆ ; ಪೂರ್ಣಗೊಂಡ ಮಾರುಕಟ್ಟೆಗಳೆಷ್ಟು ; ಇದಕ್ಕೆ ತಗಲುವ ವೆಚ್ಚ ಎಷ್ಟು ;

(ಇ) ಮಾರುಕಟ್ಟೆ ನಿರ್ಮಿಸುವಾಗ ೦೮ ಅಂತಸ್ತಿನ ಮಾರುಕಟ್ಟೆಯನ್ನು ಅವೈಜ್ಞಾನಿಕವಾಗಿ ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರಕ್ಕೆ ಉಂಟಾಗಿರುವ ನಷ್ಟ ಎಷ್ಟು ? (ವಿವರ ನೀಡುವುದು)

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜಲಭಾಗ್ಯ ಯೋಜನೆಗೆ ಡಾಂಬರೀಕರಣ ರಸ್ತೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೮ (೧೪೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಜಲಭಾಗ್ಯ ಯೋಜನೆಗೆ ಡಾಂಬರು ರಸ್ತೆ ಆಗಿದ್ದು, ಇದರ ನಿರ್ವಹಣೆ ಮಾಡದೇ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗುತ್ತಿದ್ದರೂ ಸರ್ಕಾರ ಈ ಬಗ್ಗೆ ಯಾವುದೇ ಕ್ರಮಕೈಗೊಳ್ಳದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಆ) ಸರ್ಕಾರದ ಯೋಜನೆಗಳನ್ನು ಜಾರಿ ಮಾಡುವ ಸಂದರ್ಭದಲ್ಲಿ ರಸ್ತೆಯನ್ನು ಅಗೆಯುವುದಕ್ಕೆ ಯಾವ ಯಾವ ಮಾನದಂಡಗಳ ಆಧಾರದ ಮೇಲೆ ಸರ್ಕಾರ ಪಡೆಯುವ ಶುಲ್ಕ ಎಷ್ಟು ; ಎಷ್ಟು ಅವಧಿಯೊಳಗಾಗಿ ಕಾಮಗಾರಿ ಪೂರ್ಣಗೊಳಿಸಲು ಅವಕಾಶ ನೀಡಲಾಗುತ್ತದೆ ; (ವಿವರ ನೀಡುವುದು)

(ಇ) ನಿಗಧಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳ್ಳದೇ ಇದ್ದಲ್ಲಿ, ಸರ್ಕಾರ ಕೈಗೊಳ್ಳುವ ಕ್ರಮವೇನು; ಕ್ರಿಮಿನಲ್ ಪ್ರಕರಣ ದಾಖಲಿಸಲಾಗುತ್ತಿದೆಯೇ ;

(ಈ) ಮಂಗಳೂರಿನಲ್ಲಿ ರಸ್ತೆ ಅಗೆತದಿಂದ ರಸ್ತೆಗಳ ನಿರ್ವಹಣೆ ಇಲ್ಲದೇ ಉಂಟಾದ ಅಪಘಾತ ಪ್ರಕರಣಗಳೆಷ್ಟು ; ಈ ಬಗ್ಗೆ ಅಧಿಕಾರಿಗಳ ಮೇಲೆ ಏನು ಕ್ರಮಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಜವಳಿ ಇಲಾಖೆಯಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೯ (೧೪೩) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಕೈಗಾರಿಕೆಗಳು ಅಭಿವೃದ್ಧಿ ಹೊಂದುತ್ತಿದ್ದರೂ ಜವಳಿ ಇಲಾಖೆಯಿಂದ ಯಾವುದೇ ಕೈಗಾರಿಕೆಗಳನ್ನು ಹಾಗೂ ಜವಳಿ ಉದ್ದಿಮೆ ಸ್ಥಾಪಿಸಲು ನಿರ್ಲಕ್ಷ್ಯ ಮನೋಭಾವ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಕಾರಣಗಳನ್ನು ನೀಡುವುದು ;

(ಆ) ಜವಳಿ ಉದ್ಯಮಗಳ ಮೂಲಕ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೀಡಿ ಕಾರ್ಮಿಕರಿಗೆ ಬದಲಿ ಉದ್ಯೋಗ ಒದಗಿಸಲು ಇಲಾಖೆ ಏನು ಕ್ರಮಕೈಗೊಂಡಿದೆ ; ಈ ಬಗ್ಗೆ ಇಲಾಖೆಯಿಂದ ಪರಿಶೀಲನೆ ನಡೆಸಲಾಗಿದೆಯೇ ; (ವಿವರ ನೀಡುವುದು)

(ಇ) ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲು ಇರುವ ಮಾನದಂಡಗಳೇನು ?

## ಬೆಂಗಳೂರು ನಗರಕ್ಕೆ ಉಪ ನಗರ ರೈಲು ಯೋಜನೆಯ ಬಗ್ಗೆ

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦ (೧೬೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜಧಾನಿ ಬೆಂಗಳೂರಿನ ಸಂಚಾರ ದಟ್ಟಣೆ ತಗ್ಗಿಸುವ ಸಲುವಾಗಿ ಉಪ ನಗರ ರೈಲು ಯೋಜನೆಯನ್ನು ಯಾವಾಗ ಜಾರಿಗೊಳಿಸಲಾಗುವುದು ಹಾಗೂ ಈ ಯೋಜನೆಯು ಎಷ್ಟು ಕಾರಿಡಾರ್ ಒಳಗೊಂಡ ಸಬ್ ಅರ್ಬನ್ ಯೋಜನೆಯಾಗಿದೆ ವಿವರವಾದ ಮಾಹಿತಿ ನೀಡುವುದು ;

(ಆ) ಈ ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರ ಭರಿಸುತ್ತಿರುವ ಶೇಕಡಾವಾರು ಮೊತ್ತವೆಷ್ಟು ; ಹಾಲಿ ಈ ಅನುದಾನದಲ್ಲಿ ಯಾವ ಯಾವ ಕಾರಿಡಾರ್ ಯೋಜನೆ ಪ್ರಗತಿಯಲ್ಲಿದೆ ಹಾಗೂ ಯಾವ ಕಾರಿಡಾರ್ ಯೋಜನೆಯನ್ನು ಪೂರ್ಣಗೊಳಿಸಿ ಸಾರ್ವಜನಿಕರ ಪ್ರಯಾಣಕ್ಕೆ ಅನುಕೂಲ ಮಾಡಲಾಗುವುದು ; (ವಿವರ ನೀಡುವುದು)

(ಇ) ಈ ಉಪ ನಗರ ರೈಲ್ವೆ ಯೋಜನೆಯನ್ನು ಬೆಂಗಳೂರು ಸುತ್ತಮುತ್ತಲಿನ ವರ್ತುಲ ರೈಲ್ವೆ ಹಳಿಗೆ ಸಂಪರ್ಕ ಕಲ್ಪಿಸುವ ಯೋಜನೆ ಹಾಕಿಕೊಳ್ಳಲಾಗಿದೆಯೇ ; (ವಿವರಣೆ ನೀಡುವುದು)

(ಈ) ಬೆಂಗಳೂರಿಗೆ ಹತ್ತಿರವಿರುವ ತುಮಕೂರು, ಮಾಗಡಿ, ಗೌರಿಬಿದನೂರು, ಕೋಲಾರ ಮತ್ತಿತರ ನಗರಗಳಿಗೆ ಈ ಉಪ ನಗರ ರೈಲ್ವೆ ಯೋಜನೆಯನ್ನು ವಿಸ್ತರಣೆ ಮಾಡಲಾಗುವುದೆ ? (ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಂದಾಯ ಭೂಮಿಯಲ್ಲಿ ಅನಧಿಕೃತ ತೆರಿಗೆ ಹಾಕಿರುವ ಬಗ್ಗೆ

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೧ (೧೬೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿಬಿಎಂಪಿ ಮತ್ತು ರಾಜ್ಯದ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸರ್ಕಾರಿ ಭೂಮಿ ಹೊರತುಪಡಿಸಿ ಕಂದಾಯ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಡಗಳಿಗೆ, ನಿವೇಶನಗಳಿಗೆ ಆಸ್ತಿ ತೆರಿಗೆಯನ್ನು ವಿಧಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ ಸರ್ಕಾರದ ಆದೇಶ ಒದಗಿಸುವುದರೊಂದಿಗೆ ವಿವರಣೆ ನೀಡುವುದು ;

(ಆ) ಇಂತಹ ಕಟ್ಟಡಗಳಿಗೆ / ನಿವೇಶನಗಳಿಗೆ ಯಾವ ಅವಧಿಯಿಂದ ತೆರಿಗೆಯನ್ನು ವಿಧಿಸಲು ನಿರ್ಧರಿಸಲಾಗಿದೆ ; ಯಾವ ಮಾನದಂಡಗಳನ್ನು ಅನುಸರಿಸಲಾಗಿದೆ ; (ವಿವರ ನೀಡುವುದು)

(ಇ) ಅನಧಿಕೃತವಾಗಿ ನಿರ್ಮಿಸಿರುವ ಕಟ್ಟಡಗಳಿಗೆ ವಿಧಿಸಿರುವ ಆಸ್ತಿ ತೆರಿಗೆಯನ್ನು ಎರಡು ಪಟ್ಟು ವಿಧಿಸಿರುವುದು ಸಾರ್ವಜನಿಕರಿಗೆ ಹೊರೆಯಾಗುವುದಿಲ್ಲವೇ ; ಇದನ್ನು ಕಡಿಮೆ ಮಾಡಲು ಸರ್ಕಾರ ತೆಗೆದುಕೊಳ್ಳುವ ಕ್ರಮವೇನು ?

## ಯಶಸ್ವಿನಿ ಯೋಜನೆ ಕುರಿತು

**ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೨ (೧೬೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯಶಸ್ವಿನಿ ಯೋಜನೆಯನ್ನು ಯಾವಾಗಿನಿಂದ ಜಾರಿಗೆ ತರಲಾಗಿದೆ ಇದರ ಧೇಯ್ಯೋದ್ದೇಶಗಳೇನು ; (ವಿವರ ನೀಡುವುದು)

(ಆ) ಇಲ್ಲಿಯ ತನಕ ಈ ಯೋಜನೆಯಡಿ ಸದಸ್ಯತ್ವ ಹೊಂದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿಯಲ್ಲಿ ನೋಂದಣಿ ಮಾಡಿಕೊಂಡಿರುವ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ನೊಂದಣಿಯಾಗಿರುವ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳ ಪಟ್ಟಿ ಒದಗಿಸುವುದು)

(ಈ) ಸದರಿ ಯೋಜನೆಯಡಿ ಇಲ್ಲಿಯವರೆಗೆ ಪ್ರಯೋಜನ ಪಡೆದುಕೊಂಡಿರುವ ಸದಸ್ಯರ ಸಂಖ್ಯೆ ಎಷ್ಟು ಮತ್ತು ಇದಕ್ಕಾಗಿ ಸರ್ಕಾರ ಒದಗಿಸಿರುವ ಮೊತ್ತವೆಷ್ಟು ; ಯಶಸ್ವಿನಿ ಯೋಜನೆಯಡಿ ಯಾವ ಯಾವ ಖಾಯಿಲೆಗಳಿಗೆ ಚಿಕಿತ್ಸೆ ನೀಡಲು ಅವಕಾಶವಿದೆ ಸಂಪೂರ್ಣ ಮಾಹಿತಿ ಒದಗಿಸುವುದರೊಂದಿಗೆ ಸರ್ಕಾರದ ಅಧಿಸೂಚನೆ ಪಟ್ಟಿ ಒದಗಿಸುವುದು ;

(ಉ) ಎಲ್ಲಾ ಮಾರಣಾಂತಿಕ ಖಾಯಿಲೆಗಳನ್ನು ಈ ಯೋಜನೆಯ ವ್ಯಾಪ್ತಿಗೆ ತಂದು ಯಶಸ್ವಿನಿ ಯೋಜನೆಯ ಸದಸ್ಯರಿಗೆ ಚಿಕಿತ್ಸೆಗೆ ಒಳಪಡಿಸಲು ಸರ್ಕಾರಕ್ಕೆ ತೊಂದರೆಯೇ ;

(ಊ) ಯಶಸ್ವಿನಿ ಯೋಜನೆಯನ್ನು ಜಾರಿಗೆ ನೀಡಲಾದ ದಿನಾಂಕದಿಂದ ಇಲ್ಲಿಯ ತನಕ ಸದರಿ ಯೋಜನೆಯ ಸದಸ್ಯರಿಂದ ಸಂಗ್ರಹವಾಗಿರುವ ಮೊತ್ತವೆಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಕೈಗಾರಿಕೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೩ (೨೦೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಕ್ಕೆ ಕೈಗಾರಿಕೆಗಳನ್ನು ತರುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ೨೦೨೩ ರಿಂದ ರಾಜ್ಯಕ್ಕೆ ಬಂದಿರುವ ಹೊಸ ಕೈಗಾರಿಕೆಗಳೆಷ್ಟು ; ಅದರಿಂದ ಸೃಷ್ಟಿಯಾಗಲಿರುವ ಉದ್ಯೋಗಗಳೆಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ವಿಜಯಪುರ ಜಿಲ್ಲೆಯಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಸ್ಥಾಪಿಸಲು ಉದ್ದೇಶಿಸಿರುವ ಕೈಗಾರಿಕೆಗಳಾವುವು ; (ಮಾಹಿತಿ ನೀಡುವುದು)

(ಇ) ಈ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪಿಸುವ ಕೈಗಾರಿಕೋದ್ಯಮಿಗಳಿಗೆ ಸರ್ಕಾರ ನೀಡುವ ಪ್ರೋತ್ಸಾಹಗಳೇನು ;

(ಈ) ತೋಟಗಾರಿಕೆ ಬೆಳೆಗಳಿಗೆ ಹೆಸರುವಾಸಿಯಾದ ವಿಜಯಪುರ ಜಿಲ್ಲೆಗೆ ಉದ್ದಿಮೆಗಳನ್ನು ತರುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ನೇಕಾರ ಸಮ್ಮಾನ್ ಯೋಜನೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೪೪ (೨೦೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನೇಕಾರ ಸಮ್ಮಾನ್ ಯೋಜನೆಯಡಿಯಲ್ಲಿ ಒಟ್ಟು ನೋಂದಣಿಯಾದ ನೇಕಾರರ ಸಂಖ್ಯೆ ಎಷ್ಟು; (ಜಿಲ್ಲಾ ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಜ್ಯದ ನೇಕಾರರಿಗೆ ಒದಗಿಸಿರುವ ಸೌಲಭ್ಯಗಳು ಯಾವುವು ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ೧೦ ಎಚ್.ಪಿ ಹಾಗೂ ೨೦ ಎಚ್.ಪಿ ವರೆಗೂ ವಿದ್ಯುತ್ ಉಪಯೋಗಿಸುವ ನೇಕಾರರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದ ನೇಕಾರರು ಸಂಕಷ್ಟ ಸ್ಥಿತಿಯಲ್ಲಿದ್ದು, ಅವರ ನೆರವಿಗಾಗಿ ವಿಶೇಷ ಪ್ಯಾಕೇಜ್ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದರೆ, ಯಾವಾಗ ಪ್ಯಾಕೇಜ್ ಘೋಷಣೆ ಮಾಡಲಾಗುವುದು ;

(ಉ) ನೇಕಾರರಿಗೆ ಆರೋಗ್ಯ ವಿಮೆ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೫ (೨೦೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ಯಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಉದ್ಯಮಗಳಲ್ಲಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಕನ್ನಡಿಗರ ಸಂಖ್ಯೆ ಎಷ್ಟು ;

(ಇ) ಹೊಸದಾಗಿ ಸಣ್ಣ ಕೈಗಾರಿಕೆ ಪ್ರಾರಂಭ ಮಾಡುವ ಕೈಗಾರಿಕೆಗಳಿಗಿರುವ ಮಾನದಂಡಗಳೇನು; ಸಣ್ಣ ಕೈಗಾರಿಕೆ ಇಲಾಖೆ ವತಿಯಿಂದ ಪ್ರೋತ್ಸಾಹಗಳೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳಿಂದ ಇಲ್ಲಿಯವರೆಗೆ ಎಷ್ಟು ಜನರಿಗೆ ಉದ್ಯೋಗ ಲಭಿಸಿದೆ ; (ವಿವರ ನೀಡುವುದು)

(ಉ) ಸಣ್ಣ ಕೈಗಾರಿಕೆ ಇಲಾಖೆಯಲ್ಲಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆಗಳೆಷ್ಟು; ಖಾಲಿಯಿರುವ ಹುದ್ದೆಗಳೆಷ್ಟು ; ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ನೇಕಾರರು ಉತ್ಪಾದಿಸುವ ಜವಳಿ ವಸ್ತುಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೬ (೨೦೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನೇಕಾರರು ಉತ್ಪಾದಿಸಿದ ಜವಳಿ ವಸ್ತುಗಳಾದ ಸೀರೆ, ಟವೆಲ್, ಜಮಖಾನೆ ಸೇರಿದಂತೆ ಇತರೆ ಜವಳಿ ವಸ್ತುಗಳ ಮಾರುಕಟ್ಟೆ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಜವಳಿ ಮಾರುಕಟ್ಟೆ ಸುಧಾರಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಆ) ಜವಳಿ ಉತ್ಪಾದನೆ ರಫ್ತು ಹಾಗೂ ರಾಜ್ಯದ ನೇಕಾರಿಕೆ ವಲಯದಲ್ಲಿ ಉದ್ಯೋಗ ಸೃಷ್ಟಿಗೆ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ;

(ಇ) ಕರೋನ ಲಾಕ್‌ಡೌನ್ ಹಾಗೂ ಅದರ ನಂತರದ ಅವಧಿಯಲ್ಲಿ ರಾಜ್ಯದಲ್ಲಿ ಆತ್ಮಹತ್ಯೆ ಮಾಡಿಕೊಂಡ ನೇಕಾರರ ನಿಖರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಆತ್ಮಹತ್ಯೆ ಮಾಡಿಕೊಂಡ ನೇಕಾರರಿಗೆ ಸರ್ಕಾರ ಪರಿಹಾರ ನೀಡಿದೆಯೇ ; ನೇಕಾರರ ಆತ್ಮಹತ್ಯೆ ತಡೆಗಟ್ಟುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಜ್ಯದಲ್ಲಿ ಜಾರಿಯಿರುವ RKY ಹಾಗೂ NHM ಯೋಜನೆಯ ಕುರಿತು.

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೭ (೨೦೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಜಾರಿಯಿರುವ RKY ಹಾಗೂ NHM ಯೋಜನೆಗಳು ಪ್ರಾರಂಭವಾದಾಗಿನಿಂದ ತೋಟಗಾರಿಕೆ ಉಪಯೋಗಿ ವಸ್ತುಗಳ ಒಂದೇ ದರ ಪಟ್ಟಿಯಿದ್ದು, ಅದನ್ನು ಪರಿಷ್ಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಪರಿಷ್ಕರಿಸಲಾಗುವುದು ;

(ಆ) ರೈತರಿಗೆ ತೋಟಗಾರಿಕಾ ಉಪಯೋಗಿ ವಸ್ತುಗಳನ್ನು ರಿಯಾಯತಿ ದರದಲ್ಲಿ ನೀಡುವ ಯೋಜನೆಯಾದ (RKY & SMAM) ನಲ್ಲಿ ಕೊಡುವ ಒಂದೇ ಕಂಪನಿಯ ಯಂತ್ರೋಪಕರಣಗಳ ದರವು ಕೃಷಿ ಹಾಗೂ ತೋಟಗಾರಿಕೆ ಇಲಾಖೆಯಲ್ಲಿ ಬೇರೆ ಬೇರೆ ಇರಲು ಕಾರಣಗಳೇನು ;

(ಇ) ಕೇಂದ್ರ ಸರ್ಕಾರದ ಸಹಕಾರದ ಯೋಜನೆಯಡಿಯಲ್ಲಿ ಹನಿ ನೀರಾವರಿ ಪದ್ಧತಿಯ ಯೋಜನೆಗೆ ನೀಡುವ ಮಾನದಂಡಗಳು (ಮಾರ್ಗಸೂಚಿಗಳು) ಒಂದೇ ಇದ್ದರೂ ರಾಜ್ಯದಲ್ಲಿ ರೈತರಿಗೆ ನೀಡುವ ಸಹಾಯಧನ ಕೃಷಿ ಮತ್ತು ತೋಟಗಾರಿಕೆ ಇಲಾಖೆಯಲ್ಲಿ ಬೇರೆ ಇರಲು ಕಾರಣಗಳೇನು ?

## ಹಾಪ್‌ಕಾಮ್ಸ್ ಆರ್ಥಿಕ ಸಂಕಷ್ಟದಲ್ಲಿದ್ದು ಮಳಿಗೆಗಳು ಮುಚ್ಚುತ್ತಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೪೮ (೨೪೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ತೋಟಗಾರಿಕಾ ಉತ್ಪಾದಕರ ಸಹಕಾರಿ ಮಾರುಕಟ್ಟೆ ಮತ್ತು ಸಂಸ್ಕರಣಾ ಸಂಘ (ಹಾಪ್‌ಕಾಮ್ಸ್)ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದು ೫ ವರ್ಷಗಳಲ್ಲಿ ಮುಚ್ಚಲ್ಪಟ್ಟ ಹಾಪ್‌ಕಾಮ್ಸ್ ಮಳಿಗೆಗಳ ಸಂಖ್ಯೆ ಎಷ್ಟು; ಹಾಗೂ ಇದಕ್ಕೆ ಕಾರಣಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಇ) ಪ್ರಸ್ತುತ ಎಷ್ಟು ಹಾಪ್‌ಕಾಮ್ಸ್‌ಗಳು ಆರ್ಥಿಕ ನಷ್ಟದಲ್ಲಿವೆ; ಹಾಪ್‌ಕಾಮ್ಸ್‌ನ ಆರ್ಥಿಕ ಪುನಃಶ್ಚೇತನ ಮತ್ತು ಮಾರುಕಟ್ಟೆ ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಹಾಪ್‌ಕಾಮ್ಸ್ ಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಈ ಪೈಕಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಹಾಗೂ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ಭರ್ತಿಗೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸಕಾಲದಲ್ಲಿ ವೇತನ ಪಾವತಿ ಹಾಗೂ ನಿವೃತ್ತಿ ನಂತರ ಗ್ರಾಚ್ಯುಟಿ (ಉಪದಾನ) ನೀಡದಿರುವುದು ನಿಜವೇ ಹಾಗಿದ್ದಲ್ಲಿ, ಯಾವಾಗ ಪಾವತಿಸಲಾಗುವುದು ? (ಪಾವತಿಸಬೇಕಾದ ಮೊತ್ತದ ವಿವರ ಹಾಗೂ ಕಾಲಮಿತಿ ಕುರಿತು ವಿವರ ನೀಡುವುದು)

## ಮಂಡ್ಯ ನಗರಸಭೆ ವ್ಯಾಪ್ತಿಯ ಬಡಾವಣೆಗಳಲ್ಲಿ ಒಳಚರಂಡಿ ವ್ಯವಸ್ಥೆ ಇಲ್ಲದಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೪೯ (೨೪೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ, ಮಂಡ್ಯ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಸೇರಿದಂತೆ ಇನ್ನಿತರೆ ಇಲಾಖೆ/ಮಂಡಳಿ/ಸಂಸ್ಥೆಗಳು ಅಭಿವೃದ್ಧಿಪಡಿಸಿ ನಿರ್ವಹಿಸುತ್ತಿರುವ ಯಾವ ಯಾವ ಬಡಾವಣೆಗಳು ಇನ್ನೂ ಮಂಡ್ಯ ನಗರಸಭೆಗೆ ಹಸ್ತಾಂತರವಾಗಿರುವುದಿಲ್ಲ ;

(ಆ) ಮಂಡ್ಯ ನಗರಸಭೆ ಅಂತಹ ಬಡಾವಣೆಗಳನ್ನು ಹಸ್ತಾಂತರ ಮಾಡಿಕೊಳ್ಳದಿರುವುದಕ್ಕೆ ಕಾರಣಗಳೇನು; ಅಲ್ಲಿ ಅಗಬೇಕಿರುವ ಅಭಿವೃದ್ಧಿ ಕಾಮಗಾರಿಗಳಾವುವು ; (ಬಡಾವಣೆವಾರು ಮಾಹಿತಿ ನೀಡುವುದು)

(ಇ) ಮಂಡ್ಯ ನಗರದ ನಗರಸಭೆ ವ್ಯಾಪ್ತಿಗೆ ಸೇರಿದ ಹಲವು ಬಡಾವಣೆಗಳಲ್ಲಿ ಒಳಚರಂಡಿ ವ್ಯವಸ್ಥೆ ಸಮರ್ಪಕವಾಗಿ ಇಲ್ಲದೇ ಇರುವುದರಿಂದ ನಾಗರಿಕರಿಗೆ ತೀವ್ರ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ಯಾವ ಬಡಾವಣೆಗಳಲ್ಲಿ ಸಮರ್ಪಕ ಒಳಚರಂಡಿ ವ್ಯವಸ್ಥೆ ಇರುವುದಿಲ್ಲ; ಇದನ್ನು ಸರಿಪಡಿಸಲು ಮಂಡ್ಯ ನಗರಸಭೆ ತೆಗೆದುಕೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಮಂಡ್ಯ ನಗರದಲ್ಲಿ ಇರುವಂತಹ ಒಳಚರಂಡಿ ವ್ಯವಸ್ಥೆಯ ವಿವರವಾದ ನಕ್ಷೆ ತಯಾರಿಸುವ ಸಂಬಂಧ ಹಾಲಿ ಒಳಚರಂಡಿ ವ್ಯವಸ್ಥೆಯನ್ನು ಡಿಜಿಪಿಎಸ್ ಸಾಧನಗಳನ್ನು ಉಪಯೋಗಿಸಿಕೊಂಡು ಭೌಗೋಳಿಕ ಸರ್ವೆ ನಡೆಸಲು ನಗರಸಭೆ ಉದ್ದೇಶಿಸಿದೆಯೇ ;

(ಊ) ಹಾಗಿದ್ದಲ್ಲಿ, ಯಾರ ಮುಖಾಂತರ ಸರ್ವೆ ನಡೆಸಲು ಉದ್ದೇಶಿಸಿದೆ; ಇದಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

# ಯಶಸ್ವಿನಿ ಆರೋಗ್ಯ ಯೋಜನೆ ನೋಂದಣಿ ಮತ್ತು ಸದಸ್ಯತ್ವ ನವೀಕರಣ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೫೦ (೨೪೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಸಾಲಿಗೆ ಯಶಸ್ವಿನಿ ಆರೋಗ್ಯ ಯೋಜನೆಯಡಿ ರಾಜ್ಯದಾದ್ಯಂತ ಸದಸ್ಯರ ನೋಂದಣಿ ಮತ್ತು ಸದಸ್ಯತ್ವ ನವೀಕರಣ ಪ್ರಕ್ರಿಯೆ ಎಂದಿನಿಂದ ಆರಂಭ ಅಗಲಿದೆ ; ಎಷ್ಟು ಲಕ್ಷ ಸದಸ್ಯರನ್ನು ನೋಂದಾಯಿಸುವ ಗುರಿ ಹೊಂದಲಾಗಿದೆ; (ವಿವರ ನೀಡುವುದು)

(ಆ) ಸರ್ಕಾರ ವಾರ್ಷಿಕ ವಂತಿಕೆ ಮೊತ್ತವನ್ನು ಪರಿಷ್ಕರಿಸಲು ಉದ್ದೇಶಿಸಿದೆಯೇ ; (ವಿವರ ನೀಡುವುದು)

(ಇ) ೨೦೨೩-೨೦೨೪ನೇ ಸಾಲಿನಲ್ಲಿ ಯಶಸ್ವಿನಿ ಯೋಜನೆಯಡಿ ನೊಂದಾಯಿಸಲ್ಪಟ್ಟ ಸದಸ್ಯರ ಸಂಖ್ಯೆ ಎಷ್ಟು ; ಸಂಗ್ರಹಿಸಲಾದ ವಂತಿಕೆ ಮೊತ್ತ ಎಷ್ಟು ; ನೋಂದಾಯಿತ ಸದಸ್ಯರ ಪೈಕಿ ವೈದ್ಯಕೀಯ ಚಿಕಿತ್ಸೆ ಪಡೆದವರ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೨೦೨೨-೨೩ ಮತ್ತು ೨೦೨೩-೨೪ನೇ ಸಾಲಿನಲ್ಲಿ ನೆಟ್ ವರ್ಕ್ ಆಸ್ಪತ್ರೆಗಳಿಗೆ ಭರಿಸಲಾಗಿರುವ ಮತ್ತು ಭರಿಸಲು ಬಾಕಿ ಇರುವ ಮೊತ್ತ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಉ) ಯೋಜನೆಯಡಿ ನೋಂದಾಯಿತ ಆಸ್ಪತ್ರೆಗಳ ಸಂಖ್ಯೆ ಮತ್ತು ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಲಭ್ಯವಿರುವ ಚಿಕಿತ್ಸೆಗಳ ಸಂಖ್ಯೆ,

ದರ ಪರಿಷ್ಕರಣೆಗೆ ಒಳಗಾದ ಚಿಕಿತ್ಸೆಗಳ ಸಂಖ್ಯೆ ಎಷ್ಟು; ಹಾಗೂ, ಯೋಜನೆ ಮರುಜಾರಿ ಬಳಿಕ ಎಷ್ಟು ಚಿಕಿತ್ಸೆಗಳನ್ನು ಹೆಚ್ಚುವರಿಯಾಗಿ ಸೇರಿಸಲಾಗಿದೆ ;

(ಊ) ನೆಟ್ ವರ್ಕ್ ಆಸ್ಪತ್ರೆಗಳು ಸದಸ್ಯರಿಂದ ಹಣ ಸಂಗ್ರಹಿಸಿರುವ ಬಗ್ಗೆ ದೂರುಗಳು ಸ್ವೀಕೃತವಾಗಿವೆಯೇ ? (ವಿವರ ನೀಡುವುದು)

## ಮನ್‌ಮುಲ್ ಹಾಲು ಮತ್ತು ಹಾಲಿನ ಉತ್ಪನ್ನಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೧೫೧ (೨೫೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ (ಮನ್‌ಮುಲ್) ವ್ಯಾಪ್ತಿಯಲ್ಲಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಂಖ್ಯೆ ಎಷ್ಟು; ಇದರಲ್ಲಿ ಎಷ್ಟು ಸಂಘಗಳು ಹಾಲು ಸಂಗ್ರಹಿಸುತ್ತಿವೆ ; ಎಷ್ಟು ಸದಸ್ಯರು ಹಾಲು ಪೂರೈಸುತ್ತಿದ್ದಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಲು ಸಂಗ್ರಹಿಸುವಲ್ಲಿ ರಾಜ್ಯದ ಇತರೆ ಒಕ್ಕೂಟಗಳಿಗೆ ಹೋಲಿಸಿದರೆ 'ಮನ್ ಮುಲ್' ಶ್ರೇಯಾಂಕವು ಎಷ್ಟನೇ ಸ್ಥಾನದಲ್ಲಿದೆ; 'ಮನ್ ಮುಲ್ 'ಪ್ರತಿ ದಿನ ಎಷ್ಟು ಕೆ.ಜಿ. ಹಾಲು ಸಂಗ್ರಹಿಸುತ್ತದೆ ; (ಒಕ್ಕೂಟವಾರು ಸಂಗ್ರಹಿಸುವ ಹಾಲಿನ ಪ್ರಮಾಣ, ಶ್ರೇಯಾಂಕದ ಮಾಹಿತಿ ನೀಡುವುದು)

(ಇ) ಮಂಡ್ಯ ಸಹಕಾರಿ ಹಾಲು ಒಕ್ಕೂಟದಿಂದ 'ಶ್ರೀ ತಿರುಮಲ ದೇವಸ್ಥಾನ'ಕ್ಕೆ ಪ್ರತಿ ದಿನ ಪೂರೈಸುವ ತುಪ್ಪದ ಪ್ರಮಾಣ ಎಷ್ಟು ; ಒಂದು ತಿಂಗಳಿಗೆ ಸರಾಸರಿ ಎಷ್ಟು ಟನ್ ತುಪ್ಪ ಸರಬರಾಜು

ಮಾಡಲಾಗುತ್ತದೆ ಹಾಗೂ ಎಷ್ಟು ಕೋಟಿ ವಹಿವಾಟು ನಡೆಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಮೆಗಾ ಡೈರಿ ಘಟಕಗಳ ಸಂಸ್ಕರಣಾ ಸಾಮರ್ಥ್ಯ ಎಷ್ಟು ; ಮನ್ ಮುಲ್ ನಿಂದ ಯಾವ ಹೊಸ ಉತ್ಪನ್ನಗಳನ್ನು ಬಿಡುಗಡೆ ಮಾಡಲಾಗಿದೆ ; ಮಾಹೆಯಾನ ಉತ್ಪಾದನೆ ಆಗುವ ಉತ್ಪನ್ನಗಳ ಪ್ರಮಾಣ ಎಷ್ಟು ; (ವಿವರ ನೀಡುವುದು)

(ಉ) ಪ್ರತಿ ದಿನ ಎಷ್ಟು ಪ್ರಮಾಣದ ಹಾಲಿನ ಪುಡಿ ಉತ್ಪಾದನೆ ಆಗುತ್ತದೆ ; ಪ್ರತಿ ಕೆ.ಜಿ ಗೆ ನಿಗದಿಪಡಿಸಲಾದ ದರ ಎಷ್ಟು ; ಇದರ ಮಾರುಕಟ್ಟೆ ಹೇಗೆ ; (ಸಂಪೂರ್ಣ ಮಾಹಿತಿ ನೀಡುವುದು)

(ಊ) 'ನಂದಿನಿ' ಬ್ರಾಂಡ್ ವಿಸ್ತರಿಸುವ ಭಾಗವಾಗಿ ಪ್ರತಿ ನಿತ್ಯ ರಾಜ್ಯದ ಯಾವ ಯಾವ ಸಹಕಾರಿ ಹಾಲು ಒಕ್ಕೂಟಗಳಿಂದ ಯಾವ ಯಾವ ರಾಜ್ಯಗಳಿಗೆ ಹಾಲು ಪೂರೈಸಲಾಗುತ್ತಿದೆ ; ನಿತ್ಯ ಎಷ್ಟು ಹಾಲು ಪೂರೈಕೆ ಆಗುತ್ತಿದೆ ; ಎಷ್ಟು ಕೋಟಿ ರೂಪಾಯಿ ವಹಿವಾಟು ನಡೆಯುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೨ (೨೫೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು: ಕೆಲವು ಕೈಗಾರಿಕೆಗಳು ದಾಖಲೆಗಳಲ್ಲಿ ಮಾತ್ರ ಇದ್ದು ಇವುಗಳ ಗಣತಿ (ಸೆನ್ಸಸ್) ಮಾಡಿ ನಿಜವಾಗಿ ಕಾರ್ಯನಿರ್ವಹಿಸುತ್ತಿರುವ ಕೈಗಾರಿಕೆಗಳ ಸಂಖ್ಯೆಯನ್ನು ಖಚಿತಪಡಿಸಿಕೊಳ್ಳಲಾಗಿದೆಯೇ ;

(ಆ) ರಾಜ್ಯದಲ್ಲಿ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ಯಾವ ರೀತಿ ಪ್ರೋತ್ಸಾಹ ನೀಡುತ್ತಿದೆ ; ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಹೊಸದಾಗಿ ಸ್ಥಾಪಿಸಿರುವ ಕೈಗಾರಿಕೆಗಳೆಷ್ಟು; ಇವುಗಳಿಗೆ ನೀಡಿರುವ ಸಹಾಯಧನವೆಷ್ಟು; (ವಿವರ ನೀಡುವುದು)

(ಇ) ಕುಶಲ ಕರ್ಮಿಗಳಿಗೆ ವಿಶೇಷ ಗೃಹ ನಿರ್ಮಾಣ ಯೋಜನೆಯಡಿ ನಿರ್ಮಿಸಲಾಗುವ ವಸತಿ ಕಾರ್ಯಾಗಾರಗಳ ಅರ್ಹತಾ ಮಾನದಂಡಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿ ಆದಾಯ ಮಿತಿ ವಾರ್ಷಿಕ ರೂ. ೩೦,೦೦೦ಕ್ಕಿಂತ ಕಡಿಮೆ ಇರಬೇಕಾಗಿದ್ದು ಹೂಡಬೇಕಾದ ಮೂಲ ಬಂಡವಾಳ ರೂ. ೩೦,೦೦೦ ರೂಪಾಯಿಗಳಿದ್ದು ಈ ವರಮಾನದವರು ಮೂಲ ಬಂಡವಾಳವನ್ನು ಹೊಂದಿಸುವುದು ಹೇಗೆ, ಇಂತಹ ಸೂಕ್ತವಲ್ಲದ ನಿಯಮಗಳನ್ನು ಮಾರ್ಪಡಿಸಲು ಸರ್ಕಾರ ಯಾವಾಗ ಕ್ರಮ ವಹಿಸುವುದು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹಲವು ಪಾರಂಪರಿಕ ಮತ್ತು ಕುಲಕಸುಬು ಹೊಂದಿರುವ ಹಲವು ಸಮುದಾಯಗಳಿದ್ದು ಅವರಿಗೆ ಗೃಹ ಕೈಗಾರಿಕೆ ಸ್ಥಾಪಿಸಲು ಮತ್ತು ಮುಂದುವರಿಸಲು ಅಗತ್ಯವಿರುವ ಕಟ್ಟಡ, ವಿದ್ಯುತ್, ವಿವಿಧ ನಿರಾಪೇಕ್ಷಣ ಪತ್ರಗಳು, ಮೂಲ ಬಂಡವಾಳ, ಸಾಲ ಸಹಾಯಧನ ಇತ್ಯಾದಿಗಳನ್ನು ಒದಗಿಸುವಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## TDR ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳ ಕುರಿತು.

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೩ (೨೫೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ TDR ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳ ನಿಯಮಗಳೇನು ; ಅವುಗಳ ನಿರ್ವಹಣೆಯನ್ನು ಯಾರು ನಿರ್ವಹಿಸುತ್ತಿದ್ದಾರೆ ; ನಗರ ಸ್ಥಳೀಯ ಸಂಸ್ಥೆಗಳೇ ಅಥವಾ ಸ್ಥಳೀಯ ಯೋಜನಾ ಪ್ರಾಧಿಕಾರಗಳೇ ; (ವಿವರ ನೀಡುವುದು)

(ಆ) ಮಂಗಳೂರು ಮಹಾ ನಗರ ಪಾಲಿಕೆಯಲ್ಲಿ ಯಾವ ರೀತಿಯಲ್ಲಿ TDR ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳನ್ನು ನಿರ್ವಹಿಲಾಗುತ್ತಿದೆ ; ಇವುಗಳನ್ನು ತಂತ್ರಾಂಶಗಳ ಮೂಲಕ ದಾಖಲೀಕರಣ ಮತ್ತು ವರ್ಗಾವಣೆಯನ್ನು ಮಾಡಲಾಗುತ್ತಿದೆಯೇ ; ಮಾಡಿದ್ದಲ್ಲಿ ಯಾವಾಗ ಮಾಡಲು ಕ್ರಮ ವಹಿಸಲಾಗುವುದು ;

(ಇ) ಮಂಗಳೂರು ಮಹಾ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸಾರ್ವಜನಿಕರು ಸಾರ್ವಜನಿಕ ಉದ್ದೇಶಕ್ಕಾಗಿ ಸಕ್ಷಮ ಪ್ರಾಧಿಕಾರಗಳಿಗೆ ಬಿಟ್ಟುಕೊಡುವ ಜಾಗಗಳಿಗೆ ಯಾವ ದರದಲ್ಲಿ TDR ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಸದರಿ ಜಿಲ್ಲೆಯ ಮಹಾನಗರ ಪಾಲಿಕೆಯಲ್ಲಿ ಇಲ್ಲಿಯವರೆಗೆ ಎಷ್ಟು TDR ವರ್ಗಾಯಿಸಬಹುದಾದ ಅಭಿವೃದ್ಧಿ ಹಕ್ಕುಗಳ ಪ್ರಮಾಣ ಪತ್ರಗಳನ್ನು ಸೃಜಿಸಲಾಗಿದೆ ; ಮತ್ತು ಎಷ್ಟು TDRಗಳನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗಿದೆ ? (ಕಳೆದ ಮೂರು ವರ್ಷಗಳ ವಿವರವನ್ನು ನೀಡುವುದು)

## ಸಹಕಾರ ಸಂಘಗಳ ಚುನಾವಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೪ (೨೫೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ ೦೧-೦೧-೨೦೨೪ ರಿಂದ ౩೧-೧೨-೨೦೨೪ ರವರೆಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಚುನಾವಣೆ ನಡೆಸಬೇಕಾದ ಸಹಕಾರಿ ಸಂಘಗಳೆಷ್ಟು/ಬ್ಯಾಂಕುಗಳೆಷ್ಟು ; ಸಹಕಾರಿ ಕಾಯ್ದೆ ಪ್ರಕಾರ ಚುನಾವಣೆ ನಡೆಸಬೇಕಾದವರು ಯಾರು ; (ವಿವರ ನೀಡುವುದು)

(ಆ) ಈ ಜಿಲ್ಲೆಗಳ ಇತರ ಇಲಾಖೆಯ ನೌಕರರು ಲಭ್ಯವಿದ್ದರೂ ಸಹಕಾರ ಇಲಾಖೆಯ ನೌಕರರನ್ನು ಒಂದಕ್ಕಿಂತ ಹೆಚ್ಚು ಸಹಕಾರ ಸಂಘಗಳ ಚುನಾವಣೆಗೆ ರಿಟರ್ನಿಂಗ್ ಅಧಿಕಾರಿಯಾಗಿ ನೇಮಿಸಲಾಗಿದೆಯೇ ; ನೇಮಿಸಿದಲ್ಲಿ ಇಂತಹ ನೇಮಕಾತಿಗೆ ಕಾರಣವೇನು ;

(ಇ) ಈ ರೀತಿ ನೇಮಿಸಲಾದ ಸಹಕಾರ ಇಲಾಖೆಯ ನೌಕರರು ಚುನಾವಣಾ ಪ್ರಕ್ರಿಯೆಗಾಗಿ ವಸ್ತುಗಳ ಖರೀದಿ ಹಾಗೂ ಚುನಾವಣಾ ಸಿಬ್ಬಂದಿಗಳ ನೇಮಕಾತಿಯಲ್ಲಿ ಅಕ್ರಮ ಎಸಗಿರುವುದು ಇಲಾಖೆಯ ಗಮನಕ್ಕೆ ಬಂದ ಪ್ರಕರಣಗಳಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ?

(ಈ) ಮುಂದಿನ ದಿನಗಳಲ್ಲಿ ಈ ರೀತಿ ಸಹಕಾರಿ ಕಾಯ್ದೆಯನ್ವಯ ಕ್ರಮ ಪ್ರಕಾರವಾಗಿ ಸಹಕಾರಿ ಸಂಘಗಳ/ಬ್ಯಾಂಕುಗಳ ಚುನಾವಣೆ ನಡೆಸಲು ಯಾವ ರೀತಿಯ ಕ್ರಮಕೈಗೊಳ್ಳಲಾಗುವುದು ?

## ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ಬಡಾವಣೆ ವಿನ್ಯಾಸ ನಕ್ಷೆ ಅನುಮೋದನೆ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೫ (೨೫೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ರಾಜ್ಯದ ಎಲ್ಲಾ ನಗರ ಮತ್ತು ಗ್ರಾಮಾಂತರ ಪ್ರದೇಶಗಳಿಗೆ ಮಹಾಯೋಜನೆಯನ್ನು ತಯಾರಿಸಲಾಗಿದೆಯೇ ; ತಯಾರಿಸದಿದ್ದಲ್ಲಿ ಕಾರಣಗಳೇನು ; ಯಾವಾಗ ಮಹಾ ಯೋಜನೆಯನ್ನು ತಯಾರಿಸಲಾಗುವುದು ;

(ಆ) ಸರಕಾರದ ಆದೇಶದ ಹಿನ್ನಲೆಯಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯು ಏಕ ಮತ್ತು ಬಹು ನಿವೇಶನ ಬಡಾವಣೆ ನಕ್ಷೆ ವಿನ್ಯಾಸ ಅನುಮೋದನೆ ಮಾಡುತ್ತಿದ್ದು ಮಹಾಯೋಜನೆಯ ಅನುಪಸ್ಥಿತಿಯಲ್ಲಿ ಯಾವ ನಿಯಮಗಳು ಅನ್ವಯಿಸುತ್ತಿದೆ ; ಇದಕ್ಕೆ ನಿಯಮಗಳಲ್ಲಿ ಅವಕಾಶವಿದೆಯೇ ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಗ್ರಾಮ ಠಾಣಾ ಕಲ್ಪನೆಯಿಲ್ಲದೆ ಭೌಗೋಳಿಕವಾಗಿ ಮನೆಗಳು ಹರಡಿಕೊಂಡಿದ್ದು ಹಾಗೂ ಕೃಷಿ ಜಾಗದ ನಡುವೆ ಇದ್ದು ಈ ಮನೆಗಳಿಗೆ ಏಕ ಮತ್ತು ಬಹು ನಿವೇಶನ ಬಡಾವಣೆ ನಕ್ಷೆ ವಿನ್ಯಾಸ ಅನುಮೋದನೆ ಮಾಡುವ ಬಗ್ಗೆ ಇರುವ ಸಮಸ್ಯೆಗಳ ಕುರಿತು ಯಾವ ರೀತಿ ಕ್ರಮವಹಿಸಲಾಗುತ್ತಿದೆ ;

(ಈ) ಗ್ರಾಮಾಂತರ ಪ್ರದೇಶದಲ್ಲಿ ಏಕ ಮತ್ತು ಬಹು ನಿವೇಶನ ಬಡಾವಣೆ ನಕ್ಷೆ ವಿನ್ಯಾಸ ಅನುಮೋದನೆ ಕುರಿತಂತೆ ಸಮಗ್ರ ನಿಯಮಾವಳಿಗಳನ್ನು ಯಾವಾಗ ರೂಪಿಸಲಾಗುವುದು ?

## ಸ್ಮಾರ್ಟ್ ಸಿಟಿ ಕಾಮಗಾರಿಗಳು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೬ (೨೨೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ರಾಜ್ಯದ ವಿವಿಧ ನಗರಗಳ ಅಭಿವೃದ್ಧಿಗೆ ಕೇಂದ್ರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಆ) ಈ ಅನುದಾನದ ಮೂಲಕ ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕಾಮಗಾರಿಗಳನ್ನು ಕೈಗೊಳಲಾಗಿದೆ ;

(ಇ) ರಾಜ್ಯ ಸರ್ಕಾರವು ಅನುದಾನವನ್ನು ಬಳಸಿಕೊಳ್ಳುವಲ್ಲಿ ಮತ್ತು ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಫಲವಾಗಿದೆಯೇ ;

(ಈ) ಇಲ್ಲವಾದಲ್ಲಿ, ಈ ಅನುದಾನದಿಂದ ಕೈಗೊಂಡ ಕಾಮಗಾರಿಗಳು ಯಾವ ಹಂತದಲ್ಲಿವೆ ?

## ಗಣಿ ಪ್ರದೇಶಗಳ ವಿಷಕಾರಿ ನೀರನ್ನು ಪರಿಸರ ಸ್ನೇಹಿಗೊಳಿಸುವ ಕುರಿತು.

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೭ (೨೨೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಕ್ರಿಯವಾಗಿರುವ ಅಥವಾ ಕೈಬಿಟ್ಟಿರುವ ಗಣಿ ಪ್ರದೇಶಗಳಲ್ಲಿ ಹರಿಯುವ ನೀರು ಕಲುಷಿತಗೊಂಡು ವಿಷಕಾರಿಯಾಗಿ ಪರಿಣಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಗಣಿ ನೀರಿನ ಸಂಸ್ಕರಣೆಗೆ ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆಯೇ ;

(ಇ) ವಿಷಕಾರಿ ನೀರನ್ನು ಪರಿಸರ ಸ್ನೇಹಿಗೊಳಿಸಿ ಸಮುದಾಯದ ಉದ್ದೇಶಗಳಿಗೆ ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದೇ ?

## ಪೌರ ಕಾರ್ಮಿಕರನ್ನು ಅನ್ಯ ಕೆಲಸಗಳಿಗೆ ಬಳಕೆ ಮಾಡಿಕೊಳ್ಳುತ್ತಿರುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮ (೨೨೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪೌರ ಕಾರ್ಮಿಕರುಗಳಿಗೆ ನಿಗದಿಪಡಿಸಿದ ಕೆಲಸಗಳನ್ನು ಹೊರತುಪಡಿಸಿ ಅವರುಗಳನ್ನು ಅನ್ಯ ಕೆಲಸಗಳಿಗೆ ಬಳಕೆ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಬಂಧ ಎಲ್ಲೆಲ್ಲಿ ದೂರುಗಳು ದಾಖಲಾಗಿವೆ ;

(ಇ) ಕಾರ್ಮಿಕರ ಅಸಹಾಯಕತೆಯನ್ನು ದುರುಪಯೋಗಪಡಿಸಿಕೊಳ್ಳದಿರುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ?

## 'ಇ' ಖಾತೆಗಳನ್ನು ಸಕಾಲಕ್ಕೆ ನೀಡದಿರುವ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೯ (೨೪೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಸಭೆ ಮತ್ತು ಪುರಸಭೆಗಳಲ್ಲಿ 'ಇ' ಖಾತೆಗಾಗಿ ಅರ್ಜಿ ಸಲ್ಲಿಸಿದ ನಂತರ ಎಷ್ಟು ದಿನಗಳಲ್ಲಿ 'ಇ' ಖಾತೆ ಮಾಡಬೇಕೆಂದು ಸರ್ಕಾರದ ಆದೇಶವಿರುತ್ತದೆ ; (ಆದೇಶ ಪ್ರತಿ ಒದಗಿಸುವುದು)

(ಆ) 'ಇ' ಖಾತೆಗಾಗಿ ಅರ್ಜಿ ಮತ್ತು ಇತರೆ ದಾಖಾಲಾತಿಗಳನ್ನು ಸಲ್ಲಿಸಿದ ನಂತರ ತಿಂಗಳಾನುಗಟ್ಟಲೆ ವಿಳಂಬ ಆಗುತ್ತಿರುವುದು ನಿಜವೇ ;

(ಇ) ರಾಮನಗರ ನಗರಸಭೆಯಲ್ಲಿ ಕಳೆದ ಒಂದು ವರ್ಷದಲ್ಲಿ 'ಇ' ಖಾತೆಗಾಗಿ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ; ಮತ್ತು ಈ ಅರ್ಜಿಗಳನ್ನು ಎಂದು ವಿಲೇವಾರಿ ಮಾಡಲಾಗಿದೆ;

(ಈ) ರಾಮನಗರ ನಗರಸಭೆಯಲ್ಲಿ ಖಾತೆಯ ಸ್ವತ್ತುದಾರರು ಸ್ವತ್ತಿನ ತೆರಿಗೆ–ಕಂದಾಯ ಪಾವತಿ ನಂತರ ಕಂದಾಯ ಪಾವತಿಯನ್ನು ನಿಗಧಿತ ಕಾಲಾವಧಿಯಲ್ಲಿ ದಾಖಾಲಿಸದೇ ಮತ್ತು ಸ್ವತ್ತುದಾರರು ಪಾವತಿ ರಸೀದಿಗಳನ್ನು ನಗರಸಭೆಗೆ ಸಲ್ಲಿಸಿದಾಗ ಮಾತ್ರ ದಾಖಲು ಮಾಡುತ್ತಿರುವುದು ನಿಜವೇ ; ಕಂದಾಯ ಪಾವತಿಯನ್ನು ಆಯಾ ಹಣಕಾಸಿನ ವರ್ಷದ ನಿಗಧಿತ ಕಾಲಾವಧಿಯಲ್ಲಿ ದಾಖಲಿಸಲು ಕ್ರಮ ವಹಿಸಲಾಗುವುದೇ ;

(ಉ) ನಗರಸಭೆಯ ಕಂದಾಯ ಶಾಖೆಯಲ್ಲಿ ನೀಡುವ ವಿವಿಧ ನಕಲು ಪ್ರತಿಗಳಿಗೆ ವಿಧಿಸುವ ಶುಲ್ಕವೆಷ್ಟು ?

## ಹೊಸದುರ್ಗ ತಾಲ್ಲೂಕಿನಲ್ಲಿ ಜವಳಿ ಪಾರ್ಕ್ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೦ (೨೨೩) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆಯ ಹೊಸದುರ್ಗದಲ್ಲಿ ಈ ಹಿಂದೆ ಜವಳಿ ಪಾರ್ಕ್ ನಿರ್ಮಾಣ ಮಾಡಲಾಗಿದ್ದು ಆ ಜವಳಿ ಪಾರ್ಕ್ ಪ್ರಸ್ತುತ ಕಾರ್ಯನಿರ್ವಹಿಸುತ್ತಿದೆಯೇ ;

(ಆ) ಇಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಜವಳಿ ಪಾರ್ಕ್‌ನ್ನು ಸ್ಥಗಿತಗೊಳಿಸಲಾಗಿದೆಯೇ ; ಸ್ಥಗಿತಗೊಳಿಸಿದ್ದಲ್ಲಿ, ಕಾರಣಗಳೇನು ; ಸದರಿ ಜವಳಿ ಪಾರ್ಕ್‌ನ್ನು ಪುನಶ್ಚೇತನಗೊಳಿಸಲು ಸರ್ಕಾರದ ಕ್ರಮವೇನು ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಅತಿ ಹೆಚ್ಚು ಜವಳಿ ಕಾರ್ಮಿಕರು ಹೊಸದುರ್ಗದಲ್ಲಿ ನೆಲೆಸಿರುವುದರಿಂದ ಈ ತಾಲ್ಲೂಕಿನಲ್ಲಿ ಹೊಸದಾಗಿ ಜವಳಿ ಪಾರ್ಕ್ ನಿರ್ಮಾಣ ಮಾಡುವುದು ಅನಿವಾರ್ಯವಾಗಿದ್ದು, ಇದರ ಬಗ್ಗೆ ಸರ್ಕಾರದ ನಿಲುವೇನು ?

## ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳ ಉದ್ಯಮಗಳ ಬಗ್ಗೆ

**ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೧ (೨೧೯) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆ ವ್ಯಾಪ್ತಿಗೆ ಬರುವ ಉದ್ಯಮಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಣ್ಣ ಕೈಗಾರಿಕೆ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು ಶಾಸನಬದ್ಧ ಮಂಡಳಿಗಳು, ಉದ್ಯಮಗಳು, ಸೊಸೈಟಿಗಳು ಹಾಗೂ ಇತರೆ ಅಂಗ ಸಂಸ್ಥೆಗಳು ಯಾವುವು ;

(ಇ) ರಾಜ್ಯದಲ್ಲಿ ಎಷ್ಟು ಸಣ್ಣ ಕೈಗಾರಿಕೆ ಘಟಕಗಳು ಪ್ರಾರಂಭವಾಗಿ ಕಾರ್ಯಾಚರಣೆಯಲ್ಲಿವೆ ; ಇವುಗಳಿಗೆ ಸರ್ಕಾರ ವಿಧಿಸಿರುವ ಮಾನದಂಡಗಳೇನು ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೨ (೨೨೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರಗಳು ಯಾವುವು ; ಸದರಿ ಪ್ರಾಧಿಕಾರಗಳ ಸ್ಥಾಪನೆಯ ಉದ್ದೇಶ ಮತ್ತು ಕಾರ್ಯವ್ಯಾಪ್ತಿ ಏನು ;

(ಆ) ಈ ಪ್ರಾಧಿಕಾರಗಳು ಮಾಡಿರುವ ಅಭಿವೃದ್ಧಿ ಕಾರ್ಯಗಳು ಯಾವುವು; ಬಹುತೇಕ ಪ್ರಾಧಿಕಾರಗಳು ಮೂಲ ಉದ್ದೇಶವನ್ನೇ ಮರೆತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಕಳೆದ ೫ ವರ್ಷಗಳಿಂದ ಈ ಪ್ರಾಧಿಕಾರಗಳು ರಚಿಸಿರುವ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳನ್ನು ನಿರ್ಮಿಸಿ ಹಂಚಿಕೆ ಮಾಡಿವೆ ; ಈ ನಿವೇಶನಗಳ ಪೈಕಿ ಆರ್ಥಿಕವಾಗಿ ದುರ್ಬಲರಾದವರು ಸೇರಿದಂತೆ ಮಧ್ಯಮ ವರ್ಗದ ಜನರಿಗೆ ಎಷ್ಟು ನಿವೇಶನ ಹಾಗೂ ಮನೆಗಳನ್ನು ನಿರ್ಮಿಸಿ ಹಸ್ತಾಂತರಿಸಲಾಗಿದೆ ; (ಪ್ರಾಧಿಕಾರವಾರು ಮಾಹಿತಿ ನೀಡುವುದು)

(ಈ) ಈ ಪ್ರಾಧಿಕಾರಗಳು ಹೆಚ್ಚು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸಿ ಆ ಮೂಲಕ ಬಡವರಿಗೆ ಅನುಕೂಲ ಮಾಡಿಕೊಡುವ ಯೋಜನೆ/ಕಾರ್ಯಗಳನ್ನು ಕೈಗೆತ್ತಿಕೊಳ್ಳುವಂತೆ ಮಾಡಲು ಸರ್ಕಾರ ಕ್ರಮ ವಹಿಸುವುದೇ ?

## ಚಿತ್ರದುರ್ಗ ಜಿಲ್ಲೆಯಲ್ಲಿ ಇರುವ ಜಲ್ಲಿ ಕ್ರಷರ್‌ಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೩ (೨೨೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು ಎಷ್ಟು ಜಲ್ಲಿ ಕ್ರಷರ್‌ಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಆ ಜಲ್ಲಿ ಕ್ರಷರ್‌ಗಳಿಂದ ಸರ್ಕಾರಕ್ಕೆ ಎಷ್ಟು ಆದಾಯ ಬರುತ್ತಿದೆ ;

(ಇ) ಸರ್ಕಾರಿ ಕಟ್ಟಡ ಕಾಮಗಾರಿಗಳನ್ನು ನಿರ್ಮಾಣ ಮಾಡಲು ಅಗತ್ಯವಿರುವ ಸಾಮಗ್ರಿಗಳನ್ನು ಪೂರೈಸುವಾಗ ಸದರಿ ಕ್ರಷರ್‌ಗಳಿಗೆ ವಿನಾಯಿತಿ ನೀಡಲಾಗಿದೆಯೇ ; ಇಲ್ಲದಿದ್ದಲ್ಲಿ, ಸರ್ಕಾರವು ಈ ನಿಟ್ಟಿನಲ್ಲಿ ವಿನಾಯಿತಿ ನೀಡಲು ಸೂಕ್ತ ಆದೇಶ ಹೊರಡಿಸುವುದೇ ? (ವಿವರ ಒದಗಿಸುವುದು)

## ಚಿತ್ರದುರ್ಗ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೪ (೨೨೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಎಷ್ಟು ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಿವೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಈ ಕೈಗಾರಿಕೆಗಳಲ್ಲಿ ಉದ್ಯೋಗ ಮಾಡುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಇ) ಜಿಲ್ಲೆಯ ಚಳ್ಳಕೆರೆ ಹಾಗೂ ಮೊಳಕಾಲ್ಮೂರುಗಳಲ್ಲಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಈ) ಚಿತ್ರದುರ್ಗ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಅನುಕೂಲವಿರುವುದರಿಂದ ರಾಜ್ಯ ಸರ್ಕಾರದ ವತಿಯಿಂದ ಯಾವುದಾದರೂ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶ ಇದೆಯೇ ? (ವಿವರ ಒದಗಿಸುವುದು)

# ಕಬ್ಬಿಣ ಅದಿರು ಮ್ಯಾಂಗನೀಸ್ ಮತ್ತು Limestone ಗಣಿಗಾರಿಕೆ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೫ (೨೬೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಕಬ್ಬಿಣದ ಅದಿರು ಮತ್ತು ಮ್ಯಾಂಗನೀಸ್ ಅದಿರುಗಳ ಅಕ್ರಮ ಗಣಿಗಾರಿಕೆ ನಡೆದಿದೆಯೇ; (ಅದರ ವಿವರಗಳನ್ನು ನೀಡುವುದು)

(ಆ) ಕರ್ನಾಟಕ ರಾಜ್ಯದಲ್ಲಿ **Limestone** ಗಣಿಗಾರಿಕೆ ಇದೆಯೇ; ಇದ್ದಲ್ಲಿ, ಎಷ್ಟು ಎಕರೆಯಲ್ಲಿ **Limestone** ಗಣಿಗಾರಿಕೆ ನಡೆಯುತ್ತಿದೆ;

(ಇ) **Limestone** ಗಣಿಗಾರಿಕೆಯು ದೊಡ್ಡ-ಖನಿಜಗಳು ಅಥವಾ ಅಲ್ಪ-ಖನಿಜಗಳು ಎಂದು ಪರಿಗಣಿಸಲಾಗುತ್ತದೆ ಮತ್ತು ಈ ಖನಿಜಗಳು ಮೇಲೆ ಯಾವ ಆಧಾರದ ಮೇಲೆ **Royalty** ಅನ್ನು ವಿಧಿಸಲಾಗುತ್ತಿದೆ. ಅದಕ್ಕೆ ಕೇಂದ್ರ ಸರ್ಕಾರದ ಮಾನದಂಡಗಳೇನು ;

(ಈ) **Limestone** ಗಣಿಗಾರಿಕೆಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ಎಷ್ಟು ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇವೆ; ಮತ್ತು ಈ ಪ್ರಕರಣಗಳು ಎಷ್ಟು ವರ್ಷಗಳಿಂದ ಯಾವ ಯಾವ ನ್ಯಾಯಾಲಯಗಳಲ್ಲಿ ಬಾಕಿ ಇವೆ; (ಪ್ರಕರಣಗಳ ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆಯ ಕಾರಣದಿಂದ ಸೀಜ್ ಮಾಡಿರುವ ಅದಿರನ್ನು ಎಲ್ಲಿ ಶೇಖರಿಸಲಾಗಿದೆ ; ಮತ್ತು ಈ ಅದಿರನ್ನು ಯಾವ

ಕಾರಣಕ್ಕಾಗಿ ಹರಾಜು ಮಾಡಿರುವುದಿಲ್ಲ ಒಂದು ವೇಳೆ ಹರಾಜು ಮಾಡಿದ್ದಲ್ಲಿ ಸರ್ಕಾರದ ಬೊಕ್ಕಸಕ್ಕೆ ಎಷ್ಟು ಲಾಭ ನಿರೀಕ್ಷಿಸಬಹುದಾಗಿದೆ ? (ವಿವರಿಸುವುದು)

## ಸಣ್ಣ ಕೈಗಾರಿಕೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತಾದವರು) :-**

೧೬೬ (೨೬೨) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಲಭ್ಯಗಳಿಲ್ಲದೆ ಕೈಗಾರಿಕೆಗಳ ದೈನಂದಿನ ಕಾರ್ಯಚರಣೆಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕೈಗಾರಿಕಾ ಪ್ರದೇಶದಲ್ಲಿ ಘನತ್ಯಾಜ್ಯ ವಿಲೇವಾರಿ (ಕೈಗಾರಿಕಾ ತ್ಯಾಜ್ಯ) ಸಾರ್ವಜನಿಕ ಸಂಪರ್ಕ (ಬಸ್ ಸಂಪರ್ಕ, ಮೆಟ್ರೋ ಸಂಪರ್ಕ ಇತ್ಯಾದಿ) ಗಳನ್ನು ಸುವ್ಯವಸ್ಥಿತವಾಗಿ ಕೈಗೊಳ್ಳಲು ಇಲಾಖೆಯು ಯಾವ ಕ್ರಮಕೈಗೊಂಡಿದೆ ; ಸದರಿ ಕೈಗಾರಿಕಾ ಪ್ರದೇಶದಲ್ಲಿ ಮಾನವ ಹಕ್ಕು ಮತ್ತು ಕೈಗಾರಿಕೆಗಳ ಸುರಕ್ಷತೆಗಾಗಿ ಎಷ್ಟು ಕ್ಯಾಮರಾಗಳನ್ನು ಅಳವಡಿಸಲಾಗಿದೆ ಮತ್ತು ಎಷ್ಟು ಕಾರ್ಯನಿರ್ವಹಿಸುತ್ತಿವೆ ; ಈ ಕೈಗಾರಿಕಾ ಪ್ರದೇಶದಲ್ಲಿ ಫುಟ್‌ಪಾತ್‌ಗಳ ನಿರ್ಮಾಣ ಮಾಡಲಾಗಿದೆಯೇ ಮತ್ತು ಸಾರ್ವಜನಿಕರ ಉಪಯೋಗಕ್ಕಾಗಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆಯೇ ; ನಿರ್ಮಿಸಿದ್ದಲ್ಲಿ, ಎಷ್ಟು ನಿರ್ಮಿಸಲಾಗಿದೆ ;

(ಆ) ಈ ಪ್ರದೇಶದಲ್ಲಿ ಶೌಚಾಲಯಗಳನ್ನು ನಿರ್ಮಿಸಿ ಹಾಗೂ ಬೀದಿ ದೀಪಗಳನ್ನು ಅಳವಸಲಾಗಿದೆಯೇ ; ಸದರಿ ಕೈಗಾರಿಕಾ ಪ್ರದೇಶದ ಅಭಿವೃದ್ಧಿಯಲ್ಲಿ ಸರ್ಕಾರದ ಮತ್ತು ಖಾಸಗಿ ಕೈಗಾರಿಕೆ ವ್ಯಾಪಾರಸ್ಥರ ಪಾಲು ಎಷ್ಟು ಹಾಗೂ ಸರ್ಕಾರದ ವತಿಯಿಂದ ಈ ಖಾಸಗಿ ಕೈಗಾರಿಕೆಗಳನ್ನು ಹೇಗೆ ನಿಯಂತ್ರಿಸಲಾಗುತ್ತಿದೆ ಮತ್ತು ಈ ಖಾಸಗಿ ಕೈಗಾರಿಕೆಗಳು ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಸರ್ಕಾರವು ೨೦೧೩ನೇ ಸಾಲಿನಲ್ಲಿ ಎಲೆಕ್ಟ್ರಾನಿಕ್ ಸಿಟಿ ಕೈಗಾರಿಕಾ ಪ್ರದೇಶಕ್ಕೆ "ELCITA" ಎಂಬ ಪ್ರಾಧಿಕಾರ ಸ್ಥಾಪಿಸಿರುತ್ತದೆ. ಆದರೆ ಪೀಣ್ಯ ಕೈಗಾರಿಕಾ ಪ್ರದೇಶ ೧೯೭೦ನೇ ಸಾಲಿನಲ್ಲಿ ಸ್ಥಾಪಿಸಲಾಗಿದ್ದು, ಈವರೆವಿಗೂ ಈ ಪ್ರದೇಶಕ್ಕೆ ಪ್ರಾಧಿಕಾರ ರಚನೆ ಮಾಡದಿರಲು ಕಾರಣಗಳೇನು ;

(ಈ) ಈ ಕೈಗಾರಿಕಾ ಪ್ರದೇಶದಲ್ಲಿರುವ ಗಾರ್ಮೆಂಟ್ಸ್ ಕಾರ್ಖಾನೆಗಳಲ್ಲಿ ಬಹುತೇಕ ನೌಕರರು ಮಹಿಳೆಯರಿದ್ದು, ಇವರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆಯೇ ;

(ಉ) ಈ ಕೈಗಾರಿಕಾ ಪ್ರದೇಶದ ಅಭಿವೃದ್ಧಿಗಾಗಿ ೧೦೦ ಕೋಟಿ ಅನುದಾನ ನೀಡಲಾಗಿದೆಯೇ ; ಇದ್ದಲ್ಲಿ, ಅನುದಾನ ಮೊತ್ತವನ್ನು ಯಾವ ಯಾವ ಕಾಮಗಾರಿಗೆ ಬಳಸಲಾಗಿದೆ ಮತ್ತು ಎಷ್ಟು ಮೊತ್ತ ಉಳಿಕೆಯಾಗಿರುತ್ತದೆ ; ಈ ಕಾಮಗಾರಿಗಳು ಪೂರ್ಣಗೊಂಡಿದೆಯೇ ; ಮತ್ತು ಈ ಕಾಮಗಾರಿಗಳು ಪಡೆದುಕೊಂಡಿರುವ ಗುತ್ತಿದಾರರ ವಿವರಗಳು ಹಾಗೂ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಕ್ವಿನ್ ಸಿಟಿ ಅನುಷ್ಠಾನದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತಾದವರು) :-**

೧೬೭ (೨೬೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದ ರಾಜಧಾನಿಯಲ್ಲಿ ಜ್ಞಾನ, ಯೋಗಕ್ಷೇಮ ಮತ್ತು ನಾವೀನ್ಯತೆಯನ್ನು ಒಳಗೊಂಡಂತೆ ಯೋಜಿಸಲಾದ ಕ್ವಿನ್ ಸಿಟಿ (KWIN City) ಯನ್ನು ಬೆಂಗಳೂರು ನಗರದಿಂದ ಎಷ್ಟು ದೂರದಲ್ಲಿ ನಿರ್ಮಿಸಲು ತೀರ್ಮಾನಿಸಲಾಗಿದೆ ;

(ಆ) ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಸರ್ಕಾರದ ಪಾಲು ಮತ್ತು ಖಾಸಗಿ ಹೂಡಿಕೆದಾರರ ಪಾಲು ಎಷ್ಟು ಮತ್ತು ಈ ಯೋಜನೆಯಿಂದ ಸರ್ಕಾರದ ಬೊಕ್ಕಸಕ್ಕೆ ಉಂಟಾಗುವ ಲಾಭವೆಷ್ಟು ;

(ಇ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಎಷ್ಟು ಎಕರೆ ಭೂಮಿಯ ಅವಶ್ಯಕತೆ ಇದೆ ಮತ್ತು ಇಲ್ಲಿಯವರೆಗೆ ಎಷ್ಟು ಎಕರೆ ಭೂಮಿಯನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ ಹಾಗೂ ಈ ಯೋಜನೆಯ ಅನುಷ್ಠಾನದಲ್ಲಿ ಯಾವ ಯಾವ ಕ್ಷೇತ್ರಕ್ಕೆ ಹೆಚ್ಚು ಒತ್ತು ನೀಡಲಾಗಿದೆ ;

(ಈ) ಈ ಯೋಜನೆ ಅನುಷ್ಠಾನಕ್ಕೆ ಭೂಸ್ವಾಧೀನಪಡಿಸಿಕೊಳ್ಳಲಾಗುವ ರೈತರ ಜಮೀನಿನ ಬದಲಾಗಿ ಕ್ವಿನ್ ಸಿಟಿಯಲ್ಲಿ ಅವರ ಕುಟುಂಬದವರಿಗೆ ಉದ್ಯೋಗ ಕಲ್ಪಿಸಲಾಗುವುದೆ ; ಮತ್ತು ಈ ಯೋಜನೆಯಿಂದ ಎಷ್ಟು ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ? (ಮಾಹಿತಿಯನ್ನು ಒದಗಿಸುವುದು)

## ಕೋ-ಆಪರೇಟಿವ್ ಬ್ಯಾಂಕ್ ಸಹಕಾರ ಸಂಘಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತಾದವರು) :-**

೧೬೮ (೨೬೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ನೋಂದಾಯಿಸಲಾದ ಸಹಕಾರ ಬ್ಯಾಂಕ್ ಮತ್ತು ಸಂಘಗಳೆಷ್ಟು; (ವಿವರಗಳನ್ನು ಒದಗಿಸುವುದು)

(ಆ) ಆದಾಯ ತೆರಿಗೆಯ ಸೆಕ್ಷನ್ ೮೦(ಪಿ)ಅಡಿಯಲ್ಲಿ ವಿನಾಯಿತಿಯನ್ನು ಹಿಂತೆಗೆದುಕೊಳ್ಳುವುದರಿಂದ ಹೆಚ್ಚಿನ ಸಹಕಾರ ಬ್ಯಾಂಕ್‌ಗಳು ಮತ್ತು ಸಂಘಗಳು ತೊಂದರೆಗಳನ್ನು ಎದುರಿಸುತ್ತಿವೆಯೇ ; (ವಿವರಗಳನ್ನು ಒದಗಿಸುವುದು)

(ಇ) ಈ ನಿಟ್ಟಿನಲ್ಲಿ ನಷ್ಟದಲ್ಲಿರುವ ಸಹಕಾರ ಬ್ಯಾಂಕ್‌ಗಳು ಮತ್ತು ಸಂಘಗಳನ್ನು ಪುನರುಜ್ಜೀವಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಲಿಂಬೆ ಬೆಳೆಗಾರರ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೧೬೯ (೧೫೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಲಿಂಬೆ ಬೆಳೆಗಾರರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಲಿಂಬೆ ಬೆಳೆ ಕಳೆದುಕೊಂಡ ರೈತರ ಸಂಖ್ಯೆ ಮತ್ತು ಜಮೀನು ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಲಿಂಬೆ ಬೆಳೆ ಕಳೆದುಕೊಂಡ ರೈತರಿಗೆ ಸರ್ಕಾರದಿಂದ ಬೆಳೆ ಪರಿಹಾರ ನೀಡಲಾಗಿದೆಯೇ : ನೀಡಿದ್ದಲ್ಲಿ ಯಾವ ಮಾನದಂಡಗಳ ಆಧಾರ ಮೇಲೆ ಮತ್ತು ಪರಿಹಾರ ನೇರವಾಗಿ ರೈತರ ಖಾತೆಗೆ ಮಾಡಲಾಗಿದೆ ; ಮತ್ತು ಬೆಳೆ ಪರಿಹಾರ ನೀಡುವುದು ಬಾಕಿ ಉಳಿದಿದೆಯೇ ; ಉಳಿದಿದ್ದಲ್ಲಿ ಯಾವ ಕಾರಣಕ್ಕೆ ಬಾಕಿ ಉಳಿಸಿಕೊಳ್ಳಲಾಗಿದೆ ; ಯಾವ ಕಾಲಮಿತಿಯೊಳಗೆ ರೈತರಿಗೆ ಬೆಳೆ ಪರಿಹಾರ ನೀಡಲಾಗುವುದು ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು;

(ಈ) ಹಾನಿಯಾದ ಲಿಂಬೆ ಬೆಳೆಗೆ ಪರಿಹಾರವಾಗಿ ಹೊಸ ಬೆಳೆ ಬೆಳೆಯಲು ಸರ್ಕಾರದಿಂದ ಕೈಗೊಂಡ ಕ್ರಮಗಳೇನು ; ಹಾಗೂ ರೈತರು ಲಿಂಬೆ ಬೆಳೆಯಲು ಸರ್ಕಾರವು ಯಾವ-ಯಾವ ಕಾರ್ಯಕ್ರಮಗಳನ್ನು ರೈತರಿಗಾಗಿ ರೂಪಿಸಿದೆ ? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕೈಮಗ್ಗ ನೇಕಾರರ ಸಹಕಾರ ಸಂಘಗಳ ಉಳುವಿಗಾಗಿ ಕೈಗೊಂಡ ಕ್ರಮಗಳ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೦ (೨೪೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೈಮಗ್ಗ ನೇಕಾರರ ಸಹಕಾರ ಸಂಘಗಳು ಉತ್ಪಾದಿಸುವ ವಸ್ತುಗಳ (ಮಾಲುಗಳ) ಮಾರಾಟಕ್ಕೆ ಶೇಕಡಾ ೨೦ ರಷ್ಟು ರಿಯಾಯಿತಿ ಪ್ರೋತ್ಸಾಹ (ರಿಬೇಟ್) ನೀಡಲಾಗುತ್ತಿರುವುದು ಸರಿಯಷ್ಟೆ ಆದರೆ, ಅದರಿಂದ ವಾಸ್ತವವಾಗಿ ನೇಕಾರರಿಗೆ ಯಾವುದೇ ಸಮರ್ಪಕ ಪ್ರತಿಫಲ ಸಿಗದಂತಾಗುತ್ತಿದ್ದು, ಅದನ್ನು ಶೇಕಡಾ ೪೦ ಕ್ಕೆ ವಿಸ್ತರಿಸಬೇಕು ಎಂದು ಹಲವಾರು ವರ್ಷಗಳಿಂದ ಬೇಡಿಕೆ ಇದ್ದು, ಸರ್ಕಾರ ನೇಕಾರರ ಸಹಕಾರ ಸಂಘಗಳ ಉಳುವಿಗಾಗಿ ೪೦% ಸಬ್ಸಿಡಿ (ರಿಯಾಯಿತಿ) ನೀಡುವ ಕ್ರಮಕ್ಕೆ ಮುಂದಾಗುವುದೇ ;

(ಆ) ಕೈಮಗ್ಗ ನೇಕಾರರಿಗೆ ಪ್ರೋತ್ಸಾಹ ನೀಡುವ ದಿಶೆಯಲ್ಲಿ ಕೈಮಗ್ಗ ನೇಕಾರಿಕೆ ಉದ್ಯೋಗದ ಉಳುವಿಗಾಗಿ ಸರ್ಕಾರದ ಎಲ್ಲಾ ಇಲಾಖೆಗಳ ಸಿಬ್ಬಂದಿಗಳು ಕೈಮಗ್ಗ ಉತ್ಪಾದಿತ ವಸ್ತುಗಳನ್ನು ಖರೀದಿಸಲು ಸರ್ಕಾರ ಆದೇಶ ಮಾಡಲಾಗುವುದೇ ;

(ಇ) ವೃತ್ತಿಪರ ನೇಕಾರರನ್ನು ಕಾರ್ಮಿಕರೆಂದು ಪರಿಗಣಿಸಬೇಕೆಂದು ಅನೇಕ ವರ್ಷಗಳಿಂದ ನೇಕಾರರ ಬೇಡಿಕೆ ಇದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಉಂಟಾದ ಪ್ರವಾಹದಿಂದಾಗಿ ತೋಟಗಾರಿಕೆ ಬೆಳೆಗಳಿಗೆ ಸಾಕಷ್ಟು ಹಾನಿಯಾಗಿರುವ ಬಗ್ಗೆ

**ಶ್ರೀ ಕೆ. ಪ್ರತಾಪಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧ (೧೪೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ವರ್ಷ ಧಾರಾಕಾರವಾಗಿ ಸುರಿದ ಮಳೆಯಿಂದಾಗಿ ದೊಡ್ಡ ಮಟ್ಟದ ಪ್ರವಾಹ ಉಂಟಾಗಿ,

ಜಿಲ್ಲೆಯಾದ್ಯಂತ ಹಲವಾರು ತೋಟಗಳು ಜಲಾವೃತಗೊಂಡಿದ್ದು ತೋಟಗಾರಿಕಾ ಬೆಳೆಗಳು ಸಾಕಷ್ಟು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಆ) ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಸಂಭವಿಸಿದ ಪ್ರವಾಹದಿಂದಾಗಿ ಹಾಳಾಗಿರುವ ತೋಟಗಾರಿಕೆ ಬೆಳೆಗಳ ಒಟ್ಟು ವಿಸ್ತೀರ್ಣವೆಷ್ಟು ; ನಷ್ಟದ ಒಟ್ಟು ಅಂದಾಜು ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸರ್ಕಾರವು ಸಂಕಷ್ಟಕ್ಕೀಡಾಗಿರುವ ತೋಟಗಾರಿಕೆ ಬೆಳೆಗಾರರಿಗೆ ಪರಿಹಾರದ ಪೂರ್ಣ ಮೊತ್ತವನ್ನು ಈಗಾಗಲೇ ಪಾವತಿಸಿದೆಯೇ, ಇಲ್ಲದಿದ್ದಲ್ಲಿ ಇನ್ನೂ ಬಾಕಿ ಇರುವ ಪರಿಹಾರದ ಮೊತ್ತವೆಷ್ಟು ;

(ಈ) ಈ ಹಣವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆಗೊಳಿಸಲಾಗುವುದು ; ಹಾನಿಗೀಡಾಗಿರುವ ತೋಟಗಾರಿಕೆ ಬೆಳೆಗಳ ಪುನಶ್ಚೇತನಕ್ಕೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಡಕೆಯ ಔಷಧೀಯ ಮತ್ತು ಗುಣಾತ್ಮಕ ಅಂಶಗಳ ಕುರಿತು ಸಂಶೋಧನಾತ್ಮಕ ವರದಿ ಪಡೆಯುವ ಬಗ್ಗೆ

**ಶ್ರೀ ಕೆ. ಪ್ರತಾಪಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೨ (೧೪೪೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಕೆ ಕ್ಯಾನ್ಸರ್ ಕಾರಕ ಎಂಬ ವರದಿಯನ್ನು ವಿಶ್ವ ಆರೋಗ್ಯ ಸಂಸ್ಥೆಯ ಅಂಗಸಂಸ್ಥೆಯಾದ ಐಎಆರ್‌ಸಿ (International Agency for Research on Cancer) ಪ್ರಕಟಿಸಿದ್ದು ಇದರಿಂದ ರಾಜ್ಯದಲ್ಲಿನ ಅಡಕೆ ಬೆಳೆಗಾರರ ಮೇಲೆ ಮತ್ತೊಮ್ಮೆ ಆತಂಕದ ಛಾಯೆ ಆವರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಂತರರಾಷ್ಟ್ರೀಯ ಮಟ್ಟದಲ್ಲಿ ಅಡಕೆ ಬಗ್ಗೆ ಋಣಾತ್ಮಕ ಭಾವನೆ ವ್ಯಕ್ತವಾಗುತ್ತಿರುವ ಹಿನ್ನಲೆಯಲ್ಲಿ ಅಡಕೆಯ ಔಷಧೀಯ ಮತ್ತು ಉತ್ತಮ ಗುಣಗಳನ್ನು ದಾಖಲೆಯ ಆಧಾರದಲ್ಲಿ ತಿಳಿಸಲು ಅಡಕೆ ಉತ್ಪನ್ನಗಳ ಬಗ್ಗೆ, ವ್ಯಾಪಕ ಸಂಶೋಧನೆಗೆ ಸರ್ಕಾರ ಈಗಲಾದರೂ ವ್ಯವಸ್ಥಿತ ಕ್ರಮವಹಿಸುವುದೇ ;

(ಇ) ನೂರಾರು ವರ್ಷಗಳಿಂದ ಜನರು ಅಡಕೆಯನ್ನು ಬಳಕೆ ಮಾಡುತ್ತಿದ್ದು, ಆರೋಗ್ಯದಿಂದಲೇ ಇದ್ದು ಮತ್ತು ಈ ಬಗ್ಗೆ ಅಡಕೆ ಕ್ಯಾನ್ಸರ್‌ಕಾರಕವಲ್ಲ ಎಂಬ ಸಂಗತಿಯನ್ನು ವೈದ್ಯರು ಹಾಗೂ ಸಂಶೋಧನಾ ಸಂಸ್ಥೆಗಳ ನೆರವಿನಿಂದ ಅಡಕೆಯ ಔಷಧೀಯ ಮತ್ತು ಉತ್ತಮ ಗುಣಗಳನ್ನು ದಾಖಲೆಯ ಆಧಾರದಲ್ಲಿ ಕೇಂದ್ರ ಸರ್ಕಾರಕ್ಕೆ ಮತ್ತು ಆ ಮೂಲಕ ವಿಶ್ವ ಆರೋಗ್ಯ ಸಂಸ್ಥೆಗೆ ವಿಸ್ತೃತ ವರದಿ ಸಲ್ಲಿಸಲು ಸರ್ಕಾರ ಕೂಡಲೇ ವಹಿಸಲಿರುವ ಕ್ರಮಗಳೇನು ?

## ಸಹಕಾರಿ ಸಂಸ್ಥೆಗಳಿಂದ ರೈತರಿಗೆ ದೊರೆಯುತ್ತಿರುವ ಸಾಲ ಮತ್ತು ಸೌಲಭ್ಯಗಳ ಬಗ್ಗೆ

**ಶ್ರೀ ಕೆ. ಪ್ರತಾಪಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೩ (೧೪೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರಿ ಸಂಸ್ಥೆಗಳಿಂದ ರೈತರಿಗೆ ದೊರೆಯುತ್ತಿರುವ ವಿವಿಧ ಸಾಲ ಸೌಲಭ್ಯಗಳು ಯಾವುವು ;

(ಆ) ರೈತ ಫಲಾನುಭವಿಗಳಿಗೆ ಅಲ್ಪಾವಧಿ, ಮಧ್ಯಮಾವಧಿ ಹಾಗೂ ಧೀರ್ಘಾವಧಿ ಸಾಲ ಪಡೆಯಲು ನಿಗಧಿಪಡಿಸಿರುವ ಮಾನದಂಡ ನಿಯಮ ಹಾಗೂ ಷರತ್ತುಗಳೇನು ;

(ಇ) ಕಳೆದ ಆರ್ಥಿಕ ವರ್ಷದಲ್ಲಿ ಸಹಕಾರ ಸಂಸ್ಥೆಗಳಿಂದ ರೈತರಿಗೆ ವಿತರಣೆಯಾಗಿರುವ ಅಲ್ಪಾವಧಿ ಮಧ್ಯಮಾವಧಿ ಹಾಗೂ ಧೀರ್ಘಾವಧಿ ಸಾಲದ ಒಟ್ಟು ಮೊತ್ತವೆಷ್ಟು ;

(ಈ) ಪ್ರಸ್ತುತ, ಆರ್ಥಿಕ ವರ್ಷದಲ್ಲಿ ಸಹಕಾರ ಸಂಸ್ಥೆಗಳಿಂದ ರೈತರಿಗೆ ಇದುವರೆಗೆ ವಿತರಣೆಯಾಗಿರುವ ಅಲ್ಪಾವಧಿ, ಮಧ್ಯಮಾವಧಿ ಹಾಗೂ ಧೀರ್ಘಾವಧಿ ಸಾಲದ ಒಟ್ಟು ಮೊತ್ತವೆಷ್ಟು ;

(ಉ) ಪ್ರಸ್ತುತ, ಆರ್ಥಿಕ ವರ್ಷದಲ್ಲಿ ಸಾಲ ಪಡೆಯಲು ಅರ್ಜಿ ಸಲ್ಲಿಸಿದ್ದ ಎಲ್ಲಾ ಅರ್ಹ ರೈತ ಫಲಾನುಭವಿಗಳಿಗೆ ಈಗಾಗಲೇ ಸಂಪೂರ್ಣವಾಗಿ ಸಾಲ ವಿತರಣೆಯಾಗಿದೆಯೇ: ಇದುವರೆವಿಗೂ ವಿತರಣೆಯಾಗಿರದಿದ್ದಲ್ಲಿ, ಅದಕ್ಕೆ ಕಾರಣಗಳೇನು ?

## ಅಡಿಕೆ ದಾಸ್ತಾನಿಟ್ಟುಕೊಂಡಿರುವ ಸಹಕಾರ ಸಂಘಗಳು ನಷ್ಟದ ಭೀತಿಯಲ್ಲಿರುವ ಬಗ್ಗೆ

**ಶ್ರೀ ಕೆ. ಪ್ರತಾಪಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭೪ (೧೫೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಭೂತಾನ್ ಹಾಗೂ ಬರ್ಮಾದ ಆಮದು ಅಡಿಕೆ ಕಲಬೆರಕೆಯಿಂದಾಗಿ ಮಾರುಕಟ್ಟೆಯಲ್ಲಿ ದರ ಇಳಿಕೆಯು ಹಾದಿಯಲ್ಲಿರುವುದರಿಂದ, ಅಡಿಕೆ ಖರೀದಿಸಿ ದಾಸ್ತಾನಿನಲ್ಲಿಟ್ಟು ಕೊಂಡಿರುವ ಹಲವಾರು ಸಹಕಾರ ಸಂಘಗಳು ನಷ್ಟದ ಆತಂಕಕ್ಕೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ದರ ಕುಸಿತವಾದಾಗ ಸಹಕಾರ ಸಂಘಗಳು ಹೆಚ್ಚಿನ ದರದಲ್ಲಿ ಅಡಿಕೆ ಖರೀದಿಸಿ ರೈತರ ಹಿತ ಕಾಯ್ದುಕೊಂಡು ಬಂದಿದ್ದು, ಸದ್ಯ ಆ ಸಹಕಾರ ಸಂಘಗಳು ಸಂಕಷ್ಟದ ಪರಿಸ್ಥಿತಿಯಲ್ಲಿ ಇರುವುದರಿಂದ ಸರ್ಕಾರವು ಆ ಸಂಘಗಳಿಗೆ ಆರ್ಥಿಕವಾಗಿ ನೆರವು ನೀಡಲು ಮುಂದಾಗುವುದೇ ?

## ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಹೊಸ ಮಹಾಯೋಜನೆ ನಕ್ಷೆ ಪ್ರಕಟಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು):-**

೧೭೫ (೧೭೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರ ಹೊಸ ಮಹಾಯೋಜನೆ ನಕ್ಷೆಯನ್ನು ಯಾವಾಗ ಪ್ರಕಟಿಸಬೇಕಾಗಿತ್ತು ;

(ಆ) ಇದುವರೆಗೂ ಹಳೇ ಮಹಾಯೋಜನೆಯನ್ನು ಅನುಸರಿಸಿಯೇ ಭೂ ಉಪಯೋಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೊಸ ಮಹಾಯೋಜನೆಯನ್ನು ತಯಾರಿಸಿ ಪ್ರಕಟಿಸಿ ಅಳವಡಿಸಿಕೊಳ್ಳಲು ಇರುವ ತೊಡಕುಗಳೇನು ;

(ಈ) ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರವು ಹೊಸ ಮಹಾಯೋಜನೆಯನ್ನು ಯಾವಾಗ ಪ್ರಕಟಿಸಲಿದೆ ; ಇದಕ್ಕಾಗಿ ಮಾಡಿಕೊಂಡಿರುವ ಸಿದ್ಧತೆಗಳೇನು ಮತ್ತು ಒಪ್ಪಂದಗಳೇನು ?

## ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭೬ (೧೭೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಬೇಕೆಂದು ಜಿಲ್ಲೆಯ ಜನರ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಇ) ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಲು ಇರುವ ತೊಡಕುಗಳೇನು ; ಯಾವಾಗ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಲಾಗುವುದು ; ಈ ನಿಟ್ಟಿನಲ್ಲಿ ಸರ್ಕಾರದಿಂದ ಆಗಿರುವ ಪ್ರಗತಿ ಏನು ?

## ರಾಜ್ಯದಲ್ಲಿ ಸಂಗ್ರಹಣೆ ಆಗುವ ಕಸ ವಿಲೇವಾರಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೭ (೧೭೩) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ದಿನ ಎಷ್ಟು ಟನ್ ಕಸ ಸಂಗ್ರಹಣೆಯಾಗುತ್ತಿದೆ ; ಎಷ್ಟು ಟನ್ ಕಸ ವಿಲೇವಾರಿ ಮಾಡಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಪರಿಸರಕ್ಕೆ ಹಾನಿ ಉಂಟು ಮಾಡುವ ಘನ ಹಾಗೂ ದ್ರವ್ಯ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡದ ಕಾರಣಕ್ಕೆ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ದಂಡ ವಿಧಿಸಿರುವುದು ನಿಜವೇ ; ಹಾಗಿದ್ದಲ್ಲಿ, ಎಷ್ಟು ದಂಡ ವಿಧಿಸಿದೆ ;

(ಇ) ಎನ್.ಜಿ.ಟಿ ಹಲವು ಬಾರಿ ಎಚ್ಚರಿಕೆ ನೀಡಿದ್ದರೂ ಸಮರ್ಪಕವಾಗಿ ಕಸ ವಿಲೇವಾರಿ ಮಾಡುವಲ್ಲಿ ವಿಫಲವಾಗಲು ಕಾರಣವೇನು ; ತಮ್ಮ ತಮ್ಮ ಕರ್ತವ್ಯವನ್ನು ಸರಿಯಾಗಿ ನಿರ್ವಹಣೆ ಮಾಡದ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಈ) ಎನ್.ಜಿ.ಟಿ. ಆದೇಶದ ನಂತರ ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಕಸ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕಸ ವಿಲೇವಾರಿಗೆ ಟೆಂಡರ್ ಕರೆಯಲಾಗಿದೆಯೇ ; ಯಾವ ಸಂಸ್ಥೆಗೆ ಎಷ್ಟು ಮೊತ್ತಕ್ಕೆ ಟೆಂಡರ್ ನೀಡಲಾಗಿದೆ ? (ಸಮಗ್ರ ವಿವರ ನೀಡುವುದು)

## ರಾಜ್ಯದಲ್ಲಿ ಆಗಿರುವ ಹೂಡಿಕೆ ಒಪ್ಪಂದಗಳಿಂದ ಸೃಷ್ಟಿಯಾಗಿರುವ ಹುದ್ದೆಯ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೭೮ (೧೭೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಿಂದ ರಾಜ್ಯದಲ್ಲಿ ಆಗಿರುವ ಹೂಡಿಕೆ ಒಪ್ಪಂದಗಳು ಎಷ್ಟು ; ಸರ್ಕಾರ ಅನುಮತಿ ನೀಡಿರುವ ಪ್ರಸ್ತಾವನೆಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಈ ಒಪ್ಪಂದಗಳಿಂದಾಗಿ ಸೃಷ್ಟಿಯಾಗಲಿರುವ ಉದ್ಯೋಗಾವಕಾಶಗಳು ಎಷ್ಟು ; ಹೂಡಿಕೆ ಆಗಲಿರುವ ಬಂಡವಾಳ ಎಷ್ಟು ; (ಕೈಗಾರಿಕೆವಾರು ವಿವರ ನೀಡುವುದು)

(ಇ) ಬೆಂಗಳೂರು ಹೊರತುಪಡಿಸಿ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಹೂಡಿಕೆಗೆ ಹೆಚ್ಚು ಅವಕಾಶ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ನೈಸರ್ಗಿಕ ನೀರಿನ ಮೂಲಗಳ ನೈಸರ್ಗಿಕ ಸಂರಚನೆಯ ಗುರುತುಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೯ (೧೫೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ನಕ್ಷೆಗಳ ಪ್ರಕಾರ ಯಾವುದೇ ಜಮೀನು / ಸರ್ವೆ ನಂಬರ್‌ಗಳಲ್ಲಿರುವ ನೈಸರ್ಗಿಕ ನೀರಿನ ಮೂಲಗಳನ್ನು (ನದಿ, ತೊರೆ, ರಾಜಕಾಲುವೆ, ನಾಲೆ, ಹಳ್ಳ, ಕೊರಕಲು ಇತ್ಯಾದಿಗಳನ್ನು) ಸಂಪೂರ್ಣ ಅಥವಾ ಭಾಗಶಃ ಮುಚ್ಚಿ ಅಥವಾ ನೈಸರ್ಗಿಕ ಸಂರಚನೆಯ ಪಥ ಬದಲಾವಣೆ ಮಾಡಿ ಅಂಥಹ ಜಾಗದಲ್ಲಿ ಮತ್ತು ಅಲ್ಲಿನ ಬಫರ್ ವಲಯದಲ್ಲಿ ರಸ್ತೆ, ಆಟದ ಮೈದಾನ, ಪಾರ್ಕ್, ನಿವೇಶನ ಮತ್ತು ಕಟ್ಟಡ ನಿರ್ಮಾಣ ಮಾಡಲು ನಗರ ಯೋಜನಾ ಇಲಾಖೆಯ ಕಾಯ್ದೆಗಳಲ್ಲಿ ಅವಕಾಶವಿದೆಯೇ ; ಅವಕಾಶವಿದ್ದಲ್ಲಿ ಅಥವಾ ಇಲ್ಲದಿದ್ದಲ್ಲಿ ಈ ಸಂಬಂಧ ರೂಪಿಸಲಾಗಿರುವ ನಿಯಮಗಳ ಬಗ್ಗೆ ದಾಖಲೆ ಸಹಿತ ಮಾಹಿತಿ ನೀಡುವುದು ;

(ಆ) ಗ್ರಾಮ ನಕ್ಷೆಗಳ ಪ್ರಕಾರ ಯಾವುದೇ ಜಮೀನು / ಸರ್ವೆ ನಂಬರ್‌ಗಳಲ್ಲಿರುವ ನೀರಿನ ಮೂಲಗಳ (ನದಿ, ಕೆರೆ, ಜಲಾಶಯ, ರಾಜಕಾಲುವೆ, ನಾಲೆ, ಹಳ್ಳ ಇತ್ಯಾದಿ) ಎಷ್ಟು ಅಡಿ / ಮೀಟರ್‌ಗಳವರೆಗೆ ಬಫರ್ ವಲಯವೆಂದು ನಿಗದಿಪಡಿಸಲಾಗುತ್ತದೆ ? (ದಾಖಲೆ ಸಹಿತ ಮಾಹಿತಿ ನೀಡುವುದು)

## ಗೃಹ ನಿರ್ಮಾಣ ಸಹಕಾರ ಸಂಘಗಳ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೦ (೧೫೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಎಷ್ಟು ಗೃಹ ನಿರ್ಮಾಣ ಸಹಕಾರ ಸಂಘಗಳು ಸಹಕಾರ ಇಲಾಖೆಯಲ್ಲಿ ನೋಂದಣಿ ಮಾಡಿಕೊಂಡಿವೆ ; ಈ ಸಂಘಗಳು ಸಹಕಾರ ಇಲಾಖೆಯಲ್ಲಿ ನೋಂದಣಿ ಮಾಡಿಕೊಂಡ ವರ್ಷ, ಅವುಗಳ ಹೆಸರು ಮತ್ತು ವಿಳಾಸದೊಂದಿಗೆ ಸಂಘವಾರು ಮಾಹಿತಿ ನೀಡುವುದು ;

(ಆ) ಈ ಸಂಘಗಳಲ್ಲಿರುವ ಸದಸ್ಯರ ಸಂಖ್ಯೆ ಎಷ್ಟು ; ಸದಸ್ಯತ್ವ ಶುಲ್ಕ, ನಿವೇಶನ ಮುಂಗಡ ಮುಂತಾದ ರೂಪಗಳಲ್ಲಿ ಸದಸ್ಯರಿಂದ ಸಂಗ್ರಹಿಸಲಾದ ನಿಧಿ ಎಷ್ಟು ; ಈ ನಿಧಿಯಲ್ಲಿ ಸಂಘಗಳು ಅಭಿವೃದ್ಧಿಪಡಿಸಿರುವ ಬಡಾವಣೆಗಳು ಯಾವುವು ; ಅವುಗಳ ವಿಸ್ತೀರ್ಣ, ವಿಳಾಸ ಮತ್ತು ಇಲ್ಲಿ ನಿರ್ಮಾಣ ಮಾಡಿರುವ ನಿವೇಶನಗಳ ಸಂಖ್ಯೆ ಎಷ್ಟು ; ಇದರಲ್ಲಿ ಸದಸ್ಯರಿಗೆ ಹಂಚಿಕೆ ಮಾಡಿರುವ ನಿವೇಶನಗಳೆಷ್ಟು ; ಸಂಘವಾರು ಸಂಪೂರ್ಣ ವಿವರ ನೀಡುವುದು ;

(ಇ) ರಾಜ್ಯದಲ್ಲಿರುವ ಬಹುತೇಕ ಗೃಹ ನಿರ್ಮಾಣ ಸಹಕಾರ ಸಂಘಗಳು ಸದಸ್ಯತ್ವ ಶುಲ್ಕ, ನಿವೇಶನ ಮುಂಗಡ ಮುಂತಾದ ರೂಪಗಳಲ್ಲಿ ಸದಸ್ಯರಿಂದ ಸಂಗ್ರಹಿಸಲಾದ ನಿಧಿಯಲ್ಲಿ ಬಡಾವಣೆಗಳನ್ನು ನಿರ್ಮಾಣ ಮಾಡಿ ನಿವೇಶನಗಳನ್ನು ಹಂಚಿಕೆ ಮಾಡದಿರುವ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಎಷ್ಟು ಸಂಘಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ? (ಸಂಘವಾರು ಮಾಹಿತಿ ನೀಡುವುದು)

## ತುಮಕೂರು–ಚಿತ್ರದುರ್ಗ–ದಾವಣಗೆರೆ ರೈಲ್ವೆ ಕಾಮಗಾರಿಯ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೧ (೨೩೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು–ಚಿತ್ರದುರ್ಗ–ದಾವಣಗೆರೆ ರೈಲ್ವೆ ಕಾಮಗಾರಿಯ ಒಟ್ಟು ಯೋಜನಾ ವೆಚ್ಚ ಎಷ್ಟು ; ಈ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ತುಮಕೂರು–ಚಿತ್ರದುರ್ಗ–ದಾವಣಗೆರೆ ರೈಲ್ವೆ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ತುಮಕೂರು-ರಾಯದುರ್ಗ ರೈಲ್ವೆ ಕಾಮಗಾರಿಯ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೨ (೨೪೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು-ರಾಯದುರ್ಗ ರೈಲ್ವೆ ಕಾಮಗಾರಿಯ ಒಟ್ಟು ಯೋಜನಾ ವೆಚ್ಚ ಎಷ್ಟು ; ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಈ ರೈಲ್ವೆ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ಮಧುಗಿರಿ ಪಟ್ಟಣದ ಯು.ಜಿ.ಡಿ. ಯ ಅವೈಜ್ಞಾನಿಕ ಮತ್ತು ಕಳಪೆಯ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೩ (೨೪೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಧುಗಿರಿ ಪಟ್ಟಣದ ಯು.ಜಿ.ಡಿ. ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ; ಬಳಕೆಯಾಗಿರುವ ಮೊತ್ತ ಹಾಗೂ ಬಾಕಿ ಇರುವ ಮೊತ್ತ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಮಧುಗಿರಿ ಪಟ್ಟಣದ ಯು.ಜಿ.ಡಿ. ಕಾಮಗಾರಿಯ ವಿಳಂಬ ಧೋರಣೆಯಿಂದಾಗಿ ಹಾಗೂ ಅವೈಜ್ಞಾನಿಕ ಕಳಪೆಯಿಂದ ಕಾಮಗಾರಿಯು ಕೂಡಿದ್ದು, ಸರ್ಕಾರವು ಗುತ್ತಿಗೆದಾರರ ಮೇಲೆ ತೆಗೆದುಕೊಂಡ ಕ್ರಮವೇನು ?

## ಸಣ್ಣ ಕೈಗಾರಿಕೆಗಳ ಯೋಜನೆಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ ) :-**

೧೮೪ (೧೮೧) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೫ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲಾಗಿದೆ, ಈ ಅವಧಿಯಲ್ಲಿ ಎಷ್ಟು ನಿವೇಶನ ಹಂಚಿಕೆ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿಗೆ ಸರ್ಕಾರವು ಯಾವುದಾದರು ಯೋಜನೆಯನ್ನು ಕೈಗೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ, ಯೋಜನೆಗಳನ್ನು ಕೈಗೊಳ್ಳುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಇ) ಈಗಾಗಲೇ ಪ್ರಾರಂಭಿಸಲಾಗಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಸಹಾಯಧನ ನೀಡಲಾಗಿದೆಯೇ ? (ವಿವರ ಒದಗಿಸುವುದು)

## ಸಂಡೂರು ತಾಲ್ಲೂಕು, ನರಸಿಂಗಾಪುರ-ರಣಜಿತ್‌ಪುರ ಸ್ಪಾಂಜ್ ಐರನ್ ಕಾರ್ಖಾನೆಯಿಂದ ಸ್ಥಳೀಯರಿಗೆ ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೧೮೫ (೧೮೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಂಡೂರು ತಾಲ್ಲೂಕು, ನರಸಿಂಗಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಣಜಿತ್‌ಪುರ ಸ್ಪಾಂಜ್ ಐರನ್ ಕಾರ್ಖಾನೆಯ ತ್ಯಾಜ್ಯದಿಂದ ಬೆಳೆ ನಷ್ಟವಾಗುತ್ತಿರುವುದಾಗಿ ಸ್ಥಳೀಯ ರೈತರು ಪ್ರತಿಭಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ಒದಗಿಸುವುದು)

(ಆ) ಈ ರಣಜಿತ್‌ಪುರ ಸ್ಪಾಂಜ್ ಐರನ್ ಕಾರ್ಖಾನೆಯು ನೀರನ್ನು ಯಾವ ಮೂಲದಿಂದ ಪಡೆದುಕೊಳ್ಳುತ್ತಿದೆ, ಇದಕ್ಕೆ ಸರ್ಕಾರ ಅನುಮತಿ ನೀಡಿದಿಯೇ ; (ವಿವರಗಳೊಂದಿಗೆ ಮಾಹಿತಿ ನೀಡುವುದು)

(ಇ) ಸದರಿ ಕಾರ್ಖಾನೆಯವರು ರಸ್ತೆಗೆ ಅಡ್ಡಲಾಗಿ ಚಕ್‌ಪೋಸ್ಟ್ ನಿರ್ಮಾಣ ಮಾಡಿರುವುದರಿಂದ ಕೃಷಿ ಜಮೀನುಗಳಿಗೆ ತೆರಳಲು ಸ್ಥಳೀಯ ರೈತರಿಗೆ ತೊಂದರೆಯಾಗುತ್ತಿರುವುದಾಗಿ ತಿಳಿದು ಬಂದಿದ್ದು, ಇದನ್ನು ತೆರವುಗೊಳಿಸಲು ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಎ.ಪಿ.ಎಂ.ಸಿ. ಮಾರುಕಟ್ಟೆಗಳಿಂದ ಸಿಬ್ಬಂದಿ ಕೊರತೆ ನೀಗಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೬ (೧೭೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿರುವ ಎ.ಪಿ.ಎಂ.ಸಿ ಮಾರುಕಟ್ಟೆಗಳು ಎಷ್ಟು ; ಇವುಗಳಿಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವವರ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಮಾರುಕಟ್ಟೆವಾರು ಮಾಹಿತಿ ಒದಗಿಸುವುದು)

(ಆ) ಎ.ಪಿ.ಎಂ.ಸಿ ಮಾರುಕಟ್ಟೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಅಥವಾ ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಲು ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಉತ್ತರ ಕರ್ನಾಟಕ ಭಾಗದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಪ್ರಾರಂಭವಾಗಲಿರುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) :-**

೧೮೭ (೧೯೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಫೆಬ್ರವರಿ-೨೦೨೦ ಹಾಗೂ ನವೆಂಬರ್-೨೦೨೨ನೇ ಸಾಲಿನಲ್ಲಿ ಇಲಾಖೆಯೊಂದಿಗೆ ಹಮ್ಮಿಕೊಂಡಿದ್ದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಉತ್ತರ ಕರ್ನಾಟಕಕ್ಕೆ ಸಂಬಂಧಿಸಿದಂತೆ ಎಷ್ಟು ಉದ್ದಿಮೆದಾರರು ಸರ್ಕಾರದ ಜೊತೆಗೆ ಒಡಂಬಡಿಕೆ ಮಾಡಿಕೊಂಡಿದ್ದಾರೆ ; (ಜಿಲ್ಲಾವಾರು ಉದ್ದಿಮೆದಾರರ ಹೆಸರಿನೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಆ) ಒಡಂಬಡಿಕೆ ಮಾಡಿಕೊಂಡಿರುವ ಉದ್ದಿಮೆದಾರರಲ್ಲಿ ಎಷ್ಟು ಉದ್ದಿಮೆದಾರರು ಉದ್ಯಮ ಸ್ಥಾಪಿಸುವ ಕಾರ್ಯಾರಂಭ ಮಾಡಿದ್ದಾರೆ ; ಅವು ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು)

(ಇ) ಉದ್ದಿಮೆದಾರರು ಹೂಡಿಕೆ ಮಾಡುವ ಬಂಡವಾಳವೆಷ್ಟು ಮತ್ತು ಉತ್ಪಾದನೆಯಾಗುವ ವಸ್ತುಗಳಾವುವು ; ಇವುಗಳಿಂದ ಎಷ್ಟು ಉದ್ಯೋಗಗಳು ಸೃಷ್ಟಿಯಾಗಲಿವೆ ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಉದ್ದಿಮೆಗಳು ಪೂರ್ಣ ಪ್ರಮಾಣದಲ್ಲಿ ಯಾವಾಗ ಪ್ರಾರಂಭ ಮಾಡುವ ನಿರೀಕ್ಷೆ ಇದೆ ?

## ಆಧಾರ ರಹಿತ ದೂರಿನ ಕಾರಣ ಇ-ಆಸ್ತಿ ನೀಡದೆ ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವ ಬಗ್ಗೆ

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೮ (೨೦೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆ, ಚಿಕ್ಕಬಾಣಾವರ ಪುರಸಭೆ ವ್ಯಾಪ್ತಿಯ ಸೋಮಶೆಟ್ಟಿಹಳ್ಳಿ ಗ್ರಾಮದ ಗ್ರಾಮ ಠಾಣಾದಲ್ಲಿ ಇರುವ ಸರ್ಕಾರಿ ಅಥವಾ ಸಂಘ ಸಂಸ್ಥೆಗೆ ಸೇರಿದ ಸ್ವತ್ತುಗಳ ಸಂಖ್ಯೆ ಎಷ್ಟು ; (ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ ೨೦೧೧ಕ್ಕೆ ಒಳಪಡುವ ಸ್ವತ್ತುಗಳು)ಒತ್ತುವರಿಯಾಗಿರುವ ಸ್ವತ್ತುಗಳ ಸಂಖ್ಯೆ ಎಷ್ಟು ಮತ್ತು ಒತ್ತುವರಿದಾರರು ಯಾರು ;

(ಆ) ಅಪರಾಧ ಹಿನ್ನೆಲೆಯ, ಉದ್ದೇಶ ಪೂರ್ವಕ ದೂರುದಾರ ವ್ಯಕ್ತಿಯೊಬ್ಬರು ನೀಡಿದ ಆಧಾರ ರಹಿತ ದೂರಿನ ಮೇಲೆ ಗ್ರಾಮದ ೧ ರಿಂದ ೧೦೦ರ ವರೆಗಿನ ಎಷ್ಟು ಆಸ್ತಿ ಮಾಲೀಕರಿಗೆ ಪರುಸಭೆಯಿಂದ ನೋಟೀಸ್ ನೀಡಲಾಗಿದೆ ; ಆದರಲ್ಲಿ ಎಷ್ಟು ಆಸ್ತಿ ಮಾಲೀಕರು ದಾಖಲೆಗಳನ್ನು ಹಾಜರುಪಡಿಸಿದರು ; (ವಿವರ ನೀಡುವುದು)

(ಇ) ಆಧಾರ ರಹಿತ ದೂರಿಗೆ ಇಷ್ಟು ಪ್ರಾಮುಖ್ಯತೆ ನೀಡಲು ಕಾರಣಗಳೇನು ;

(ಈ) ಇವರ ದೂರನ್ನು ಆಧಾರವಾಗಿಟ್ಟುಕೊಂಡು ರಿಜಿಸ್ಟರ್‌ನಲ್ಲಿ ಎಷ್ಟು ಆಸ್ತಿಗಳ ಮುಂದೆ ತಕರಾರು ಎಂದು ದಾಖಲಿಸಲಾಗಿದೆ ; ಈ ರೀತಿಯಲ್ಲಿ ಆಧಾರ ರಹಿತ ದೂರಿಗೆ ತಕರಾರು ಎಂದು ದಾಖಲಿಸುವುದು ಸಮಂಜಸವೇ ;

(ಉ) ಇವರ ದೂರಿನ ಕಾರಣದಿಂದ ಗ್ರಾಮಠಾಣಾ ವ್ಯಾಪ್ತಿಯ ಆಸ್ತಿಗಳ ತೆರಿಗೆಯನ್ನು ಸಹ ಪುರಸಭೆಯ ಅಧಿಕಾರಿಗಳು ಸ್ವೀಕರಿಸದೇ, ಹಿಂಬರಹ ನೀಡಿ, ಕಂದಾಯ ನಿವೇಶನಗಳ ತೆರಿಗೆ ಸ್ವೀಕರಿಸುವ ಮೂಲಕ ಪುರಸಭೆಗೆ ನಷ್ಟವುಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಊ) ಗ್ರಾಮಠಾಣಾ ವ್ಯಾಪ್ತಿಯಲ್ಲಿನ ಸ್ವತ್ತು ನಮೂನೆ-೯ ಮತ್ತು ಮ್ಯುಟೇಷನ್ ರಿಜಿಸ್ಟರ್‌ನಲ್ಲಿ ದಾಖಲಾಗಿದ್ದು, ಗ್ರಾಮಠಾಣಾ ಸ್ಕೆಚ್ ಸಲ್ಲಿಸಿದ್ದರೂ ಸಹ ಇ-ಆಸ್ತಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಋ) ಗ್ರಾಮಠಾಣಾ ವ್ಯಾಪ್ತಿಯಲ್ಲಿನ ಸ್ವತ್ತುಗಳ ಸಂಖ್ಯೆ ಎಷ್ಟು ಮತ್ತು ಅವುಗಳಿಂದ ೨೦೨೧ ರಿಂದ ಇಲ್ಲಿಯವರೆಗೆ ವಸೂಲಿ ಮಾಡಿದ ತೆರಿಗೆ ಎಷ್ಟು ; ಬಾಕಿಯಿರುವ ತೆರಿಗೆ ಎಷ್ಟು ; (ವರ್ಷವಾರು ವಿವರ ನೀಡುವುದು) ಬಾಕಿ ವಸೂಲಿಗೆ ಡಿಮ್ಯಾಂಡ್ ನೋಟೀಸ್ ನೀಡಲಾಗಿದೆಯೇ ; ನೀಡಲಾಗಿದ್ದರೆ, ಎಷ್ಟು ಬಾರಿ ನೋಟೀಸ್ ನೀಡಲಾಗಿದೆ ;

(ಎ) ಸೋಮಶೆಟ್ಟಿಹಳ್ಳಿ ಗ್ರಾಮದ ಗ್ರಾಮಠಾಣಾ ವ್ಯಾಪ್ತಿಯ ನಮೂನೆ-೯ ರಲ್ಲಿ ದಾಖಲಾಗಿರುವ ಎಲ್ಲಾ ಆಸ್ತಿಗಳಿಗೂ ಇ-ಆಸ್ತಿ ನೀಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

# ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮತ್ತು ಉದ್ಯೋಗ ಸೃಷ್ಟಿಯಾಗಿರುವ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೯ (೨೦೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೨೩ ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮಾಡಲು ವಿದೇಶ ಪ್ರವಾಸದಲ್ಲಿ ಭೇಟಿ ಮಾಡಿದ ಕಂಪನಿಗಳ ವಿವರ ಮತ್ತು ಅದಕ್ಕೆ ತಗುಲಿದ ಖರ್ಚು ವೆಚ್ಚದ ಸಮಗ್ರ ಮಾಹಿತಿ ನೀಡುವುದು ;

(ಆ) ಈ ಭೇಟಿಯ ಸಂದರ್ಭದಲ್ಲಿ ವಿವಿಧ ಕಂಪನಿಗಳ ಮೂಲಕ ಎಷ್ಟು ಕೋಟಿ ರೂಪಾಯಿ ಬಂಡವಾಳ ಹೂಡಿಕೆಯ ಭರವಸೆ ಸಿಕ್ಕಿದೆ ಮತ್ತು ನವೆಂಬರ್ ೧೫ ರವರೆಗೆ ಭರವಸೆ ಈಡೇರಿಸಿ ಹೂಡಿಕೆ ಆದ ವಿವಿಧ ಕಂಪನಿಗಳ ಬಂಡವಾಳ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಕಂಪನಿಗಳಿಂದ ಸೃಷ್ಟಿ ಆಗಲಿರುವ ಉದ್ಯೋಗದ ಪ್ರಮಾಣ ಎಷ್ಟು ; ೨೦೨೪ ನವೆಂಬರ್ ೧೫ರವರೆಗೆ ರಾಜ್ಯದಲ್ಲಿ ಎಷ್ಟು ಉದ್ಯೋಗ ಸೃಷ್ಟಿಯಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಹಗಲು–ರಾತ್ರಿ ಮೈನಿಂಗ್‌ಗೆ ಅವಕಾಶ ನೀಡುವ ಬಗ್ಗೆ

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೦ (೨೦೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಬ್ಬಿಣದ ಅದಿರು ಉತ್ಪನ್ನಗಳನ್ನು ಅರಣ್ಯ ಉತ್ಪನ್ನ ಎನ್ನುವುದರಿಂದ ಅದನ್ನು ಹೊರತುಪಡಿಸಿ ಕಾಯ್ದಿಗೆ ತಿದ್ದುಪಡಿ ತರಲು ಸರ್ಕಾರ ಉದ್ದೇಶಿಸಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಆ) ಅರಣ್ಯದ ವ್ಯಾಪ್ತಿಯಿಂದ ಅದಿರು ಬೇರ್ಪಡಿಸಿ, ನಿಯಮ ಸಡಿಲಿಸಿ ಹೊಸದಾಗಿ ಮೈನಿಂಗ್‌ಗೆ ಅವಕಾಶ ಕೊಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಹಗಲು–ರಾತ್ರಿ ಮೈನಿಂಗ್‌ಗೆ ಅವಕಾಶ ಕೊಡಲು ಸರ್ಕಾರ ರೂಪಿಸಿರುವ ನಿಯಮಾವಳಿಗಳಾವುವು ; (ವಿವರ ನೀಡುವುದು)

(ಇ) ಜೀವ ವೈವಿಧ್ಯತೆ ಮತ್ತು ವನ್ಯ ಜೀವಿ ಪ್ರದೇಶ ಹೊರತುಪಡಿಸಿ ಉಳಿದ ಎಲ್ಲಾ ಪ್ರದೇಶದಲ್ಲೂ ಹಗಲು–ರಾತ್ರಿ ಮೈನಿಂಗ್ ನಡೆಸಲು ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಅನುಮತಿ ನೀಡಲು ಸರ್ಕಾರ ಚಿಂತನೆ ನಡೆಸಿದೆ ?

## ಲಿಂಗಸುಗೂರು ಪಟ್ಟಣದ ಪುರಸಭೆಯನ್ನು ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೧ (೧೯೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದ ಈಗಿರುವ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಮಾಹಿತಿ ಒದಗಿಸುವುದು ;

(ಆ) ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣವು ಸರ್ಕಾರದ ಸೌಲಭ್ಯಗಳಿಲ್ಲದೆ ವಂಚಿತವಾಗಿದ್ದು; ಲಿಂಗಸುಗೂರು ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಲಿಂಗಸುಗೂರಿನ ಪುರಸಭೆಯಲ್ಲಿ ದಿನಗೂಲಿ ಆಧಾರದ ಮೇಲೆ ಸುಮಾರು ವರ್ಷಗಳಿಂದ ಕೆಲಸ ಮಾಡುತ್ತಿರುವ ೪೦ ಜನ ನೀರು ಸರಬರಾಜುದಾರರನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೈಗಾರಿಕೆಗೆ KIADB ಯವರು ಸ್ವಾಧೀನಪಡಿಸಿಕೊಂಡಿರುವ ಜಮೀನಿನ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೯೨ (೨೦೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಳೆದ ೨ ವರ್ಷಗಳಲ್ಲಿ ಕೈಗಾರಿಕೆಗಳ ಸ್ಥಾಪನೆಗಳ ಉದ್ದೇಶಕ್ಕಾಗಿ ಕೆ.ಐ.ಎ.ಡಿ.ಬಿಯು ಎಷ್ಟು ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಂಡಿದೆ ; (ವಿವರ ನೀಡುವುದು)

(ಆ) ಕೆ.ಐ.ಎ.ಡಿ.ಬಿ ವತಿಯಿಂದ ಖಾಸಗಿ ಸಂಸ್ಥೆಗೆ ಮತ್ತು ಉದ್ಯಮಗಳಿಗೆ ಜಮೀನುಗಳನ್ನು ಹಂಚಿಕೆ ಮಾಡುವಾಗ ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕೆ.ಐ.ಎ.ಡಿ.ಬಿಯು ಹಣ ಪಾವತಿಸಿಕೊಂಡು ಎಷ್ಟು ಖಾಸಗಿ ಸಂಸ್ಥೆಗಳಿಗೆ ಜಮೀನು ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಈ) ಕಳೆದ ೨ ವರ್ಷಗಳಲ್ಲಿ ಕೆ.ಐ.ಎ.ಡಿ.ಬಿಯು ಎಷ್ಟು ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಂಡಿದೆ ಹಾಗೂ ಭೂಮಿಯನ್ನು ಕಳೆದುಕೊಂಡ ರೈತರಿಗೆ ಯಾವ ರೀತಿಯ ಪರಿಹಾರ ನೀಡಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಿರುವ ಯೋಜನೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೯೩. (೨೧೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳು ಯಾವುವು ; (ಈ ಸಾಲ ಯೋಜನೆಗಳ ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಲ್ಲಿ ಸಹಾಯಧನ ಹೊಂದಿರುವ ಯೋಜನೆಗಳು ಯಾವುವು ;

(ಇ) ಈ ಸಾಲ ಯೋಜನೆಗಳ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ರೈತರಿಗಾಗಿ ಸಹಕಾರ ಇಲಾಖೆಯಿಂದ ವಾಹನಸಾಲ ಯೋಜನೆ ಜಾರಿಯಲ್ಲಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತದೆ ; ಎಷ್ಟು ಸಬ್ಸಿಡಿಯನ್ನು ನೀಡಲಾಗುತ್ತಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಸಹಕಾರ ಸಂಘಗಳು ಮತ್ತು ಸಾಲಮನ್ನಾ ಮಾಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೯೪ (೨೧೧) ಮಾನ್ಯ ಸಹಕಾರ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸೇವಾ ಸಂಘಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಸಹಕಾರಿ ಸೇವಾ ಸಂಘಗಳ ಸಾಲದ ಮೊತ್ತ ಎಷ್ಟು; ಸಾಲ ತೆಗೆದುಕೊಂಡ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೧೦ ವರ್ಷಗಳಲ್ಲಿ ಮುಖ್ಯಮಂತ್ರಿಯವರ ಸಾಲಮನ್ನಾ ಯೋಜನೆ ಅಡಿಯಲ್ಲಿ ಎಷ್ಟು ರೈತರ ಸಾಲಮನ್ನಾ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಈ ಯೋಜನೆಯಡಿಯಲ್ಲಿ ಎಷ್ಟು ರೈತ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; ಈ ಯೋಜನೆಯ ಒಟ್ಟು ಫಲಾನುಭವಿಗಳೆಷ್ಟು ; (ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ಮಾಹಿತಿ ನೀಡುವುದು)

(ಉ) ಈ ಯೋಜನೆಯಡಿ ಸಾಲಮನ್ನಾ ಮಾಡಲಾದ ಎಷ್ಟು ಫಲಾನುಭವಿಗಳ ಖಾತೆಗೆ ಈವರೆಗೆ ಹಣ ಜಮೆಯಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಮಂಗನ ಹಾವಳಿಯಿಂದ ಹಾನಿಗೊಳಗಾದ ರೈತರಿಗೆ ಬೆಳೆ ಪರಿಹಾರ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೧೯೫ (೨೩೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಕೆಂಪು ಮತ್ತು ಕಪ್ಪುಮೂತಿ ಮಂಗಗಳ ಕಾಟ ಹೆಚ್ಚಾಗಿದ್ದು, ಇಲ್ಲಿನ ಅನೇಕ ಬುಡಕಟ್ಟು ಮತ್ತು ಇತರೆ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಂಗಗಳ ದಾಳಿಯಿಂದ ಹಾನಿಗೊಳಗಾಗುವ ಮತ್ತು ಹಾನಿಗೊಳಗಾದ ರೈತರ ತೋಟಗಳಿಗೆ ಬೆಳೆ ಪರಿಹಾರ ನೀಡಲು ಸರಕಾರ ಕ್ರಮವಹಿಸುವುದೇ ; ಈ ಬಗ್ಗೆ ತೆಗೆದುಕೊಳ್ಳುವ ಕ್ರಮಗಳ ಕುರಿತು ವಿವರಿಸುವುದು ;

(ಇ) ರೈತರು ಸಾಕುವ ಸಾಕು ಪ್ರಾಣಿಗಳಿಗೆ ಕಾಡು ಪ್ರಾಣಿಗಳಿಂದ ನಿರಂತರ ದಾಳಿಯಾಗುವುದನ್ನು ತಡೆಗಟ್ಟಲು ಸರಕಾರ ತೆಗೆದುಕೊಳ್ಳುವ ಕ್ರಮಗಳು ಏನು ?

## ಉತ್ತರ ಕನ್ನಡ ಜಿಲ್ಲೆಯ ಸಣ್ಣ ಕೈಗಾರಿಕೆಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೧೯೬ (೨೩೩) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಎಷ್ಟು ಅರ್ಜಿಗಳು ಬಂದಿವೆ ; (ವಿವರ ನೀಡುವುದು)

(ಆ) ಹೊಸ ಕೈಗಾರಿಕಾ ನೀತಿ ೨೦೨೦-೨೦೨೫ ರಲ್ಲಿ ಉತ್ತರ ಕನ್ನಡ ಜಿಲ್ಲೆಯನ್ನು ಯಾವ ವಲಯದಲ್ಲಿ ಸೇರಿಸಲಾಗಿದೆ ;

(ಇ) ಸಣ್ಣ ಕೈಗಾರಿಕೆ ಪ್ರಾರಂಭಿಸಲು ಜಿಲ್ಲೆಗೆ ನೀಡಲಾಗುವ ಪ್ರೋತ್ಸಾಹ ಮತ್ತು ರಿಯಾಯಿತಿಗಳೇನು ? (ವಿವರ ನೀಡುವುದು)

## ರಾಜ್ಯದ ನೇಕಾರರನ್ನು ಆರ್ಥಿಕವಾಗಿ ಉತ್ತೇಜಿಸುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೧೯೭ (೨೩೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನೇಕಾರರನ್ನು ಆರ್ಥಿಕವಾಗಿ ಉತ್ತೇಜಿಸಲು ಸರ್ಕಾರವು ಯಾವ ಯಾವ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ನೇಕಾರರನ್ನು ಉತ್ತೇಜಿಸಲು ಎ.ಪಿ.ಎಂ.ಸಿ., ಮಾದರಿಯಂತೆ ಮಾರುಕಟ್ಟೆ ಕಲ್ಪಿಸಲು ಸರಕಾರ ಕ್ರಮ ಕೈಗೊಂಡಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ ಪ್ರವರ್ಗ–೧ರ ಜಾತಿಯವರಿಗೆ ಕೈಗಾರಿಕಾ ನಿವೇಶನ ಹಂಚಿಕೆ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿಟಿಎಸ್) (ಶಿಕ್ಷಕರ ಕ್ಷೇತ್ರ) :–**

೧೯೮ (೧೬೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೈಗಾರಿಕಾ ನಿವೇಶನಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೆಐಎಡಿಬಿ ವತಿಯಿಂದ ಕೈಗಾರಿಕೆ ಪ್ರಾರಂಭ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಇವು ಯಾವ ಹಂತದಲ್ಲಿವೆ ;

(ಆ) ಪ್ರವರ್ಗ–೧ರ ಅತೀ ಹಿಂದುಳಿದ ಜಾತಿಗಳ ಉದ್ಯಮದಾರರಿಗೆ ಕೈಗಾರಿಕಾ ನಿವೇಶನಗಳನ್ನು ಹಂಚಿಕೆ ಮಾಡುವಾಗ ಮೀಸಲಾತಿ ನಿಗದಿಪಡಿಲಾಗಿದೆಯೇ ;

(ಇ) ನಿಗದಿಪಡಿಸಿದ್ದಲ್ಲಿ ಯಾವ ಯಾವ ಕೈಗಾರಿಕಾ ಪ್ರದೇಶಗಳಲ್ಲಿ ಎಷ್ಟು ನಿವೇಶನಗಳನ್ನು ನಿಗದಿಪಡಿಸಲಾಗಿದೆ ಹಾಗೂ ವಿತರಿಸಿರುವ ನಿವೇಶನಗಳ ಸಂಖ್ಯೆ ಎಷ್ಟು ;

(ಈ) ಕೈಗಾರಿಕಾ ನಿವೇಶನಗಳನ್ನು ಹಂಚಿಕೆ ಮಾಡುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿಗಳ ಉದ್ದಿಮೆದಾರರಿಗೆ ರಿಯಾಯಿತಿ/ಸಹಾಯಧನ ನೀಡಲಾಗಿದೆಯೇ ; ಇಲ್ಲದೇ ಇದ್ದಲ್ಲಿ ಸಹಾಯಧನವನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಕೈಗಾರಿಕಾ ನಿವೇಶನಗಳ ಹಂಚಿಕೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜಾತಿಗಳಿಗೆ ನೀಡುವ ಸಹಾಧನವನ್ನು ಪ್ರವರ್ಗ–೧ ಜಾತಿಗಳಿಗೂ ನೀಡಲು ಇರುವ ತೊಂದರೆಗಳೇನು ? (ವಿವರಿಸುವುದು)

## ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳ ಬಗ್ಗೆ ಮಾಹಿತಿ ಒದಗಿಸುವುದು

ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-

೧೯೯ (೧೬೬) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ವೃಂದವಾರು ಮಂಜೂರಾತಿ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು ;

(ಆ) ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು, ಹಾಗೂ ಭರ್ತಿ ಮಾಡಲು ಸರ್ಕಾರಕ್ಕೆ ಇರುವ ಅಡಚಣೆಗಳು ಯಾವುವು ;

(ಇ) ಖಾಲಿಯಿರುವ ಜಿಲ್ಲಾ ಯೋಜನಾ ನಿರ್ದೇಶಕರು, ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇದೆಯೇ, ಇದ್ದಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಈ) ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇದುವರೆವಿಗೂ ನಿರ್ಮಿಸಿರುವ ಒಂಟಿ ಮನೆ ಎಷ್ಟು ; ಹಾಗೂ ಸಾಮೂಹಿಕ ಮನೆಗಳೆಷ್ಟು ; (ಪಟ್ಟಿಯೊಂದಿಗೆ ವಿವರ ಒದಗಿಸುವುದು)

(ಉ) ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇದುವರೆವಿಗೂ ಎಷ್ಟು ಫಲಾನುಭವಿಗಳಿಗೆ ಹಕ್ಕು ಪತ್ರ ನೀಡಲಾಗಿದೆ ; ಇನ್ನು ಉಳಿಕೆ ಎಷ್ಟು ಫಲಾನುಭವಿಗಳಿಗೆ ಬಾಕಿಯಿದೆ ? (ಸಂಪೂರ್ಣ ಪಟ್ಟಿಯೊಂದಿಗೆ ಒದಗಿಸುವುದು)

## ರಾಜ್ಯದಲ್ಲಿ ಗಣಿಗಾರಿಕೆ ನಡೆಯುವ ಪ್ರದೇಶಗಳು ಹಾಗೂ ಅದರ ಮಾಹಿತಿ ಒದಗಿಸುವ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿಟಿಎಸ್) (ಶಿಕ್ಷಕರ ಕ್ಷೇತ್ರ) :-**

೨೦೦ (೧೬೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗಣಿಗಾರಿಕೆ ನಡೆಯುವ ಪ್ರದೇಶಗಳ ಸಂಖ್ಯೆ ಎಷ್ಟು ಯಾವುವು ;

(ಆ) ಗಣಿಗಾರಿಕೆ ನಡೆಸಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು ; (ಮಾಹಿತಿ ನೀಡುವುದು)

(ಇ) ಗಣಿಗಾರಿಕೆ ಮಂಜೂರು ಮಾಡುವಾಗ ಮೀಸಲಾತಿಯನ್ನು ಅಳವಡಿಸಲಾಗಿದೆಯೇ ; ಹಾಗಿದ್ದಲ್ಲಿ ಪ್ರವರ್ಗ–1 ಜಾತಿಗಳಿಗೆ ನಿಗದಿಪಡಿಸಿದ ಮೀಸಲಾತಿ ಪ್ರಮಾಣ ಎಷ್ಟು ;

(ಈ) ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಗಣಿಗಾರಿಕೆಗೆ ಗುರುತಿಸಿರುವ ಪ್ರದೇಶಗಳಾವುವು ; ಗುರುತಿಸಿದ್ದರೆ ಅಲ್ಲಿ ಗಣಿಗಾರಿಕೆ ಪ್ರಾರಂಭವಾಗಿದೆಯೇ ಪ್ರಾರಂಭವಾಗದೇ ಇದ್ದರೆ ಇವು ಯಾವ ಹಂತದಲ್ಲಿದೆ ?

## ಪ್ರವರ್ಗ–೧ರ ಜಾತಿಯವರಿಗೆ ಸಹಾಯಧನ ಒದಗಿಸುವ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿಟಿಎಸ್) (ಶಿಕ್ಷಕರ ಕ್ಷೇತ್ರ) :-**

೨೦೧ (೧೬೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರವರ್ಗ–1ರ ಅತೀ ಹಿಂದುಳಿದ ಜಾತಿಗಳಡಿ ಬರುವ ಅಲೆಮಾರಿ ಮತ್ತು ಅರೆ ಅಲೆಮಾರಿ ಜಾತಿಗಳ ಫಲಾನುಭವಿಗಳಿಗೆ ರಾಜ್ಯದ ಸಹಕಾರ ಸಂಘಗಳಲ್ಲಿ ಸಹಾಯಧನದ ವಂತಿಕೆ ನೀಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಫಲಾನುಭವಿಗಳಿಗೆ ನೀಡುವ ಮಾದರಿಯಲ್ಲಿಯೇ ಹಿಂದುಳಿದ ಜಾತಿಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ಫಲಾನುಭವಿಗಳಿಗೆ ಸಹಾಯಧನದ ವಂತಿಕೆ ನೀಡಲು ಇರುವ ತೊಂದರೆಗಳೇನು ; ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇಲಾಖೆ ವತಿಯಿಂದ ಇದುವರೆಗೂ ಎಷ್ಟು ಪಲಾನುಭವಿಗಳಿಗೆ ಧನ ಸಹಾಯ ಮಾಡಲಾಗಿದೆ ; (ಪಟ್ಟಿಯೊಂದಿಗೆ ವಿವರ ನೀಡುವುದು) ಇದುವರೆವಿಗೂ ಧನ ಸಹಾಯ ಮಾಡಿದ ಫಲಾವುಭವಿಗಳು ಮರು ಪಾವತಿ ಮಾಡಿದ್ದಾರೆಯೇ ಮಾಡದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸಹಕಾರ ಇಲಾಖೆಯಿಂದ ಹಿರಿಯೂರು ವಿಧಾನಸಭಾ ಕ್ಷೇತ್ರದಲ್ಲಿ ಭ್ರಷ್ಟಚಾರ ನಡೆದಿದೆಯೇ ; ಹಾಗಿದ್ದರೆ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕಲಬುರಗಿ ಜಿಲ್ಲೆಯ ಶಹಾಬಾದ ಪಟ್ಟಣದಲ್ಲಿ ಜೆ.ಪಿ.ಸಿಮೇಂಟ್ ಕಂಪನಿ ಉತ್ಪಾದನೆ ಸ್ಥಗಿತಗೊಂಡಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೨೦೨ (೧೫೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯ ಶಹಾಬಾದ ಪಟ್ಟಣದಲ್ಲಿರುವ ಸಿಮೆಂಟ್ ಕಂಪನಿ ಉತ್ಪಾದನೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೆಲಸ ಕಳೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಆ) ಸ್ವಾತಂತ್ರ್ಯ ಪೂರ್ವದಿಂದ ೧೯೯೦ರ ವರೆಗೆ ಎಸಿಸಿ, ೧೯೯೦ ರಿಂದ ೧೯೯೭ರ ವರೆಗೆ ಎಚ್‌ಎಂಪಿ ನಂತರ ಜೆ.ಪಿ ಒಡೆತನದಲ್ಲಿ ಕಂಪೆನಿ ಮಾಲಿಕತ್ವ ಬದಲಾವಣೆಯಾಗಿದ್ದು ಕಾರ್ಮಿಕರ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ದೇಶದಲ್ಲಿಯೇ ಹಳೆಯದಾದ ಕಂಪನಿ, ವಿಸ್ತಾರವಾದ ಸ್ಥಳ ಮತ್ತು ಗುಣಮಟ್ಟದ ಸುಣ್ಣದ ಕಲ್ಲಿನ ಸಂಪನ್ಮೂಲ ಹೊಂದಿದ ಈ ಕಂಪನಿಯ ಸಮಸ್ಯೆಗಳನ್ನು ಬಗೆಹರಿಸಿ ಕಾರ್ಮಿಕರ ಬದುಕಿಗೆ ಆಸರೆಯಾಗಲು ತಕ್ಷಣವೇ ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

## ಕಲಬುರಗಿ ನಗರದ ಹಿರಾಪುರ ಕ್ರಾಸ್ ಪಕ್ಕದಲ್ಲಿನ KUDA ಬಡಾವಣೆಯಲ್ಲಿನ ಸೆಪ್ಟೀಕ್ ಟ್ಯಾಂಕ್‌ನಿಂದಾಗಿರುವ ಸಮಸ್ಯೆ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೨೦೩ (೧೫೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ನಗರದ ಹಿರಾಪುರ ಕ್ರಾಸ್ ಪಕ್ಕದಲ್ಲಿ (ಸರ್ವೆ ನಂ.೨೦೧೨) ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ (KUDA) ಬಡಾವಣೆಯಲ್ಲಿ ಮಕ್ಕಳಿಗಾಗಿ ಕಾಯ್ದಿರಿಸಿದ ಪಾರ್ಕ್ ಸ್ಥಳದಲ್ಲಿ ದೊಡ್ಡದಾದ ಸೆಪ್ಟೀಕ್ ಟ್ಯಾಂಕ್ ಕಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸೆಪ್ಟೀಕ್ ಟ್ಯಾಂಕ್ ಪಕ್ಕದಲ್ಲಿಯೇ ಕುಡಾ (KUDA) ಬಡಾವಣೆಯಲ್ಲಿ ಮನೆ ಕಟ್ಟಿಕೊಂಡು ವಾಸಿಸುತ್ತಿರುವ ಕುಟುಂಬಗಳು ಸೆಪ್ಟೀಕ್ ಟ್ಯಾಂಕ್‌ನ ದುರ್ವಾಸನೆಯಿಂದ ಹಲವಾರು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವುದಕ್ಕೆ ಹೊಣೆ ಯಾರು ;

(ಇ) ಸೆಪ್ಟೀಕ್ ಟ್ಯಾಂಕ್ ತಗ್ಗು ಪ್ರದೇಶದಲ್ಲಿದ್ದು ಮಳೆಯ ನೀರು, ಚರಂಡಿ ನೀರು ಅದರ ಪಕ್ಕದಲ್ಲಿಯೇ ಕೆರೆಯಂತೆ ಸಂಗ್ರಹವಾಗಿ ಬಡಾವಣೆ ನಿವಾಸಿಗಳು ಜೀವನ ನಡೆಸುವುದೇ ದುಸ್ತರವಾಗಿದ್ದು ಇದಕ್ಕೆ ಜಿಲ್ಲಾಡಳಿತ ಮತ್ತು ಕುಡಾ (KUDA) ಅಧಿಕಾರಿಗಳು ಕೈಗೊಂಡ ಕ್ರಮಗಳೇನು ;

(ಈ) ಸೆಪ್ಟೀಕ್ ಟ್ಯಾಂಕ್ ದುರಸ್ತಿ ಸರಿಪಡಿಸಿ ಬಡಾವಣೆ ನಿವಾಸಿಗಳಿಗೆ ನೆಮ್ಮದಿಯಿಂದ ಬದುಕಲು ಅವಕಾಶ ಮಾಡಿಕೊಡಲು ತಕ್ಷಣವೇ ಯಾವ ಕ್ರಮ ಕೈಗೊಳ್ಳಲಾಗುವುದು ?

## ಸಣ್ಣ ಕೈಗಾರಿಕೆ ಯೋಜನೆಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು):-**

೨೦೪ (೨೬೦) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಸರ್ಕಾರದ ಅಸ್ತಿತ್ವಕ್ಕೆ ಬಂದ ಮೇಲೆ ಸಣ್ಣ ಕೈಗಾರಿಕೆಯಲ್ಲಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; ಈ ಯೋಜನೆಗಳಲ್ಲಿ ಬಡತನ ರೇಖೆಗಿಂತ ಕೆಳಗಿನವರಿಗಾಗಿ ಯಾವ ಯಾವ ಯೋಜನೆಯನ್ನು ಕೈಗೊಳ್ಳಲಾಗಿದೆ ;

(ಆ) ರಾಜ್ಯದಲ್ಲಿ ಕೈಗಾರಿಕೆ ನಿವೇಶನ ಮಂಜೂರಾದ ಎಷ್ಟು ಫಲಾನುಭವಿಗಳು ಹಣ ತುಂಬಿರುವುದಿಲ್ಲ ; ಹಣ ತುಂಬದೆ ಇರುವವರ ಹಂಚಿಕೆಯನ್ನು ರದ್ದುಪಡಿಸಿ ನಿಯಮಾನುಸಾರ ಬೇರೆಯವರಿಗೆ ಹಂಚಿಕೆ ಮಾಡಲಾಗಿದೆ ;

(ಇ) ಕಲಬುರಗಿಯಲ್ಲಿ ಎಷ್ಟು ಹೊಸ ಯೋಜನೆಗಳು ಜಾರಿಗೆ ಬಂದಿವೆ ; ಎಷ್ಟು ನಿವೇಶನಗಳು ಖಾಲಿ ಇದೆ ; ನಿರುದ್ಯೋಗಿ ಪದವೀಧರರುಗಳು ಸ್ವಂತ ಉದ್ದಿಮೆ ಹೊಂದಲು ಮುಂದೆ ಬರುವವರನ್ನು ಉತ್ತೇಜಿಸಲು ಯಾವ ಯಾವ ಹೊಸ ಯೋಜನೆ ಹಾಕಿಕೊಳ್ಳಲು ಸರ್ಕಾರ ನಿರ್ಧರಿಸಿದೆ ;

(ಈ) ಸಮೃದ್ಧಿ ಕರ್ನಾಟಕ ನಿರ್ಮಿಸಲು ಸಣ್ಣ ಕೈಗಾರಿಕೆ ಇಲಾಖೆಯ ಪಾತ್ರಗಳೇನು ?

## ೨೪X೭ ಕುಡಿಯುವ ನೀರಿನ ಯೋಜನೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು):-**

೨೦೫ (೨೫೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲಬರ್ಗಾ, ಹುಬ್ಬಳ್ಳಿ, ಧಾರವಾಡ, ಬೆಳಗಾಂ ವಿಭಾಗಗಳಲ್ಲಿ ೨೪ X ೭ ಯೋಜನೆ ಮುಖ್ಯಾಂತರ ಮನೆ ಮನೆಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸುವ ಯೋಜನೆ ಎಷ್ಟು ಮೊತ್ತಕ್ಕೆ ಅನುಮೋದನೆ ನೀಡಿ ಯಾವಾಗ ಕಾರ್ಯ ಆರಂಭಿಸಲಾಯಿತು ;

(ಆ) ಈ ಯೋಜನೆ ಪೂರ್ಣ ಕಾರ್ಯ ಯಾವಾಗ ಪೂರ್ಣಗೊಳ್ಳಬೇಕಾಗಿತ್ತು; ಪೂರ್ಣಗೊಳ್ಳದಿರಲು ಕಾರಣವೇನು ; ಇದರಿಂದ ಸರ್ಕಾರದ ಬೊಕ್ಕಸಕ್ಕೆ ಆದ ಹಾನಿ ಎಷ್ಟು ನಿಗದಿ

ಪಡಿಸಿದ ಅವಧಿಯಲ್ಲಿ ಕಾರ್ಯ ಮುಗಿಸದೇ ಇರುವ ಕಂಪನಿಗೆ ದಂಡ ವಿಧಿಸಲಾಗಿದೆ ; ಈಗಲೂ ಸಹ ಈ ಯೋಜನೆ ಪೂರ್ಣವಾಗದೆ ಕಲಬುರಗಿ ನಗರಕ್ಕೆ ಸಮರ್ಪಕ ನೀರಿನ ಸಮಸ್ಯೆ ಉಂಟಾಗಿದ್ದು ಸಾರ್ವಜನಿಕರು ಸಿಗಬೇಕಾದ ಸೌಲಭ್ಯಗಳಿಂದ ವಂಚಿತರಾಗುವುದಿಲ್ಲವೆ ;

(ಇ) ಈ ಯೋಜನೆಯ ನಗರಾಭಿವೃದ್ಧಿ ಇಲಾಖೆ ನೇರ ಹೊಣೆಯಲ್ಲವೆ ; ಈ ವಿಷಯ ಕುರಿತು ಸದನದಲ್ಲಿ ಸರ್ಕಾರವು ಭರವಸೆ ನೀಡಿದ್ದರೂ ಎಲ್ ಅಂಡ್ ಟಿ ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸದಿರಲು ಕಾರಣವೇನು ; ಕಲುಬುರಗಿ ನಗರಕ್ಕೆ ಮನೆ ಮನೆಗೆ ಸಮರ್ಪಕ ನೀರಿನ ವ್ಯವಸ್ಥೆ ಯಾವಾಗ ಕಲ್ಪಿಸಲಾಗುವುದು ?

## ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ವಿತರಣೆ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೦೬ (೧೮೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಕೃಷಿ ಸಾಲವಾಗಿ ರೈತರಿಗೆ ವಿತರಿಸಿರುವ ಕೃಷಿ ಸಾಲವೆಷ್ಟು ; (ಜಿಲ್ಲಾವಾರು ಮತ್ತು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ವಾರು, ವಿವಿಧ ವರ್ಗದ ಸಾಲ, ಕೃಷಿಕರ ಸಂಖ್ಯೆ, ಸಾಲ ಮಂಜೂರಾತಿ ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು)

(ಆ) ಜಿಲ್ಲಾ ಸಹಕಾರ ಬ್ಯಾಂಕ್ ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ೨೦೨೩-೨೪ನೇ ಸಾಲಿನಲ್ಲಿ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ವಿತರಿಸಿದ ಕೃಷಿ ಸಾಲ ಮತ್ತು ಪಶುಸಂಗೋಪನೆ

ಸಾಲ ಎಷ್ಟು ; (ಜಿಲ್ಲಾವಾರು ಮತ್ತು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ವಾರು, ಕೃಷಿಕರ ಸಂಖ್ಯೆ ಮತ್ತು ಸಾಲ ಮಂಜೂರಾತಿ ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು)

(ಇ) ೨೦೨೪-೨೫ನೇ ಸಾಲಿನಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮತ್ತು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳ ಮೂಲಕ ಕೃಷಿಕರಿಗೆ ಶೂನ್ಯ ಬಡ್ಡಿ ದರದಲ್ಲಿ ಕೃಷಿ ಸಾಲ ವಿತರಿಸಲು ಕೈಗೊಂಡಿರುವ ಯೋಜನೆಗಳು ಯಾವುವು ; ಈ ಯೋಜನೆಗಳ ಅನುಷ್ಠಾನ ಯಾವ ಹಂತದಲ್ಲಿವೆ ಪೂರ್ಣ ಮಾಹಿತಿ ನೀಡುವುದು ;

(ಈ) ರಾಜ್ಯಕ್ಕೆ ೨೦೨೪-೨೫ನೇ ಸಾಲಿನಲ್ಲಿ ಕೃಷಿ ಚಟುವಟಿಕೆಗಳಿಗೆ ನಬಾರ್ಡ್ ಸಂಸ್ಥೆ ರಿಯಾಯಿತಿ ಬಡ್ಡಿ ದರದಲ್ಲಿ ನೀಡುವ ಅಲ್ಪಾವಧಿ ಕೃಷಿ ಸಾಲದ ಮಿತಿಯನ್ನು ಗಣನೀಯವಾಗಿ ಕಡಿಮೆ ಮಾಡಿರುವುದು ನಿಜವೇ ; ಈ ರೀತಿಯ ಗಣನೀಯ ಇಳಿಕೆಯಿಂದ ರೈತರು ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ರೈತರ ಋತುಮಾನ ಕೃಷಿ ಬೇಡಿಕೆಗೆ ಅನುಗುಣವಾಗಿ ಸರ್ಕಾರ ಅಲ್ಪಾವಧಿ ಸಾಲ ಒದಗಿಸಲು ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ಸೆಮಿಕಂಡಕ್ಟರ್ ಮತ್ತು ಚಿಪ್ ತಯಾರಿಕೆಯ ಸಂಸ್ಥೆಗಳ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೦೭ (೧೮೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾರತ ಸರ್ಕಾರ ಎಐ ಅಭಿಯಾನ (AI Mission) ಅಡಿ ಸೆಮಿಕಂಡಕ್ಟರ್ ಮತ್ತು ಚಿಪ್ ತಯಾರಿಕೆಗೆ ನೀಡುವ ಸವಲತ್ತು ಮತ್ತು ಧನ ಸಹಾಯಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಸೆಮಿಕಂಡಕ್ಟರ್ ಮತ್ತು ಚಿಪ್ (Chip) ತಯಾರಿಕೆಗೆ ಗುರುತಿಸಿರುವ ಪ್ರದೇಶಗಳು ಯಾವುವು ಮತ್ತು ರಾಜ್ಯ ಸರ್ಕಾರದಿಂದ ನೀಡುವ ಉತ್ತೇಜನಗಳು ಯಾವುವು ;

(ಇ) ರಾಜ್ಯದಲ್ಲಿ ಸೆಮಿಕಂಡಕ್ಟರ್ ಮತ್ತು ಚಿಪ್ ತಯಾರಿಕೆ ಹಾಗೂ ಐಪೋನ್ ತಯಾರಿಕೆಗೆ ಮುಂದೆ ಬಂದಿರುವ ಸಂಸ್ಥೆಗಳು ಯಾವುವು ಮತ್ತು ಈ ಸಂಸ್ಥೆಗಳೊಂದಿಗೆ ಮಾಡಿಕೊಂಡಿರುವ ಒಪ್ಪಂದಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಸೆಮಿಕಂಡಕ್ಟರ್ ಮತ್ತು ಚಿಪ್ ತಯಾರಿಕೆ ಹಾಗೂ ಐಪೋನ್ ತಯಾರಿಕೆ ಉದ್ಯಮದಿಂದ ಸೃಷ್ಟಿಯಾಗಲಿರುವ ಹುದ್ದೆಗಳು ಎಷ್ಟು ; ಇದುವರೆಗೂ ಎಷ್ಟು ಜನರಿಗೆ ಉದ್ಯೋಗ ಅವಕಾಶ ಕಲ್ಪಿಸಲಾಗಿದೆ ? (ಉದ್ಯಮವಾರು ಪೂರ್ಣ ಮಾಹಿತಿ ನೀಡುವುದು)

## ಕೈಗಾರಿಕಾ ಕಾರಿಡಾರ್‌ಗಳ ನಿರ್ಮಾಣದ ಕುರಿತು

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೦೮ (೧೮೪೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರ ದೇಶದಲ್ಲಿ ಹನ್ನೆರಡು (೧೨) ಕೈಗಾರಿಕಾ ನಗರಗಳನ್ನು ಈಗಾಗಲೇ ಗುರುತಿಸಿ ಅಭಿವೃದ್ಧಿಪಡಿಸಿರುವ ಆರು (೬) ಕೈಗಾರಿಕಾ ಕಾರಿಡಾರ್‌ಗಳಲ್ಲಿ ಒಟ್ಟು ರೂ.೨೮,೬೦೦/- ಕೋಟಿ ವೆಚ್ಚದಲ್ಲಿ ಕೈಗಾರಿಕೆ ನಗರ ನಿರ್ಮಿಸಲು ಯೋಜನೆ ರೂಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ನಗರಗಳು ಯಾವುವು ಹಾಗೂ ಕೇಂದ್ರದಿಂದ ದೊರೆಯುವ ಸವಲತ್ತುಗಳು ಯಾವುವು ; ರಾಜ್ಯದಲ್ಲಿ ಯಾವ ನಗರವನ್ನು ಕೈಗಾರಿಕಾ ನಗರವನ್ನಾಗಿ ಅಭಿವೃದ್ಧಿಪಡಿಸಲು ಗುರುತಿಸಲಾಗಿದೆ ; (ಪೂರ್ಣ ವಿವರ ನೀಡುವುದು)

(ಇ) ರಾಜ್ಯ ಸರ್ಕಾರ ದೊಡ್ಡಬಳ್ಳಾಪುರ-ಡಾಬಸ್‌ಪೇಟೆ ಮಧ್ಯೆ ನಿರ್ಮಿಸಲು ಉದ್ದೇಶಿಸಿರುವ KHR City (Knowledge Health, innovation and Research) ಕೂಡ ಈ ಕೈಗಾರಿಕಾ ನಗರದ ಭಾಗವಾಗುವುದೇ ? (ಈ ಬಗ್ಗೆ ಪೂರ್ಣ ಮಾಹಿತಿ ನೀಡುವುದು)

## ಸ್ಮಾರ್ಟ್ ಸಿಟಿ ಯೋಜನೆಯ ಮೂಲಸೌಕರ್ಯಗಳ ಅನುಷ್ಠಾನದ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೦೯ (೧೮೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸ್ಮಾರ್ಟ್ ಸಿಟಿ ಯೋಜನೆಗಳು ಯಾವುವು ; ಸ್ಮಾರ್ಟ್ ಸಿಟಿ ಯೋಜನೆಗಳಿಗೆ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ನೀಡಲಾದ ಅನುದಾನವೆಷ್ಟು ; (ವರ್ಷವಾರು ಪೂರ್ಣ ಮಾಹಿತಿ ನೀಡುವುದು)

(ಅ) ಕೇಂದ್ರ ಸರ್ಕಾರದ ಅನುದಾನ ಹೊರುತುಪಡಿಸಿ ರಾಜ್ಯದಿಂದ ನೀಡಿರುವ ಅನುದಾನ ಎಷ್ಟು ; ಈ ಅನುದಾನವನ್ನು ಯಾವ ವಿಭಾಗಗಳಿಗೆ ನೀಡಲಾಗಿದೆ ; (ವರ್ಷವಾರು ಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ಮತ್ತು ಬಾಕಿ ಉಳಿದಿರುವ ಕಾಮಗಾರಿಗಳು ಯಾವುವು ಈ ಕಾಮಗಾರಿಗಳು ವಿಳಂಬವಾಗಲು ಕಾರಣಗಳೇನು ; ಅಪೂರ್ಣಗೊಂಡಿರುವ ಕಾಮಗಾರಿಗಳಿಗೆ ನಿಗಧಿಪಡಿಸಿರುವ ಅನುದಾನವೆಷ್ಟು ; ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಯಾವ ಕಾಲಮಿತಿಯನ್ನು ನಿಗಧಿಪಡಿಸಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಈ) ಸ್ಮಾರ್ಟ್ ಸಿಟಿ ಮಾರ್ಗಸೂಚಿಗಳ ಪ್ರಕಾರ ಪ್ರಮುಖ ಮೂಲಭೂತ ಸೌಕರ್ಯಗಳು (Core Infrastructure Elements) ಯಾವುವು ; ಅವುಗಳಲ್ಲಿ ಯಾವ ಯಾವ ಮೂಲ ಸೌಕರ್ಯಗಳು ಅನುಷ್ಠಾನಕ್ಕೆ ಬಂದಿವೆ ; (ನಗರಗಳವಾರು ಮಾಹಿತಿ ನೀಡುವುದು)

(ಉ) ಸದರಿ ಕಾಮಗಾರಿಗಳ ಗುಣಮಟ್ಟವನ್ನು ಪರಿಶೀಲಿಸಲು ಯಾವ ಏಜೆನ್ಸಿಗಳಿಗೆ ಯಾವ ಯಾವ ಕಾಮಗಾರಿಗಳನ್ನು ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಸ್ಮಾರ್ಟ್ ಸಿಟಿ ಯೋಜನೆಯ ಅನುಷ್ಠಾನಕ್ಕೆ Special Purpose Vehicle ರಚಿಸಲಾಗಿದೆಯೇ ; ಸದರಿ Special Purpose Vehicleಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಯಾರು ? (ಅಧಿಕಾರಿಗಳ ಹೆಸರು ಮತ್ತು ಹುದ್ದೆಗಳ ವಿವರ ಮತ್ತು ಅವರಿಗೆ ಈವರೆವಿಗೂ ನೀಡಿರುವ ಮತ್ತು ನೀಡುತ್ತಿರುವ ವೇತನಗಳು ವಿವರವನ್ನು ಪ್ರತ್ಯೇಕವಾಗಿ ನೀಡುವುದು)

## ಕಲ್ಲು ಗಣಿಗಾರಿಕೆಯಿಂದ ಸಂಗ್ರಹವಾಗುತ್ತಿರುವ ರಾಜಧನದ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೧೦ (೧೮೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಲು ಗಣಿಗಾರಿಕೆ ನಡೆಸುತ್ತಿರುವ ಕ್ವಾರಿಗಳ ಮಾಲೀಕರು ತಾವು ಗುತ್ತಿಗೆ ಪಡೆದಿರುವ ಪ್ರದೇಶಕ್ಕಿಂತ ಹೆಚ್ಚಿನ ಜಾಗವನ್ನು ಒತ್ತುವರಿ ಮಾಡಿಕೊಂಡು ಅಕ್ರಮವಾಗಿ ಗಣಿಗಾರಿಕೆ ಮಾಡಿ ಸರ್ಕಾರಕ್ಕೆ ರಾಜಧನವನ್ನೂ ಪಾವತಿಸದೆ ೧೧ ಭಾರಿ ಪ್ರಮಾಣದ ಉಪ ಖನಿಜವನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಕ್ರಮವಾಗಿ ಗಣಿಗಾರಿಕೆ ಮಾಡಿದ ಮಾಲೀಕರಿಂದ ವಸೂಲಿ ಮಾಡಿದ ಒಟ್ಟು ದಂಡವೆಷ್ಟು ; ಮತ್ತು ಉಪ ಖನಿಜಗಳ ಮೇಲಿನ ರಾಜಧನವನ್ನು ಪಾವತಿಸದಿರುವುದರಿಂದ ಸರ್ಕಾರಕ್ಕೆ ಉಂಟಾದ ನಷ್ಟವೆಷ್ಟು ; (ಕಳೆದ ಐದು ವರ್ಷಗಳ ವರ್ಷವಾರು ಮಾಹಿತಿ ನೀಡುವುದು)

(ಇ) ಅನೇಕ ವರ್ಷಗಳಿಂದ ಬಾಕಿ ಇರುವ ಕ್ವಾರಿ ಮಾಲೀಕರಿಂದ ಸರ್ಕಾರಕ್ಕೆ ಆದ ನಷ್ಟವನ್ನು ವಸೂಲಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ಮತ್ತು ಕಳೆದ ಮೂರು ವರ್ಷಗಳಲ್ಲಿ ಈ ಕ್ವಾರಿ ಮಾಲೀಕರಿಂದ ಎಷ್ಟು ದಂಡ ವಸೂಲಿ ಮಾಡಲಾಗಿದೆ ? (ಕ್ವಾರಿಗಳ ಹೆಸರಿನೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

## ಜವಳಿ ಪಾರ್ಕ್ ಸ್ಥಾಪನೆ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೧ (೧೩೭) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ೨೦೨೪ನೇ ಸಾಲಿನ ಆಯವ್ಯಯದಲ್ಲೂ ಮೈಸೂರು ವಿಭಾಗದಲ್ಲಿ "ಜವಳಿ ಪಾರ್ಕ್‌ಗಳನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸುವ ಕುರಿತು ಪ್ರಸ್ತಾಪಿಸಿದ್ದು, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ವರುಣ ವಿಧಾನಸಭಾ ಕ್ಷೇತ್ರವು ಶೇಕಡಾ ೯೦ರಷ್ಟು ಗ್ರಾಮೀಣ ಪ್ರದೇಶ ಹೊಂದಿದ್ದು, ಈ ಭಾಗದಲ್ಲಿ ಪ್ರಸ್ತಾಪಿತ "ಜವಳಿ ಪಾರ್ಕ್"ನ್ನು ಸ್ಥಾಪಿಸಿದಲ್ಲಿ ಆ ಭಾಗದ ಗ್ರಾಮೀಣ ಮಹಿಳೆಯರಿಗೆ ಉದ್ಯೋಗಾವಕಾಶ ದೊರೆಯಲಿದ್ದು, ಈ ಕುರಿತು ಮುಂದೆ ಯಾವುದಾದರೂ ಪ್ರಸ್ತಾವವಿದೆಯೇ ? (ವಿವರ ನೀಡುವುದು)

## ಸಣ್ಣ ಕೈಗಾರಿಕೆಗಳ ಸ್ಥಾಪನೆ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೨ (೧೩೮) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಹೊಸದಾಗಿ ಸ್ಥಾಪನೆಯಾಗಿರುವ ಸಣ್ಣ ಕೈಗಾರಿಕೆಗಳಷ್ಟು ಈ ಕೈಗಾರಿಕೆಗಳ ಸ್ಥಾಪನೆಯಿಂದ ಸೃಷ್ಟಿಯಾದ ಒಟ್ಟು ಉದ್ಯೋಗಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವರುಣ ವಿಧಾನಸಭಾ ಕ್ಷೇತ್ರವು ಶೇಕಡಾ ೯೦ರಷ್ಟು ಗ್ರಾಮೀಣ ಪ್ರದೇಶ ಹೊಂದಿದ್ದು, ಈ ಭಾಗದಲ್ಲಿ ಪ್ರಸ್ತಾಪಿತ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಿದ್ದಲ್ಲಿ, ಆ ಭಾಗದ ಗ್ರಾಮೀಣ ಯುವಕ/ಯುವತಿಯರಿಗೆ ಉದ್ಯೋಗಾವಕಾಶ ದೊರೆಯಲಿದ್ದು, ಈ ಕುರಿತು ಸರ್ಕಾರದ ಮುಂದೆ ಏನಾದರೂ ಪ್ರಸ್ತಾವನೆಗಳಿವೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ FDI ಹೂಡಿಕೆ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೩ (೧೩೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಕ್ಕೆ ಕಳೆದ ೫ ವರ್ಷಗಳಲ್ಲಿ FDI/FPIರಡಿ ಎಷ್ಟು ಕೋಟಿ ಬಂಡವಾಳ ಹೂಡಿಕೆಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಅತಿ ಹೆಚ್ಚು ಹೂಡಿಕೆ ಮಾಡಿದ ಇಲಾಖೆ/ ವಲಯ ಯಾವುದು ; (ಇಲಾಖೆ/ವಲಯವಾರು ಮಾಹಿತಿ ನೀಡುವುದು)

(ಇ) ಕಳೆದ ೫ ವರ್ಷಗಳಲ್ಲಿ ಆದ ಒಟ್ಟು ಹೂಡಿಕೆಯಲ್ಲಿ ಗ್ರಾಮೀಣ ಪ್ರದೇಶಕ್ಕೆ ಆದ ಹೂಡಿಕೆ ಎಷ್ಟು ? (ಮಾಹಿತಿ ನೀಡುವುದು)

## ಸ್ಮಾರ್ಟ್ ಸಿಟಿ ಯೋಜನೆ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೪ (೧೪೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು "ಸ್ಮಾರ್ಟ್ ಸಿಟಿ" ಯೋಜನೆಗಳನ್ನು ಘೋಷಿಸಲಾಗಿದೆ ; (ಪೂರ್ಣ ವಿವರ ನೀಡುವುದು)

(ಆ) ಸ್ಮಾರ್ಟ್ ಸಿಟಿ ಯೋಜನೆಗಳಿಗೆ ಈವರೆಗೆ ನೀಡಿರುವ ಒಟ್ಟು ಅನುದಾನವೆಷ್ಟು ; ಈ ಒಟ್ಟು ಅನುದಾನದಲ್ಲಿ ಕೇಂದ್ರದಿಂದ ಬಂದ ಪಾಲೆಷ್ಟು ;

(ಇ) ಈವರೆಗೆ ರಾಜ್ಯದಲ್ಲಿ ಎಷ್ಟು ಸ್ಮಾರ್ಟ್ ಸಿಟಿ ಯೋಜನೆಗಳು ಪೂರ್ಣಗೊಂಡಿವೆ ; ಅಪೂರ್ಣಗೊಂಡಿದ್ದಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು ?

## ಬಿ.ಎಸ್.ಎಸ್.ಕೆ. ಕಾರ್ಖಾನೆ ಪ್ರಾರಂಭಿಸುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೫ (೨೧೪) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆ ಸ್ಥಗಿತಗೊಂಡಿರುವುದರಿಂದ ಕಬ್ಬು ಬೆಳೆದ ರೈತರು ಸಾಕಷ್ಟು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಕಾರ್ಖಾನೆ ಪ್ರಾರಂಭಿಸಲು ಕೈಗೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಆ) ಕೆ.ಕೆ.ಆರ್.ಡಿ.ಬಿ. ಅನುದಾನ ಬಳಕೆ ಮಾಡಿಕೊಂಡು ಕಾರ್ಖಾನೆ ಪ್ರಾರಂಭಿಸಲು ಸರ್ಕಾರಕ್ಕೆ ಏನು ತೊಂದರೆ ಇದೆ ;

(ಇ) ಕಾರ್ಖಾನೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು ? (ಮಾಹಿತಿ ನೀಡುವುದು)

## ಕಲ್ಲು ಗಣಿಗಾರಿಕೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೬ (೧೯೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಸಾಲಿನ ರಾಜ್ಯದಲ್ಲಿ ಹೊಸದಾಗಿ ಎಷ್ಟು ಕಲ್ಲು ಗಣಿಗಾರಿಕೆ ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲ್ಲುಗಣಿಗಾರಿಕೆ ಆರಂಭಿಸಲು ಸುರಕ್ಷತಾ ವಲಯ ಎಂದು ನೀಡಲು ಇರುವ ಮಾನದಂಡಗಳೇನು ; (ಮಾಹಿತಿ ನೀಡುವುದು)

(ಇ) ಸುರಕ್ಷತಾ ವಲಯ ಅಲ್ಲದಿದ್ದರೂ ಕೆಲವು ಕಡೆ ಕಲ್ಲು ಗಣಿಗಾರಿಕೆ ಅನಧಿಕೃತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಅವುಗಳ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಬಂಡವಾಳ ಹೂಡಿಕೆದಾರರ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೭ (೧೯೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಂಡವಾಳ ಹೂಡಿಕೆದಾರರ ಸಮಾವೇಶಗಳು ನಡೆದಿರುವುದು ನಿಜವೇ ;

(ಆ) ಹಾಗಿದ್ದರೆ, ೨೦೨೦-೨೧ ರಿಂದ ೨೦೨೩-೨೪ನೇ ಸಾಲಿನವರೆಗೆ ರಾಜ್ಯದಲ್ಲಿ ನಡೆದಿರುವ ಬಂಡವಾಳ ಹೂಡಿಕೆದಾರರ ಸಮಾವೇಶಗಳಲ್ಲಿ ಆದ ಒಪ್ಪಂದಗಳು ಯಾವುವು ; (ವಿವರ ನೀಡುವುದು)

(ಇ) ಇಲ್ಲಿಯವರೆಗೆ ಒಪ್ಪಂದ ಆದ ಕಂಪನಿಗಳಿಂದ ಅನುಷ್ಠಾನವಾಗಿರುವ ಯೋಜನೆಗಳು ಎಷ್ಟು ; (ವಿವರ ನೀಡುವುದು)

(ಈ) ಹೂಡಿಕೆಯ ಒಟ್ಟು ಮೊತ್ತ ಎಷ್ಟು ; ಸೃಷ್ಟಿಯಾದ ಉದ್ಯೋಗಗಳು ಎಷ್ಟು ? (ವಲಯವಾರು, ವರ್ಷವಾರು ಪ್ರತ್ಯೇಕ ವಿವರಗಳನ್ನು ನೀಡುವುದು)

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು):-**

೨೧೮ (೧೯೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ನೂತನವಾಗಿ ಪ್ರಾರಂಭಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಯಾವ ರೀತಿಯ ಪ್ರೋತ್ಸಾಹಕ ಯೋಜನೆಗಳಿವೆ ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಪ್ರಾರಂಭವಾಗಿರುವ ನೂತನ ಖಾಸಗಿ ಹಾಗೂ ಸರ್ಕಾರಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಸದರಿ ಕೈಗಾರಿಕೆಗಳಿಂದ ಎಷ್ಟು ಮೊತ್ತದ ಹಣ ಹೂಡಿಕೆಯಾಗಿದೆ ; (ವಿವರ ನೀಡುವುದು)

(ಈ) ನೂತನ ಕೈಗಾರಿಕೆಗಳ ಸ್ಥಾಪನೆಯಿಂದ ಸೃಷ್ಟಿಯಾಗಿರುವ ಉದ್ಯೋಗದ ಪ್ರಮಾಣ ಎಷ್ಟು ? (ವಿವರ ನೀಡುವುದು)

## ಮಲೆನಾಡು ಭಾಗದ ತೋಟಗಾರಿಕೆ ಬೆಳೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೯ (೧೮೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಲೆನಾಡು ಭಾಗಕ್ಕೆ ಬರುವ ಜಿಲ್ಲೆಗಳು ಯಾವುವು ಮತ್ತು ಸದರಿ ಭಾಗದ ಹವಾಗುಣಕ್ಕೆ ಒಗ್ಗುವಂತಹ ತೋಟಗಾರಿಕೆ ಬೆಳೆಗಳು ಯಾವುವು ; ಸದರಿ ಬೆಳಗಳನ್ನು ಬೆಳೆಯಲು ಸರ್ಕಾರದ ಉತ್ತೇಜನದ ಕ್ರಮಗಳೇನು ;

(ಆ) ಸದರಿ ಬೆಳೆಗಳನ್ನು ಎಷ್ಟು ಹೆಕ್ಟೇರ್ ಪ್ರದೇಶಗಳಲ್ಲಿ ಬೆಳೆಯ ಬಹುದಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಬೆಳೆಗಳಿಕೆ ಇರುವ ಪ್ರೋತ್ಸಾಹಧನವೇನು ಹಾಗೂ ಮಣ್ಣು ಪರೀಕ್ಷಾ ಕೇಂದ್ರಗಳು ಎಲ್ಲೆಲ್ಲಿವೆ ? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨೦ (೧೮೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೋಟಗಾರಿಕೆ ಇಲಾಖೆಯಲ್ಲಿ ಬರುವ ಪ್ರಸ್ತುತ ಯೋಜನೆಗಳಾವುವು; ಸದರಿ ಯೋಜನೆಗಳು ಯಾವ ಯಾವ ರೀತಿಯ ಫಲಾನುಭವಿಗಳಿಗೆ ತಲುಪುತ್ತಿವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ತೋಟಗಾರಿಕೆ ಇಲಾಖೆಯಿಂದ ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆಯಡಿ ಶ್ರೀಗಂಧ ಕೃಷಿಗೆ ಯಾವ ಯಾವ ರೀತಿಯ ಸಹಾಯಧನವನ್ನು ನೀಡಲಾಗುತ್ತಿದೆ ; ರೈತರು ಶ್ರೀಗಂಧ ಕೃಷಿಯನ್ನು ಮಾಡಲು ಇರುವ ಷರತ್ತು ಮತ್ತು ನಿಬಂಧನೆಗಳು ಯಾವುವು ;

(ಇ) ಶ್ರೀಗಂಧ ಗಿಡಗಳಿಗೆ ಸರ್ಕಾರದಿಂದ ನಿಗದಿಪಡಿಸಿರುವ ಬೆಲೆ ಎಷ್ಟು ಮತ್ತು ಯಾವ ಯಾವ ಸ್ಥಳಗಳಲ್ಲಿ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ ;

(ಈ) ಕೊಡಗು ಜಿಲ್ಲೆಯಲ್ಲಿ ಶ್ರೀಗಂಧ ಕೃಷಿಗೆ ನೀಡಿರುವ ಸಹಾಯಧನ ಎಷ್ಟು ? (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯ್ತಿಗಳನ್ನು ಮೇಲ್ದರ್ಜೆಗೇರಿಸುವ ಕುರಿತು

ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೨೨೧ (೨೨೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳನ್ನು ಜಿಲ್ಲಾಡಳಿತ ಸರ್ಕಾರಕ್ಕೆ ಸಲ್ಲಿಸಿದೆಯೇ ;

(ಆ) ಸಲ್ಲಿಸಿದ್ದಲ್ಲಿ, ಸದರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ನಿರ್ಧರಿಸಿದೆ ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಅನುಸರಿಸುವ ಮಾನದಂಡಗಳೇನು ? (ಇದಕ್ಕೆ ಸಂಬಂಧಿಸಿದ ಆದೇಶ ಪ್ರತಿಯನ್ನು ಒದಗಿಸುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸಹಕಾರ ಬ್ಯಾಂಕ್‌ಗಳಲ್ಲಿ ಸಾಲ ಪಡೆದವರ ವಿವರದ ಬಗ್ಗೆ

ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೨೨೨ (೨೩೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸಹಕಾರ ಬ್ಯಾಂಕುಗಳ ಸಂಖ್ಯೆ ಎಷ್ಟು; ಪ್ರಸ್ತುತ ಸಾಲಿನಲ್ಲಿ ಎಷ್ಟು ಜನ ರೈತರು ಬೆಳೆ ಸಾಲಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆ ;

(ಆ) ಬೆಳೆ ಸಾಲಕ್ಕಾಗಿ ಅರ್ಜಿ ಸಲ್ಲಿಸಿದ ರೈತರ ಪೈಕಿ ಇದುವರೆವಿಗೂ ಎಷ್ಟು ರೈತರಿಗೆ ಬೆಳೆ ಸಾಲ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಸಹಕಾರ ಬ್ಯಾಂಕುಗಳಲ್ಲಿ ರೈತರಿಗೆ ಯಾವ ಯಾವ ರೀತಿಯ ಸಾಲಗಳನ್ನು ನೀಡಲಾಗುತ್ತಿದೆ ಹಾಗೂ ಇದಕ್ಕೆ ವಿಧಿಸುವ ಬಡ್ಡಿ ದರವೆಷ್ಟು ಮತ್ತು ಸಾಲ ನೀಡಲು ಅನುಸರಿಸುವ ಮಾನದಂಡಗಳೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ ಪರವಾನಿಗೆ ಪಡೆದ ಕಲ್ಲು ಗಣಿಗಾರಿಕೆ ಮತ್ತು ಮರಳುಗಾರಿಕೆಗಳ ಬಗ್ಗೆ

ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

೨೨೩ (೨೩೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಪರವಾನಗಿ ಪಡೆದು ಕಲ್ಲು ಗಣಿಗಾರಿಕೆ ಮತ್ತು ಮರಳುಗಾರಿಕೆ ನಡೆಸುತ್ತಿರುವವರ ಸಂಖ್ಯೆ ಎಷ್ಟು ; ಈ ಪರವಾನಗಿ ಪಡೆಯಲು ಸರ್ಕಾರ

ನಿಗಧಿಪಡಿಸಿರುವ ಮಾನದಂಡಗಳೇನು ಮತ್ತು ಇವುಗಳಿಂದ ಸರ್ಕಾರಕ್ಕೆ ಪ್ರತಿ ವರ್ಷ ಎಷ್ಟು ರಾಜಸ್ವ ಬರುತ್ತಿದೆ ; (ವಿವರ ಒದಗಿಸುವುದು)

(ಆ) ಸದರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಪರವಾನಗಿದಾರರು ಪ್ರತಿ ವರ್ಷ ಸರ್ಕಾರಕ್ಕೆ ತೆರಿಗೆಯನ್ನು ಪಾವತಿಸಿದ್ದಾರೆಯೇ ಹಾಗೂ ತೆರಿಗೆ ಬಾಕಿ ಏನಾದರೂ ಇದೆಯೇ ; ಇದ್ದಲ್ಲಿ ಸಂಪೂರ್ಣ ವಿವರ ನೀಡುವುದು ;

(ಇ) ಬಾಕಿ ಉಳಿಸಿ ಕೊಂಡಿರುವ ತೆರಿಗೆಯನ್ನು ಯಾವ ಕಾಲಮಿತಿಯೊಳಗೆ ವಸೂಲಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ಜವಳಿ ಉದ್ಯಮದ ಅಭಿವೃದ್ಧಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೪ (೧೬೩) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 5 ವರ್ಷಗಳಲ್ಲಿ ಕೈಮಗ್ಗ ಹಾಗೂ ಜವಳಿ ಉದ್ಯಮದ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮವೇನು ಹಾಗೂ ಕೈಮಗ್ಗದ ಬಟ್ಟೆಗಳ ಪ್ರಚಾರ ಹಾಗೂ ಬಳಕೆ ಹೆಚ್ಚಾಗಲು ಕೈಗೊಂಡ ಕ್ರಮಗಳು ಯಾವುವು ;

(ಆ) ಶಾಲಾ ಮಕ್ಕಳಿಗೆ ಸಮವಸ್ತ್ರ ನೀಡುವಲ್ಲಿ ಕೈಮಗ್ಗದ ಬಟ್ಟೆಗಳನ್ನು ಬಳಸಲಾಗುತ್ತದೆಯೇ ; ಇಲ್ಲವಾದಲ್ಲಿ, ಬಳಸದಿರಲು ಕಾರಣಗಳೇನು ?

## ಸಿಂಗಲ್ ಸೈಟ್ ಲೇಔಟ್ ಕುರಿತು

**ಶ್ರೀ ಎಸ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೫ (೧೬೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರಗಳು ಸಣ್ಣ ಜಾಗಗಳಲ್ಲಿ ಕಡು ಬಡವರಿಗೆ ಮನೆಯನ್ನು ಕಟ್ಟಲು ಸಿಂಗಲ್ ಸೈಟ್ ಲೇಔಟ್ ಅನುಮತಿಯನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಿಂಗಲ್ ಸೈಟ್ ಲೇಔಟ್‌ಗಾಗಿ ಮನವಿ ಸಲ್ಲಿಸಿದ ಎಷ್ಟು ದಿನಗಳ ಒಳಗಾಗಿ ಅನುಮತಿಯನ್ನು ಸಂಬಂಧಿತ ನಗರಾಭಿವೃದ್ಧಿ ಪ್ರಾಧಿಕಾರಗಳು ನೀಡುತ್ತವೆ ; ಈ ಕುರಿತು ಇರುವ ನಿಯಮಗಳೇನು ;

(ಇ) ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

## ಕೃಷಿ ಸಾಲ ಕುರಿತು

**ಶ್ರೀ ಎಸ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೬ (೧೬೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೩೧/೧೦/೨೦೨೪ರ ವರೆಗೆ ಕಳೆದ ೧ ವರ್ಷದಲ್ಲಿ ರಾಜ್ಯದ ಎಷ್ಟು ಸಹಕಾರಿ ಬ್ಯಾಂಕುಗಳಲ್ಲಿ ಕೃಷಿ ಸಾಲ ವಿತರಿಸಲಾಗಿದೆ;

ವಿತರಿಸಿದ ಕೃಷಿ ಸಾಲದ ಒಟ್ಟು ಮೊತ್ತವೆಷ್ಟು ; ಎಷ್ಟು ಮೊತ್ತದ ಕೃಷಿ ಸಾಲವನ್ನು ರೈತರು ಮರುಪಾವತಿಸಿರುತ್ತಾರೆ ; (ಜಿಲ್ಲಾವಾರು ಫಲಾನುಭವಿಗಳ ವಿವರ ನೀಡುವುದು)

(ಆ) ೩೧.೧೦.೨೦೨೪ರ ವರೆಗೆ ಕಳೆದ ೧ ವರ್ಷದಲ್ಲಿ ರಾಜ್ಯದ ಸಹಕಾರಿ ಬ್ಯಾಂಕುಗಳಲ್ಲಿ ವಿತರಿಸಿದ ಕೃಷಿ ಸಾಲದ ಒಟ್ಟು ಮೊತ್ತವೆಷ್ಟು ? (ಜಿಲ್ಲಾವಾರು ಫಲಾನುಭವಿಗಳ ವಿವರ ನೀಡುವುದು)

## ಜಮೀನು ಭೂ ಸ್ವಾಧೀನ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೭ (೧೭೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವ ಉದ್ದೇಶದಿಂದ ರೈತರಿಂದ ಎಷ್ಟು ಜಮೀನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸ್ವಾಧೀನಪಡಿಸಿಕೊಂಡಿರುವ ಜಮೀನುಗಳಲ್ಲಿ ಎಷ್ಟು ಕೈಗಾರಿಕೆಗಳಿಗೆ ಇದುವರೆಗೆ ಜಮೀನು ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಜಮೀನುಗಳಲ್ಲಿ ಪ್ರಾರಂಭವಾದ ಕೈಗಾರಿಕೆಗಳ ಸಂಖ್ಯೆ ಎಷ್ಟು ; ಈ ಕೈಗಾರಿಕೆಗಳು ಎಷ್ಟು ಜನರಿಗೆ ಉದ್ಯೋಗ ನೀಡಿದೆ ? (ಕೈಗಾರಿಕೆಗಳ ಹೆಸರಿನೊಂದಿಗೆ ವಿವರ ನೀಡುವುದು)

## ಮೈಸೂರು ಗಂಧದ ಕಾರ್ಖಾನೆಯ ಅವ್ಯವಹಾರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೮ (೧೭೭) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಗಂಧದ ಕಾರ್ಖಾನೆಯಲ್ಲಿ ಲಾವಂಚ ಬೇರಿನ ತೈಲದ ಬಳಕೆಯನ್ನು ನಿಲ್ಲಿಸುವ ನಿರ್ಣಯವನ್ನು ಡಿಸೆಂಬರ್ ೨೦೨೦ರಲ್ಲೇ ಕೈಗೊಂಡಿದ್ದರೂ ಫೆಬ್ರವರಿ ೨೦೨೧ರಲ್ಲಿ ರೂ ೪.೮೭ ಕೋಟಿ ರೂಗಳ ಲಾವಂಚ ಬೇರಿನ ತೈಲವನ್ನು ಖರೀದಿಸಲು ಯಾವ ಕಾರಣಕ್ಕಾಗಿ ಆದೇಶ ನೀಡಲಾಯಿತು ; (ವಿವರ ನೀಡುವುದು)

(ಆ) ಮೈಸೂರು ಗಂಧದ ಕಾರ್ಖಾನೆಯಲ್ಲಿ ಲಾವಂಚ ಬೇರಿನ ತೈಲದ ಬಳಕೆಯನ್ನು ನಿಲ್ಲಿಸುವ ನಿರ್ಣಯವನ್ನು ಕೈಗೊಂಡ ಬಳಿಕವು ಕಾರ್ಖಾನೆಯಲ್ಲಿ ೧೭೩೭ ಕಿ.ಗ್ರಾಂಗಳ ದಾಸ್ತಾನೂ ಇದ್ದರೂ ಫೆಬ್ರವರಿ ೨೦೨೧ರಲ್ಲಿ ೧೮೯೩ ಕಿ.ಗ್ರಾಂ ಖರೀದಿಗೆ ಆದೇಶ ನೀಡಿದವರು ಯಾರು ; ಗುತ್ತಿಗೆದಾರನಿಗೆ ಲಾಭ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. O121/400 ಪ್ರತಿಗಳು/28-11-2024